# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 299 ₹4, WEDNESDAY, 24 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26





## ಕೆಂಪು ಸುಂದರಿಗೆ ಬಂಗಾರದ ಬೆಲೆ

### ಕ್ವಿಂಟಲ್ ಗೆ 61,999 ರೂ. ಮಾರಾಟ

ಹಾವೇರಿ: ಹಾವೇರಿ ಜಿಲ್ಲೆ ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಡಬ್ಬಿ ಮೆಣಸಿನಕಾಯಿ ಕ್ವಿಂಟಲ್ ಗೆ 61,999 ರೂ. ಗರಿಷ್ಠ ದರದಲ್ಲಿ ಮಾರಾಟವಾಗಿದ್ದು, ಸ್ಥಿರತೆ ಕಾಯ್ದುಕೊಂಡಿದೆ.

ಸೋಮವಾರ ಬ್ಯಾಡಗಿ ಎಪಿಎಂಸಿಗೆ 1,68,489 ಚೀಲಗಳಲ್ಲಿ 42,122 ಕ್ವಿಂಟಲ್ ಮೆಣಸಿನ ಕಾಯಿ ಮಾರಾಟಕ್ಕೆ ಬಂದಿದೆ. ಕಳೆದ ವಾರ 28,506 ಕ್ವಿಂಟಲ್ ಮೆಣಸಿನಕಾಯಿ ಮಾರಾಟಕ್ಕೆ ತರಲಾಗಿತ್ತು. ಈ ಹಂಗಾಮಿನಲ್ಲಿ ಮೊದಲ ಬಾರಿಗೆ 1.50 ಲಕ್ಷಕ್ಕೂ ಹೆಚ್ಚು ಚೀಲ ಮಾರಾಟಕ್ಕೆ ಬಂದಿದೆ.

ಕಡ್ಡಿ ಮೆಣಸಿನಕಾಯಿ ಕ್ವಿಂಟಲ್ ಗೆ 50,189 ರೂ.ಗೆ ಗರಿಷ್ಠ ದರದಲ್ಲಿ ಮಾರಾಟವಾಗಿದ್ದು, ಕಳೆದ ಗುರುವಾರಕ್ಕಿಂತ 4000 ರೂ. ಕಡಿಮೆಯಾಗಿದೆ. ಗುಂಟೂರು ತಳಿ ಮೆಣಸಿನ ಕಾಯಿ 18,129 ರೂ., ಡಬ್ಬಿ ಮೆಣಸಿನಕಾಯಿ 61,999 ರೂ. ಗರಿಷ್ಠ ದರದಲ್ಲಿ ಮಾರಾಟವಾಗಿ ಸ್ಥಿರತೆ ಕಾಯ್ದುಕೊಂಡಿವೆ.



## ಚೀನಾದಲ್ಲಿ 7.2 ತೀವ್ರತೆಯ ಭೂಕಂಪ ದೆಹಲಿಯಲ್ಲೂ ಕಂಪಿಸಿದ ಭೂಮಿ

ನವದೆಹಲಿ: ಚೀನಾದ ಕ್ಸಿನ್‌ಜಿಯಾಂಗ್‌ನ ದಕ್ಷಿಣ ಭಾಗದಲ್ಲಿ ಸೋಮವಾರ ರಾತ್ರಿ 7.2 ತೀವ್ರತೆಯ ಭೂಕಂಪ ಸಂಭವಿಸಿದ್ದು, ದೆಹಲಿ ಮತ್ತು ರಾಷ್ಟ್ರ ರಾಜಧಾನಿ ಪ್ರದೇಶದಲ್ಲಿ ಪ್ರಬಲ ಕಂಪನದ ಅನುಭವವಾಗಿದೆ.

ರಾತ್ರಿ 11 ಗಂಟೆಯ ಸುಮಾರಿಗೆ ಚೀನಾದಲ್ಲಿ 7.2 ತೀವ್ರತೆಯ ಭೂಕಂಪ ಸಂಭವಿಸಿದೆ. ದೆಹಲಿಯಲ್ಲೂ ಭೂಮಿ ಕಂಪಿಸಿದೆ. ಯಾವುದೇ ಗಾಯ ಅಥವಾ ನಷ್ಟದ ಬಗ್ಗೆ ವರದಿಯಾಗಿಲ್ಲ. 80 ಕಿಲೋಮೀಟರ್ ಆಳದಲ್ಲಿ ಭೂಕಂಪ ಸಂಭವಿಸಿದೆ ಎಂದು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ ಟ್ವೀಟ್ ಮಾಡಿದೆ.

ಕಳೆದ ಜನವರಿ 11 ರಂದು ಅಫ್ಘಾನಿಸ್ತಾನದಲ್ಲಿ 6.1 ತೀವ್ರತೆಯ ಭೂಕಂಪ ಸಂಭವಿಸಿತ್ತು. ಪರಿಣಾಮ ಉತ್ತರ ಭಾರತದ ಕೆಲವು ಭಾಗಗಳಲ್ಲಿ ಭೂಮಿ ಕಂಪಿಸಿದೆ ಎಂದು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ ತಿಳಿಸಿತ್ತು.

# ರಾಹುಲ್ ಗಾಂಧಿ ನ್ಯಾಯ್ ಯಾತ್ರೆಯ ಯಶಸ್ಸಿಗೆ ಬಿಜೆಪಿ ಹೆದರಿದೆ: ರೋಜಿ ಜ್ವಾನ್

ಬೆಳಗಾವಿ: 'ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ನಡೆದ ಭಾರತ್ ಜೋಡೊ ನ್ಯಾಯ ಯಾತ್ರೆ ಅಸ್ಸಾಂನಲ್ಲಿ ಸಾಗುತ್ತಿದ್ದಾಗ ರಾಹುಲ್ ಅವರ ಮೇಲೆ ಹಲ್ಲೆ ಮಾಡಲು ಬಿಜೆಪಿ ಕಾರ್ಯಕರ್ತರು ಯತ್ನಿಸಿದ್ದಾರೆ. ಬಿಜೆಪಿಗರ ನಡೆ ಖಂಡಿಸಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಕಾಂಗ್ರೆಸ್ ಕಚೇರಿಯಿಂದ ಸಂಗೊಳ್ಳಿ ರಾಯಣ್ಣ ವೃತ್ತದವರೆಗೂ ಮೆರವಣಿಗೆ ನಡೆಸಿದ ಪ್ರತಿಭಟನಕಾರರು, ಪ್ರಜಾಪ್ರಭುತ್ವದಲ್ಲಿ ಇದು ಘಟನೆ ತಲೆ ತಗ್ಗಿಸುವಂತದ್ದು, ತಪ್ಪಿಸ್ಥರ ವಿರುದ್ಧ ತಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದು ಅಸ್ಸಾಂ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.



ಎಐಸಿಸಿ ಕಾರ್ಯದರ್ಶಿ ರೋಜಿ ಜ್ವಾನ್ ಅವರು ಮಾತನಾಡಿ, ಭಾರತ್ ಜೋಡೋ ನ್ಯಾಯ್ ಯಾತ್ರೆಯ ಯಶಸ್ಸಿನಿಂದ ಆಡಳಿತಾರೂಢ ಬಿಜೆಪಿ ಹೆದರಿದೆ. 2022–23ರಲ್ಲಿ ಪಕ್ಷದ ಮೊದಲ ಭಾರತ್ ಜೋಡೋ ಯಾತ್ರೆಯು ಹಲವಾರು ಬಿಜೆಪಿ ಆಡಳಿತದ ರಾಜ್ಯಗಳ ಮೂಲಕ ಸಾಗಿದೆ. ಆದರೆ, ಯಾತ್ರೆ ವೇಳೆ ಯಾವುದೇ ಕಲ್ಲು ತೂರಾಟದ ಘಟನೆ ನಡೆದಿರಲಿಲ್ಲ. ಹಲವು ರಾಜ್ಯಗಳನ್ನು ದಾಟಿದರೂ ಯಾರೂ ನಮಗೆ ಬೆದರಿಕೆ ಹಾಕಲು ಪ್ರಯತ್ನಿಸಲಿಲ್ಲ.

'ಅಸ್ಸಾಂನಲ್ಲಿ ಯಾತ್ರೆ ಸಾಗುತ್ತಿದ್ದ ಸಂದರ್ಭದಲ್ಲಿ ಬಿಜೆಪಿ ಕಾರ್ಯಕರ್ತರು ರಾಹುಲ್ ಗಾಂಧಿ ಮೇಲೆ ಹಲ್ಲೆ ಮಾಡಲು ಯತ್ನಿಸಿದ್ದಾರೆ. ಇದು ಖಂಡನೀಯ. ಅಸ್ಸಾಂ ಸರ್ಕಾರವು ಹಲ್ಲೆಗೆ ಯತ್ನಿಸಿದ ಬಿಜೆಪಿ ಕಾರ್ಯಕರ್ತರನ್ನು ಬಂಧಿಸಿ ಕಾನೂನು ಕ್ರಮ ತೆಗೆದುಕೊಳ್ಳಬೇಕು' ಎಂದು ಆಗ್ರಹಿಸಿದರು.

ಘಟನೆ ನಡೆದು 24 ಗಂಟೆಯಾದರೂ ಕ್ರಮಕೈಗೊಂಡಿಲ್ಲ, ನಾವು ಘಟನೆಯನ್ನು ತೀವ್ರವಾಗಿ ಖಂಡಿಸುತ್ತೇವೆ. ಈ ಬಗ್ಗೆ ಕೂಡಲೇ ತನಿಖೆ ನಡೆಸಬೇಕು. ಪೊಲೀಸ್ ತನಿಖೆಯ ಮೇಲೆ ನಮಗೆ ನಂಬಿಕೆಯಿಲ್ಲ. ನ್ಯಾಯಾಂಗ ತನಿಖೆ ನಡೆಸಬೇಕೆಂದು ಒತ್ತಾಯಿಸಿದರು.

**ಇದು ಪ್ರಜಾಪ್ರಭುತ್ವದ ಕಗ್ಗೊಲೆ**

ಜಿಲ್ಲಾ ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷರಾದ ವಿನಯ ನಾವಲಗಟ್ಟಿ ಮಾತನಾಡಿ, 'ಈ ಪ್ರಕರಣದಲ್ಲಿ ಬಿಜೆಪಿ ಕಾರ್ಯಕರ್ತರು ಗೂಂಡಾ ಪ್ರವೃತ್ತಿ ಮೆರೆದಿದ್ದಾರೆ. ಬ್ರಿಟಿಷರಿಗೆ ಎದೆಹೊಡಿ ಸ್ವಾತಂತ್ರ್ಯವನ್ನು ಪಡೆದುಕೊಂಡಿದ್ದೆವೆ. ಬಿಜೆಪಿ ಬೆದರಿಕೆಗೆ ಹೆದರುವ ಮಾತೇ ಇಲ್ಲ.

'ರಾಹುಲ್ ಗಾಂಧಿಯವರ ಯಾತ್ರೆ ಯಶಸ್ವಿಯಾಗಿ ನಡೆಯುತ್ತಿರುವುದನ್ನು ಸಹಿಸದೆ ಬಿಜೆಪಿಯವರು ಗೂಂಡಾಗಳನ್ನು ಬಿಟ್ಟು ಹಲ್ಲೆ ಮಾಡಲು ಯತ್ನಿಸಿದ್ದಾರೆ. ಇದು ಪ್ರಜಾಪ್ರಭುತ್ವದ ಕಗ್ಗೊಲೆ' ಎಂದು ದೂರಿದರು.

ಈ ಸಂದರ್ಭದಲ್ಲಿ ಶಾಸಕ ಆಸೀಫ್ ಸೇಠ, ಎಂಎಲ್ ಸಿ ಚನ್ನರಾಜ ಹಟ್ಟಿಹೊಳ್ಳಿ, ಕಿರಣ ಸಾದುನ್ನವರ, ಕಾಂಗ್ರೆಸ್ ಮುಖಂಡ ಮಹಾತೇಂಶ ಕಡಾಡಿ ಜಯಶ್ರೀ ಮಾಳಗಿ, ಆಯಿಶಾ ಸನ್ನದಿ, ಕಾರ್ತಿಕ ಪಾಟೀಲ ಹಾಗೂ ಇತರರು ಇದ್ದರು.

## ಅಯೋಧ್ಯೆ: ರಾಮ ಲಲ್ಲಾಗೆ 11 ಕೋಟಿ ರೂ. ಮೌಲ್ಯದ ಚಿನ್ನದ ಕಿರೀಟ ಅರ್ಪಿಸಿದ ಸೂರತ್ ಉದ್ಯಮಿ



ಅಯೋಧ್ಯೆ: ರಾಮ ಜನ್ಮಭೂಮಿ ಅಯೋಧ್ಯೆಯಲ್ಲಿ ನಿರ್ಮಿಸ ಲಾಗಿರುವ ರಾಮಮಂದಿರದಲ್ಲಿ ರಾಮ ಲಲ್ಲಾ ವಿರಾಜಮಾನನಾಗಿದ್ದಾನೆ. ಪ್ರಧಾನಿ ನರೇಂದ್ರ ಮೋದಿ ಅವರು ಜನವರಿ 22ರಂದು ರಾಮ ಲಲ್ಲಾನಿಗೆ ಪ್ರಾಣ ಪ್ರತಿಷ್ಠೆ ನೆರವೇರಿಸಿದ್ದಾರೆ.


ಆ ಮೂಲಕ ಕೋಟ್ಯಂತರ ಭಾರತೀಯರ 500 ವರ್ಷಗಳ ಕನಸು ನನಸಾದಂತಾಗಿದೆ. ಇದರ ಬೆನ್ನಲ್ಲೇ, ಗುಜರಾತ್ ಮೂಲದ ವಜ್ರದ ವ್ಯಾಪಾರಿ ಮುಕೇಶ್ ಪಟೇಲ್ ಎಂಬುವರು ರಾಮಲಲ್ಲಾನಿಗೆ ಸುಮಾರು 11 ಕೋಟಿ ರೂ. ಮೌಲ್ಯದ ಚಿನ್ನದ ಕಿರೀಟವನ್ನು ಉಡುಗೊರೆಯಾಗಿ ನೀಡಿದ್ದಾರೆ.

ಸೂರತ್‌ನಲ್ಲಿ ಗ್ರೀನ್ ಲ್ಯಾಬ್ ಡೈಮಂಡ್ ಕಂಪನಿಯ ಮಾಲೀಕರಾಗಿರುವ, ರಾಮನ ಮೇಲೆ ಅಪಾರ ನಂಬಿಕೆ ಇಟ್ಟಿರುವ ಮುಕೇಶ್ ಪಟೇಲ್ ಕುಟುಂಬಸ್ಥರು 11 ಕೋಟಿ ರೂ. ಮೌಲ್ಯದ ಚಿನ್ನದ ಕಿರೀಟವನ್ನು ಕೊಡುಗೆಯಾಗಿ ಕೊಟ್ಟು ರಾಮನ ಮೇಲಿನ ಭಕ್ತಿ ಮೆರೆದಿದ್ದಾರೆ.

ಚಿನ್ನ, ಮುತ್ತುಗಳು ಹಾಗೂ ವಜ್ರಗಳಿಂದ ಉತ್ತರ ಭಾರತ ಶೈಲಿಯಲ್ಲಿ ಕಿರೀಟವನ್ನು ತಯಾರಿಸಲಾಗಿದೆ. ಮುಕೇಶ್ ಪಟೇಲ್ ಅವರ ಕಂಪನಿಯ ಇಬ್ಬರು ಉದ್ಯೋಗಿಗಳು ಅಯೋಧ್ಯೆಗೆ ಬಂದು, ರಾಮಲಲ್ಲಾ ಮೂರ್ತಿಯ ಅಳತೆಯನ್ನು ತೆಗೆದುಕೊಂಡು ಹೋಗಿದ್ದಾರೆ. ಇದಾದ ಬಳಿಕ ಕಿರೀಟವನ್ನು ತಯಾರಿಸಲಾಗಿದೆ ಎಂದು ತಿಳಿದುಬಂದಿದೆ.

ನಮ್ಮ ಇಡೀ ಕುಟುಂಬವು ರಾಮನ ಮೇಲೆ ಅಪಾರ ಭಕ್ತಿಯನ್ನು ಹೊಂದಿದೆ. ನಮ್ಮ ಪೂರ್ವಜರು ಕೂಡ ಅಯೋಧ್ಯೆಯಲ್ಲೊಂದು ರಾಮಮಂದಿರ ನಿರ್ಮಾಣವಾಗಬೇಕು ಎಂಬ ಕನಸು ಕಂಡಿದ್ದರು. ರಾಮಮಂದಿರದ ಕನಸು ಈಗ ನನಸಾಗಿದೆ. ಇದರಿಂದ ನಮ್ಮ ಕುಟುಂಬವು ಸಂತಸದ ಕಡಲಲ್ಲಿ ಮುಳುಗಿಸಿದೆ. ಭಗವಾನ್ ಶ್ರೀರಾಮನು ನಮಗೆ ಸಾಕಷ್ಟು ಕೊಟ್ಟಿದ್ದಾನೆ. ಈಗ ನಾವು ರಾಮಲಲ್ಲಾನಿಗೆ ಕಿರೀಟ ನೀಡುವ ಮೂಲಕ ಸಣ್ಣ ಕೊಡುಗೆ ಕೊಟ್ಟಿದ್ದೇವೆ. ರಾಮನ ದರ್ಶನ ಪಡೆದಿರುವುದು ಕೂಡ ನಮ್ಮ ಸೌಭಾಗ್ಯ" ಎಂದು ಮುಕೇಶ್ ಪಟೇಲ್ ಅವರು ಸಂತಸ ವ್ಯಕ್ತಪಡಿಸಿದ್ದಾರೆ.

## ಮೂರು ಮರಿಗಳಿಗೆ ಜನ್ಮ ನೀಡಿದ ನಮೀಬಿಯಾ ಚಿರತೆ ಆಶಾ



ನವದೆಹಲಿ: ಮಧ್ಯಪ್ರದೇಶದ ಕುನೊ ರಾಷ್ಟ್ರೀಯ ಉದ್ಯಾನವನದಲ್ಲಿ ನಮೀಬಿಯಾದ ಚಿರತೆಯೊಂದು ಮೂರು ಮರಿಗಳಿಗೆ ಜನ್ಮ ನೀಡಿದೆ. ಕೇಂದ್ರ ಪರಿಸರ ಸಚಿವ ಭೂಪೇಂದರ್ ಯಾದವ್ ಅವರು ಎಕ್ಸ್‌ನಲ್ಲಿ ಈ ಸುದ್ದಿ ಹಂಚಿಕೊಂಡಿದ್ದಾರೆ, ಕುನೋನ ಹೊಸ ಮರಿಗಳು! ನಮೀಬಿಯಾ ಚಿರತೆ ಆಶಾ ತನ್ನ ಮರಿಗಳಿಗೆ ಜನ್ಮ ನೀಡಿದ ಕೆಲವೇ ವಾರಗಳಲ್ಲಿ ನಮೀಬಿಯಾದ ಚಿರತೆ ಜ್ವಾಲಾ ಮೂರು ಮರಿಗಳಿಗೆ ಜನ್ಮ ನೀಡಿದೆ ಎಂದು ಅವರು ಪೋಸ್ಟ್ ಮಾಡಿದ್ದಾರೆ.

ದೇಶಾದ್ಯಂತ ಎಲ್ಲಾ ವನ್ಯಜೀವಿ ಮುಂಚೂಣಿ ಯೋಧರು ಮತ್ತು ವನ್ಯಜೀವಿ ಪ್ರೇಮಿಗಳಿಗೆ ಅಭಿನಂದನೆಗಳು. ಭಾರತದ ವನ್ಯಜೀವಿಗಳು ಅಭಿವೃದ್ಧಿ ಹೊಂದಲಿ ಎಂದು ಅವರು ಆಶಿಸಿದ್ದಾರೆ. ಜನವರಿ 3 ರಂದು ಕುನೊ ರಾಷ್ಟ್ರೀಯ ಉದ್ಯಾನವನದ ಅಧಿಕಾರಿಗಳು ನಮೀಬಿಯಾದ ಚಿರತೆ ಆಶಾ ಮೂರು ಮರಿಗಳಿಗೆ ಜನ್ಮ ನೀಡಿದೆ ಎಂದು ವರದಿ ಮಾಡಿದರು.

ಇದಕ್ಕೂ ಮುನ್ನ ಕಳೆದ ಮಾರ್ಚ್‌ನಲ್ಲಿ ಸಿಯಾಯಾ ಎಂಬ ಚಿರತೆ ನಾಲ್ಕು ಮರಿಗಳಿಗೆ ಜನ್ಮ ನೀಡಿತ್ತು. ಆದರೆ, ಅದರಲ್ಲಿ ಒಂದು ಮರಿ ಬದುಕುಳಿದಿತ್ತು.

ಜ್ವಾಲಾ, ಆಶಾ ಮತ್ತು ಸಿಯಾಯಾ ಚೀತಾಗಳು ನಮೀಬಿಯಾದಿಂದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಪ್ರಾಜೆಕ್ಟ್ ಚೀತಾ ಅಡಿಯಲ್ಲಿ ಭಾರತಕ್ಕೆ ಸ್ಥಳಾಂತರಗೊಂಡಿವೆ, ಇದು ಸ್ವತಂತ್ರ ಭಾರತದಲ್ಲಿ ಅಳಿವಿನಂಚಿನಲ್ಲಿರುವ ಏಕೈಕ ದೊಡ್ಡ ಮಾಂಸಾಹಾರಿ ಜಾತಿಗಳನ್ನು ಮರು–ಪರಿಚಯಿಸುವ ಗುರಿಯನ್ನು ಹೊಂದಿದೆ.

## ಮಿಜೋರಾಂನಲ್ಲಿ ವಿಮಾನ ಪತನ: ರನ್ವೇಯಿಂದ ಹೊಲಕ್ಕೆ ನುಗ್ಗಿದ ವಿಮಾನ



ದೆಹಲಿ: ರನ್ವೇಯಿಂದ ಜಾರಿದ ವಿಮಾನವೊಂದು ಹೊಲಕ್ಕೆ ಹೋಗಿ ಅಪ್ಪಳಿಸಿದ ಘಟನೆ ಮಿಜೋರಾಂ ಲೆಂಗ್ಪುಯಿ ಎರ್ಪೋರ್ಟ್ ಬಳಿ ನಡೆದಿದೆ. ಮಯನ್ಮಾರ್ ವಿಮಾನವನ್ನು ಅಪಘಾತಕ್ಕೆ ಒಳಗಾಗಿದೆ.

ಮಯನ್ಮಾರ್ ಬಂಡುಕೋರರು ನಡೆಸಿದ ಗಲಭೆ ವೇಳೆ ಜೀವ ಉಳಿಸಿಕೊಳ್ಳುವ ಸಲುವಾಗಿ ಸೇನಾ ಸಿಬ್ಬಂದಿ ಇಶಾನ್ಯದಲ್ಲಿ ಆಶ್ರಯ ಪಡೆದಿದ್ದರು.

ಇವರನ್ನು ಏರ್ಲಿಫ್ಟ್ ಮಾಡುವ ಸಂಬಂಧ ಮಯನ್ಮಾರ್ ವಿಮಾನವು ಮಿಜೋರಾಂಗೆ ವಿಮಾನ ನಿಲ್ದಾಣಕ್ಕೆ ಬಂದಿತ್ತು. ಇಲ್ಲಿಂದ ಹೊರಡುವ ವೇಳೆ ರನ್ವೇ ನಿಂದ ಜಾರಿ ಅನಾಹುತ ಸಂಭವಿಸಿದೆ

ಭಾರತವು ನಿನ್ನೆ ಸುಮಾರು 184 ಮಯನ್ಮಾರ್ ಸೈನಿಕರನ್ನು ಸುರಕ್ಷಿತವಾಗಿ ತವರಿಗೆ ಕಳುಹಿಸಿದೆ. ಅಸ್ಸಾಂ ರೈಫಲ್ಸ್ ನೀಡಿರುವ ಮಾಹಿತಿ ಪ್ರಕಾರ ಮಯನ್ಮಾರ್‌ನಲ್ಲಿ ಉಂಟಾದ ಘರ್ಷಣೆ ಬೆನ್ನಲ್ಲೇ, ಅಲ್ಲಿಂದ ಒಟ್ಟು 276 ಯೋಧರು ಭಾರತವನ್ನು ಪ್ರವೇಶ ಮಾಡಿದ್ದಾರೆ. ಅವರಲ್ಲಿ 184 ಸಿಬ್ಬಂದಿಯನ್ನು ವಾಪಸ್ ಕಳುಹಿಸಲಾಗಿದೆ. 92 ಯೋಧರನ್ನು ಕಳುಹಿಸಲು ಭಾರತೀಯ ಸೇನೆ ನಿರ್ಧರಿಸಿತ್ತು.

ಜನವರಿ 17 ರಂದು ಮಯನ್ಮಾರ್ ಸೈನಿಕರು ಭಾರತಕ್ಕೆ ಬಂದಿದ್ದಾರೆ. ಭಾರತ–ಮಯನ್ಮಾರ್–ಬಾಂಗ್ಲಾದೇಶ ನಡುವಿನ ಗಡಿ ಮೂಲಕ ಮಿಜೋರಾಂ ಪ್ರವೇಶ ಮಾಡಿದ್ದಾರೆ. ಇವರು ಭಾರತದ ಅಸ್ಸಾಂ ರೈಫಲ್ಸ್ನ ಸಂಪರ್ಕಿಸಿ ಸಲಹೆ ಪಡೆದು ಭಾರತಕ್ಕೆ ಬಂದಿದ್ದಾರೆ. ಭಾರತಕ್ಕೆ ಪ್ರವೇಶ ಮಾಡಿರುವ ಅಲ್ಲಿನ ಸೈನಿಕರನ್ನು ಅಸ್ಸಾಂ ರೈಫಲ್ಸ್ ಪರ್ವ ಕ್ಯಾಂಪ್ನಲ್ಲಿ ಇಟ್ಟಿತ್ತು.

## ಬೆಂಗಳೂರು: ಮದ್ಯ ಸೇವಿಸಿ ಚಾಲನೆ; 16 ಶಾಲಾ ವಾಹನ ಚಾಲಕರ ವಿರುದ್ಧ ಪ್ರಕರಣ ದಾಖಲು




ಬೆಂಗಳೂರು: ಮದ್ಯ ಸೇವಿಸಿ ವಾಹನ ಚಲಾಯಿಸುತ್ತಿದ್ದ 16 ಶಾಲಾ ವಾಹನ ಚಾಲಕರ ವಿರುದ್ಧ ಬೆಂಗಳೂರು ಸಂಚಾರ ಪೊಲೀಸರು ವಿಶೇಷ ಅಭಿಯಾನದಲ್ಲಿ ಪ್ರಕರಣ ದಾಖಲಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆಂಗಳೂರು ಸಂಚಾರ ಪೊಲೀಸರು ಬೆಳಿಗ್ಗೆ 7 ರಿಂದ 9.30ರ ನಡುವೆ 3,414 ಶಾಲಾ ವಾಹನ ಚಾಲಕರನ್ನು ಪರೀಕ್ಷಿಸಲಾಗಿದ್ದು ಈ ವೇಳೆ 16 ಶಾಲಾ ವಾಹನ ಚಾಲಕರು ಮದ್ಯ ಸೇವಿಸಿರುವುದು ಪತ್ತೆಯಾಗಿದೆ. ಕುಡುಕ ಚಾಲಕರ ವಿರುದ್ಧ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 279 ಮತ್ತು ಮೋಟಾರು ವಾಹನ ಕಾಯ್ದೆ185ರ (ಕುಡಿದು ವಾಹನ ಚಲಾವಣೆ) ಅಡಿಯಲ್ಲಿ ಎಂದು ಜಂಟಿ ಪೊಲೀಸ್ ಆಯುಕ್ತ (ಸಂಚಾರ) ಎಂ ಎನ್ ಅನುಚೇತ್ ತಿಳಿಸಿದ್ದಾರೆ.


ಸಂಬಂಧಪಟ್ಟ ಚಾಲಕರ ಚಾಲನಾ ಪರವಾನಗಿಯನ್ನು ಅಮಾನತುಗೊಳಿಸಲು ಆಯಾ ಆರ್ಟಿಒಗಳಿಗೆ ಕಳುಹಿಸಲಾಗಿದೆ ಎಂದು ಅನುಚೇತ್ ಹೇಳಿದರು.

## ಗೋವಾದಿಂದ ಅಕ್ರಮವಾಗಿ 50 ಲಕ್ಷ ಮೌಲ್ಯದ ಮದ್ಯ ಸಾಗಾಟ: ಬೆಳಗಾವಿ ಮೂಲದ ಇಬ್ಬರ ಬಂಧನ



ಬೆಂಗಳೂರು: ಗೋವಾದಿಂದ ಅಕ್ರಮವಾಗಿ ಮದ್ಯ ಸಾಗಿಸುತ್ತಿದ್ದ ಇಬ್ಬರನ್ನು ಬಂಧಿಸಿರುವ ಅಬಕಾರಿ ಪೊಲೀಸರು 3240 ಲೀಟರ್ ಮದ್ಯ ವಶಪಡಿಸಿಕೊಂಡಿದ್ದಾರೆ. ಬೆಳಗಾವಿ ಮೂಲದ ಆರೋಪಿಗಳಾದ ಪರಮೇಶ್ವರ್ ದೇವಪ್ಪ ನಾಯಕ ಹಾಗೂ ವಾಹನ ಚಾಲಕ ಅಮೀತ ಪಡತಾರೆ ಎಂಬುವವರನ್ನು ಬಂಧಿಸಲಾಗಿದ್ದು, ಕೃತ್ಯಕ್ಕೆ ಬಳಸಿದ್ದ ವಾಹನವನ್ನು ಜಪ್ತಿ ಮಾಡಲಾಗಿದೆ. ಅಬಕಾರಿ ಜಂಟಿ ಆಯುಕ್ತ ಎ.ಎಲ್.ನಾಗೇಶ್ ಅವರ ಮಾರ್ಗದರ್ಶನದಲ್ಲಿ ಉಪ ಆಯುಕ್ತ ವೀರಣ್ಣ ಬಾಗೇವಾಡಿ ನೇತೃತ್ವದಲ್ಲಿ ವಲಯ–30ರ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ಕೈಗೊಂಡ ಮಹದೇವಪುರ ವಲಯ ನಿರೀಕ್ಷಕರಾದ ಅಬೂಬಕರ್ ಮುಜಾವರ್ ಅವರ ನೇತೃತ್ವದ ತಂಡ ಹಳೆ ಮದ್ರಾಸ್ ರಸ್ತೆ, ದೂರವಾಣಿ ನಗರದ ಬಿಎಂಟಿಸಿ ಡಿಪೋ–24ರ ಬಳಿ ವಾಹನವನ್ನು ತಡೆದು ಪರಿಶೀಲಿಸಿದಾಗ ಅಕ್ರಮ ಮದ್ಯ ಸಾಗಾಟ ಕಂಡುಬಂದಿದೆ. ಮೇಲ್ನೋಟಕ್ಕೆ ಇದು ನಕಲಿ ಮದ್ಯವೆಂದು ಕಾಣುತ್ತಿದ್ದು, ತನಿಖೆ ಕೈಗೊಳ್ಳಲಾಗಿದೆ. ವಶಪಡಿಸಿಕೊಂಡ ಮದ್ಯದ ಮಾಲು ಸುಮಾರು 50 ಲಕ್ಷ ರೂ. ಎಂದು ತಿಳಿದುಬಂದಿದೆ. ಪ್ರಕರಣ ದಾಖಲಿಸಿಕೊಂಡು ಬಂಧಿತ ಆರೋಪಿಗಳನ್ನು ವಿಚಾರಣೆಗೊಳಪಡಿಸಲಾಗಿದೆ.

## ಬಿಯರ್ ಬೆಲೆ ಮತ್ತೆ ಏರಿಸಲು ಮುಂದಾದ ಅಬಕಾರಿ ಇಲಾಖೆ



ಬೆಂಗಳೂರು: ಅಬಕಾರಿ ಇಲಾಖೆ ಮತ್ತೆ ಬಿಯರ್ ಮೇಲಿನ ಬೆಲೆ ಏರಿಸಲು ಮುಂದಾಗಿದ್ದು, ಮದ್ಯ ಪ್ರಿಯರಿಗೆ ಈ ವಿಚಾರ ಶಾಕ್ ನೀಡಿದೆ.

ಅಬಕಾರಿ ಇಲಾಖೆಯಂತೂ ನೂತನ ದರ ಏರಿಕೆ ಹೆಚ್ಚಳದ ಮೂಲಕ ಆರ್ಥಿಕ ಸಂಪನ್ಮೂಲ ಕ್ರೋಢೀಕರಣಕ್ಕೆ ಮುಂದಾಗಿದೆ. 650 ಒಐ ಬಾಟಲಿನ ಬಿಯರ್ ಗೆ 8ರಿಂದ 10 ರೂಪಾಯಿ ಏರಿಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ರಾಜ್ಯಪತ್ರದಲ್ಲಿ ಕರ್ನಾಟಕ ಅಬಕಾರಿ (ಸುಂಕಗಳು ಮತ್ತು ಶುಲ್ಕಗಳು) ನಿಯಮಕ್ಕೆ ತಿದ್ದುಪಡಿ 2024ರ ಕರಡನ್ನು ಹೊರಡಿಸಿದೆ. ಬಿಯರ್ ಮೇಲಿನ ಅಬಕಾರಿ ತೆರಿಗೆ ಮೂಲ ದರದ ಶೇಕಡಾ 185 ರಿಂದ ಶೇಕಡಾ 195 ಕ್ಕೆ ಏರಿಕೆ ಮಾಡಲು ಮುಂದಾಗಿದ್ದು, ಕರಡು ಪ್ರತಿಗೆ ಆಕ್ಷೇಪಣೆ ಸಲ್ಲಿಸಲು ಏಳು ದಿನಗಳ ಕಾಲಾವಕಾಶ ನೀಡಲಾಗಿದೆ. ಅದರ ಜೊತೆಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವನ್ನು ನೀಡಲಾಗಿದೆ.

# ವರ್ಗಾವಣೆ ದಂಧೆ ಆರೋಪ: ಸಚಿವ ಆರ್.ಬಿ ತಿಮ್ಮಾಪುರ ವಿರುದ್ಧ ಜಾರಿ ನಿರ್ದೇಶನಾಲಯಕ್ಕೆ ದೂರು

ಬೆಂಗಳೂರು: ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಮತ್ತೆ ವರ್ಗಾವಣೆ ದಂಧೆ ಆರೋಪ ಕೇಳಿಬಂದಿದ್ದು, ಈ ಸಂಬಂಧ ಅಬಕಾರಿ ಖಾತೆ ಸಚಿವ ಆರ್ಬಿ.ತಿಮ್ಮಾಪುರ ವಿರುದ್ಧ ಜಾರಿ ನಿರ್ದೇಶನಾಲಯಕ್ಕೆ ದೂರು ದಾಖಲಾಗಿದೆ.

ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ಎಂಬವವರು ಅಬಕಾರಿ ಖಾತೆ ಸಚಿವ ಆರ್ಬಿ.ತಿಮ್ಮಾಪುರ ವಿರುದ್ಧ ಜಾರಿ ನಿರ್ದೇಶನಾಲಯಕ್ಕೆ ದೂರು ಸಲ್ಲಿಸಿದ್ದಾರೆ. ಅಬಕಾರಿ ಇಲಾಖೆ ಡಿಸಿ, ಡಿವೈಎಸ್ಪಿಗಳಿಂದ ಹಣ ಪಡೆದು ವರ್ಗಾವಣೆ ದಂಧೆ ಮಾಡುತ್ತಿದ್ದಾರೆ ಎಂದು ಆರೋಪಿಸಿ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ದೂರು ಸಲ್ಲಿಸಿದ್ದಾರೆ.

ದೂರಿನಲ್ಲಿರುವಂತೆ ಸಚಿವ ತಿಮ್ಮಾಪುರ ಅವರು ಲೋಕಸಭಾ ಚುನಾವಣೆಗೆ ಹಣ ಹೊಂದಿಸಲು ಇಲಾಖಾಧಿಕಾರಿಗಳ ವರ್ಗಾವಣೆಗೆ ಲಂಚ ಸ್ವೀಕರಿಸಿದ್ದಾರೆ. ವರ್ಗಾವಣೆ ಹೆಸರಿನಲ್ಲಿ ದಂಧೆ ನಡೆಸುತ್ತಿದ್ದಾರೆ. ಇಲ್ಲಿವರೆಗೆ 18 ಕೋಟಿ ಲಂಚ ಸ್ವೀಕರಿಸಿದ್ದಾರೆ. ಲಂಚದ ಹಣದಲ್ಲಿ ಸಚಿವರಿಗೆ ಸಿಂಹಪಾಲು ನೀಡಲಾಗಿದೆ. 18 ಕೋಟಿ ಹಣದಲ್ಲಿ 13 ಕೋಟಿ ಸಚಿವರ ಖಾತೆಗೆ ಬಿದ್ದಿದೆ. ಉಳಿದ ಹಣ ಸಹಾಯಕ ಕಾರ್ಯದರ್ಶಿ ಸೇರಿದಂತೆ ಕೋಲಾರ ಅಬಕಾರಿ ಡಿಸಿ ಬಸವರಾಜ ಸಂದಿಗ್ವಾಡ್, ರಂಗಪ್ಪ, ಬೆಂಗಳೂರು ದಕ್ಷಿಣ ಅಬಕಾರಿ ಡಿಸಿ ವಿವೇಕ್ ಖಾತೆಗೆ ತಲುಪಿದೆ. ಲಂಚದ ಹಣದಲ್ಲಿ ಅಧಿಕಾರಿಗಳು ಸಹ ಶಾಮೀಲಾಗಿದ್ದಾರೆ. ಅಬಕಾರಿ ಸಚಿವರ ಲಂಚಾವತಾರಕ್ಕೆ ಸರ್ಕಾರ ಕುಮ್ಮಕ್ಕು ನೀಡುತ್ತಿದೆ. ಜಾರಿ ನಿರ್ದೇಶನಾಲಯ ಅಧಿಕಾರಿಗಳು ಸೂಕ್ತ ತನಿಖೆ ನಡೆಸಬೇಕು. ತಪ್ಪಿತಸ್ಥರ ವಿರುದ್ಧ ಸೂಕ್ತ



ಕ್ರಮಕೈಗೊಳ್ಳಬೇಕೆಂದು ಇಡಿಗೆ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ದೂರು ನೀಡಿ ಕ್ರಮಕ್ಕೆ ಆಗ್ರಹಿಸಿದ್ದಾರೆ.

ಅಲ್ಲದೆ ಭ್ರಷ್ಟಾಚಾರ ತಡೆ ಕಾಯ್ದೆಯ ಸೆಕ್ಷನ್ 7 ಮತ್ತು 13 (1) (2) ರ ಅಡಿಯಲ್ಲಿ ಮತ್ತು ವಿಸ್ಲ್ ಬ್ಲೋವರ್ಸ್ ಆಕ್ಟ್ 2014 ರ ಸೆಕ್ಷನ್ 4 (1) ರ ಅಡಿಯಲ್ಲಿ ಮತ್ತು ಮನಿ ಲಾಂಡರಿಂಗ್ ಆಕ್ಟ್ (ಪಿಎಂಎಲ್ಎ ತಡೆಗಟ್ಟುವಿಕೆ) ಅಡಿಯಲ್ಲಿ ಕಚೇರಿಯ ದುರುಪಯೋಗ ಪಡಿಸಿಕೊಂಡ ಆರೋಪದ ಮೇರೆಗೆ ಕ್ರಮ ಜರುಗಿಸುವಂತೆ ಒತ್ತಾಯಿಸಿದ್ದಾರೆ.

**ಅಧಿಕಾರಿಗಳಿಂದಲೇ ಲಂಚ ವಸೂಲಿ**

ಮೂವರು ಡಿಸಿ, ಒಂಬತ್ತು ಅಧೀಕ್ಷಕರು, 13 ಡಿವೈಎಸ್‌ಪಿ, 20 ಇನ್ಸ್‌ಪೆಕ್ಟರ್‌ಗಳ ಪಟ್ಟಿ ಸಿದ್ಧಪಡಿಸಲಾಗಿದ್ದು, ಅವರಿಂದ 16 ಕೋಟಿ ರೂಪಾಯಿ ಲಂಚ ವಸೂಲಿ ಮಾಡಲಾಗಿದೆ.

2.5 ರಿಂದ 3.5 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಮತ್ತು ಇನ್ನೊಂದು ತಿಂಗಳಲ್ಲಿ ವರ್ಗಾವಣೆ ಅವಧಿ ಮುಗಿಯುವ ಇನ್ಸ್‌ಪೆಕ್ಟರ್‌ಗಳನ್ನು ಬದಲಾಯಿಸಲು ಬೆಂಗಳೂರು ಸುತ್ತಮುತ್ತಲಿನ ಇನ್ಸ್‌ಪೆಕ್ಟರ್‌ಗಳಿಂದ 40 ರಿಂದ 50 ಲಕ್ಷ ರೂ.ಗಳನ್ನು ಸಂಗ್ರಹಿಸಲಾಗಿದೆ.

ಡಿವೈಎಸ್ಪಿಗಳಿಂದ 30ರಿಂದ 40 ಲಕ್ಷ ರೂ. ಅಧೀಕ್ಷಕರಿಂದ 25ರಿಂದ 30 ಲಕ್ಷ ರೂ. ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿಸಿಗಳಿಂದ 2.5 ಕೋಟಿಯಿಂದ 3.5 ಕೋಟಿ ರೂ. ಹೀಗೆ ಒಟ್ಟು 18 ಕೋಟಿ ನಗದು ಸಿಕ್ಕಿದೆ.

ಈ ಪೈಕಿ 13 ಕೋಟಿ ಹಣ ಸಚಿವ ಆರ್ಬಿ. ತಿಮ್ಮಾಪುರ ಅವರಿಗೆ ತಲುಪಿದೆ.

ಅಧಿಕೃತ ವಲಯ ಮತ್ತು ಸಾರ್ವಜನಿಕ ಕಾರಿಡಾರ್‌ನಲ್ಲಿ ವ್ಯಾಪಕ ಚರ್ಚೆಯಾಗುತ್ತಿದೆ. ಅಲ್ಲದೆ ಸಚಿವರ ಪಿಎ, ಪಿಎಸ್ ಹಾಗೂ ಸಿಬ್ಬಂದಿಗೆ 50 ಲಕ್ಷದಿಂದ 1 ಕೋಟಿ ರೂ ವರ್ಗಾವಣೆಯಾಗಿದೆ ಎಂದು ದಿನೇಶ್ ದೂರಿನಲ್ಲಿ ಆರೋಪಿಸಿದ್ದಾರೆ.

## ಗುತ್ತಿಗೆ, ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ನೌಕರರನ್ನು ತಕ್ಷಣವೇ ಕರ್ತವ್ಯದಿಂದ ಬಿಡುಗಡೆಗೊಳಿಸಿ: ಸರ್ಕಾರ ಆದೇಶ



ಬೆಂಗಳೂರು: ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಮತ್ತು ಸಚಿವಾಲಯದಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಅಧಿಕಾರಿ ಹಾಗೂ ನೌಕರರನ್ನು ತಕ್ಷಣವೇ ಕರ್ತವ್ಯದಿಂದ ಬಿಡುಗಡೆಗೊಳಿಸುವಂತೆ ರಾಜ್ಯ ಸರ್ಕಾರ ಮಂಗಳವಾರ ಆದೇಶ ಹೊರಡಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸೂಚನೆ ಮೇರೆಗೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್ ಅವರು ಈ ಆದೇಶ ಹೊರಡಿಸಿದ್ದು, ನಿವೃತ್ತ ನೌಕರರಿಂದ ತೆರವಾಗುವ ಹುದ್ದೆಗೆ ಹಾಲಿ ಸರ್ಕಾರಿ ಅಧಿಕಾರಿಗಳು, ನೌಕರರನ್ನೇ ನಿಯೋಜಿಸುವಂತೆ ಸೂಚಿಸಿದ್ದಾರೆ.

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ, ಹೊರ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ನಿವೃತ್ತ ಸರ್ಕಾರಿ ನೌಕರರನ್ನು ತಕ್ಷಣ ಕರ್ತವ್ಯದಿಂದ ಬಿಡುಗಡೆಗೊಳಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ಸಿಎಂ ಸಿದ್ದರಾಮಯ್ಯ ಅವರು ನಿನ್ನೆ ಮುಖ್ಯ ಕಾರ್ಯದರ್ಶಿಗೆ ಸೂಚಿಸಿದ್ದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ರಾಜ್ ಇಲಾಖೆ ಸೇರಿದಂತೆ ರಾಜ್ಯ ಸರ್ಕಾರ ಕೆಲವು ಇಲಾಖೆಗಳಲ್ಲಿ ಮತ್ತು ಸಚಿವಾಲಯದಲ್ಲಿ ಅನಗತ್ಯ ಹುದ್ದೆಗಳನ್ನು ಸೃಷ್ಟಿಸಿ ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದಿದ ನೌಕರರನ್ನು ಸಮಾಲೋಚಕರು, ವಿಶೇಷ ಸಂಪನ್ಮೂಲ ವ್ಯಕ್ತಿಗಳಾಗಿ ನೇಮಿಸಿಕೊಳ್ಳಲಾಗಿದೆ. ಗ್ರೂಪ್ ವೃಂದದ ಕೆಲವು ಹುದ್ದೆಗಳಿಗೂ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ. ಹೀಗೆ ನೇಮಿಸಿಕೊಂಡ ನಿವೃತ್ತ ನೌಕರರಿಗೆ ವೇತನ, ವಾಹನ ಸೇರಿದಂತೆ ಮತ್ತಿರ ಸೌಲಭ್ಯ ನೀಡಲಾಗುತ್ತಿದೆ. ಇದರಿಂದ ಸರ್ಕಾರದ ಬೊಕ್ಕಸಕ್ಕೆ ಹೆಚ್ಚುವರಿ ಆರ್ಥಿಕ ಹೊರೆ ಆಗುತ್ತಿದೆ. ಅಲ್ಲದೇ ಕಾರ್ಯಕ್ಷಮತೆಯ ಗುಣಮಟ್ಟ ಹಾಗೂ ಉತ್ತರದಾಯಿತ್ವದ ಕೊರತೆಯೂ ಎದ್ದು ಕಾಣುತ್ತಿದೆ ಎಂದು ಮುಖ್ಯ ಕಾರ್ಯದರ್ಶಿಗೆ ಬರೆದ ಟಿಪ್ಪಣಿಯಲ್ಲಿ ಸಿಎಂ ಸಿದ್ದರಾಮಯ್ಯ ಉಲೇಖಿಸಿದ್ದರು.

## ಸುಭಾಷ್ ಚಂದ್ರ ಬೋಸ್ ಅಪ್ರತಿಮ ದೇಶಪ್ರೇಮಿ: ಸಿಎಂ



ಬೆಂಗಳೂರು: ಸುಭಾಷ್ ಚಂದ್ರ ಬೋಸ್ ಅಪ್ರತಿಮ ದೇಶಪ್ರೇಮಿ ಹಾಗೂ ಸ್ವಾತಂತ್ರ್ಯ ಹೋರಾಟಗಾರರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮದಿನದ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಮಾಧ್ಯಮದರೊಂದಿಗೆ ಮಾತನಾಡಿದ ಅವರು, ಸುಭಾಷ್ ಚಂದ್ರ ಬೋಸ್ ಅವರ 127ನೇ ಜಯಂತಿಯನ್ನು ಆಚರಿಸುತ್ತಿದ್ದು, ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಸ್ಮರಿಸಿ, ಗೌರವಿಸಿದ್ದೇವೆ. ಕಾಂಗ್ರೆಸ್ **(Congress)** ಅಧ್ಯಕ್ಷರಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದರು ಎಂದರು.

ಗಾಂಧೀಜಿ ಹಾಗೂ ಸುಭಾಷ್ ಚಂದ್ರ ಬೋಸ್ ನಡುವೆ ಸ್ವಾತಂತ್ರ್ಯ ಹೋರಾಟದ ಹಾದಿಯ ಬಗ್ಗೆ ಭಿನ್ನಾಭಿಪ್ರಾಯ ಮೂಡಿತ್ತು.

ಮಹಾತ್ಮ ಗಾಂಧೀಜಿ ಶಾಂತಿ, ಅಹಿಂಸೆ ಮೂಲಕ ಸ್ವಾತಂತ್ರ್ಯ ಗಳಿಸಬೇಕು ಎಂದರೆ ಸುಭಾಷ್ ಚಂದ್ರ ಬೋಸ್ ಅವರಿಗೆ ಅದರ ತದ್ವಿರುದ್ಧವಾದ ನಿಲುವು ಇತ್ತು. ಬೇರೆ ವಿಚಾರಗಳಲ್ಲಿ ಗಾಂಧೀಜಿಯವರ ಬಗ್ಗೆ ಅಪಾರವಾದ ಗೌರವವಿತ್ತು. ಈ ವಿಚಾರದಲ್ಲಿ ಮಾತ್ರ ಆಲೋಚನೆಗಳಲ್ಲಿ ಭಿನ್ನಾಭಿಪ್ರಾಯ ಇತ್ತು ಎಂದು ಹೇಳಿದರು.

ಭಾರತೀಯ ರಾಷ್ಟ್ರೀಯ ಸೇನೆಯನ್ನು ಸ್ಥಾಪಿಸಿ ಅದರ ಮುಖ್ಯಸ್ಥರಾಗಿದ್ದರು. ಜಪಾನ್ ದೇಶದಲ್ಲಿ ವಿಮಾನ ದುರಂತದಲ್ಲಿ ಅವರು ಸಾವಿಗೀಡಾದರು. ಅಪ್ರತಿಮ ಸ್ವಾತಂತ್ರ್ಯ ಪ್ರೇಮಿ, ದೇಶಪ್ರೇಮಿಯಾಗಿದ್ದರು.

ಸುಭಾಷ್ ಚಂದ್ರ ಬೋಸ್ ಅವರು ನಮಗೆಲ್ಲಾ ಆದರ್ಶ. ಅವರ ಆದರ್ಶಗಳನ್ನು ನಾವೆಲ್ಲರೂ ಅನುಸರಿಸುವುದೇ ಅವರಿಗೆ ಸಲ್ಲಿಸುವ ಗೌರವ. ಅವರ ತತ್ವಾದರ್ಶಗಳು ನಮಗೆ ದಾರಿದೀಪವಾಗಲಿ ಎಂದು ತಿಳಿಸಿದರು.

# ಬಿಜೆಪಿ ಗೂಂಡಾಗಳ ಗೊಡ್ಡು ಬೆದರಿಕೆಗೆ ಕಾಂಗ್ರೆಸಿಗರು ಹೆದರಲ್ಲ: ಡಿಕೆಶಿ ಕಿಡಿ

ಬೆಂಗಳೂರು: ಬಿಜೆಪಿ ಗೂಂಡಾಗಳು ಕೈಯಲ್ಲಿ ಮಂತ್ರಾಕ್ಷತೆ ಹಿಡಿದಿದ್ದರೆ, ಬಗಲಲ್ಲಿ ದೊಣ್ಣೆ ಹಿಡಿದಿದ್ದಾರೆ. ಈ ಗೂಂಡಾಗಳ ಗೊಡ್ಡು ಬೆದರಿಕೆಗೆ ಯಾವುದೇ ಕಾಂಗ್ರೆಸಿಗರು ಹೆದರುವುದಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಅಸ್ಸಾಂನಲ್ಲಿ ರಾಹುಲ್ ಗಾಂಧಿ ಅವರ ಭಾರತ ಜೋಡೋ ನ್ಯಾಯ ಯಾತ್ರೆ ಮೇಲೆ ಬಿಜೆಪಿ ಕಾರ್ಯಕರ್ತರ ದಾಳಿ ಖಂಡಿಸಿ ಸ್ವಾತಂತ್ರ್ಯ ಉದ್ಯಾನವನದಲ್ಲಿ ಮಂಗಳವಾರ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬಿಜೆಪಿಯವರು ಧರ್ಮದ ವಿಚಾರವಾಗಿ ರಾಜಕಾರಣ ಮಾಡುತ್ತಿದ್ದಾರೆ. ಹೀಗಾಗಿ ಅವರು ಒಂದು ಕೈಯಲ್ಲಿ ಮಂತ್ರಾಕ್ಷತೆ ಹಿಡಿದರೆ, ಮತ್ತೊಂದು ಕೈಯಲ್ಲಿ ದೊಣ್ಣೆ ಹಿಡಿದು ಜನಪರ ಧ್ವನಿ ಹತ್ತಿಕ್ಕುವ ಕೆಲಸ ಮಾಡುತ್ತಿದ್ದಾರೆ.



ರಾಜಕಾರಣದಲ್ಲಿ ಧರ್ಮ ಇರಬೇಕು, ಧರ್ಮದಲ್ಲಿ ರಾಜಕಾರಣ ಇರಬಾರದು. ನೀವು ಧರ್ಮವನ್ನು ರಾಜಕಾರಣಕ್ಕೆ ಬಳಸಿಕೊಳ್ಳುತ್ತಿದ್ದರೂ ನಾವು ಅದರ ಬಗ್ಗೆ ಹೆಚ್ಚು ಚರ್ಚೆ ಮಾಡುತ್ತಿಲ್ಲ. ಸಿದ್ದರಾಮಯ್ಯ ಅವರ ಹೆಸರಲ್ಲಿ ರಾಮ, ಶಿವಕುಮಾರ ಹೆಸರಲ್ಲಿ ಶಿವ ಹಾಗೂ ಷಣ್ಮುಗ ಇದ್ದಾರೆ. ಹರಿಪ್ರಸಾದ್ ಅವರ ಹೆಸರಲ್ಲಿ ಹರಿ ಇದ್ದಾನೆ. ಕೃಷ್ಣ ಭೈರೇಗೌಡರ ಹೆಸರಲ್ಲಿ ಕೃಷ್ಣ ಇದ್ದಾನೆ. ಹಿಂದೂ ಧರ್ಮ ನಿಮ್ಮ ಮನೆ ಆಸ್ತಿಯೇ ಎಂದು ಪ್ರಶ್ನಿಸಿದರು.

ನಮ್ಮ ಸರ್ಕಾರದಲ್ಲಿ ಧಾರ್ಮಿಕ ದತ್ತಿ ಇಲಾಖೆ, ಹಜ್ ಸಮಿತಿ, ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆ ಇದೆ. ಸಂವಿಧಾನದ ಪರವಾಗಿ ನಾವು ಎಲ್ಲಾ ಧರ್ಮಕ್ಕೂ ಆದ್ಯತೆ ನೀಡುತ್ತಾ ಬಂದಿದ್ದೇವೆ. ಎಲ್ಲರಿಗೂ ಸಮಾನವಾಗಿ ಕಂಡು ಸರ್ವರಿಗೂ ಸಮಬಾಳು, ಸಮಪಾಲು ಎಂಬ ತತ್ವದ ಮೇಲೆ ಆಡಳಿತ ಮಾಡುತ್ತಿದ್ದೇವೆ. ನಿಮ್ಮ ಕೈಯಲ್ಲು ಅಧಿಕಾರ ಇತ್ತು. ಆಗ ಜನಪರ ಕಾರ್ಯಕ್ರಮ ಯಾಕೆ ಮಾಡಲಿಲ್ಲ. ಈಗ ಅಧಿಕಾರ ಹೋದ ನಂತರ ಸಂಕಟಪಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು

ಅಸ್ಸಾಂನಲ್ಲಿ ಕಳೆದೆರಡು ದಿನಗಳಿಂದ ಈ ಯಾತ್ರೆಯನ್ನು ತಡೆಯಲಾಗಿದೆ. ಇಂದು ಗುವಾಹಟಿಗೆ ಪ್ರವೇಶಿಸಲು ಅವಕಾಶ ನೀಡುತ್ತಿಲ್ಲ. ಆ ಮೂಲಕ ದೇಶದಲ್ಲಿ ಸಂವಿಧಾನ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆ ಬದುಕಿದೆಯೋ ಸತ್ತಿದೆಯೋ ಎಂಬ ಪ್ರಶ್ನೆ ಉದ್ಭವಿಸಿದೆ. ಅಸ್ಸಾಂ ಸರ್ಕಾರದ ಈ ನಡೆಯನ್ನು ನಾವೆಲ್ಲರೂ ಖಂಡಿಸುತ್ತೇವೆ ಎಂದರು.

ರಾಹುಲ್ ಗಾಂಧಿ ಅವರು ದೇಶದ ಮನಸ್ಸುಗಳನ್ನು ಒಗ್ಗೂಡಿಸಲು, ಜನರಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ಧ್ವನಿ ಎತ್ತಿ, ಅವರಿಗೆ ನ್ಯಾಯ ಒದಗಿಸಲು ಮಣಿಪುರದಿಂದ ಮುಂಬೈವರೆಗೂ ಎರಡನೇ ಹಂತದ ಭಾರತ ಜೋಡೋ ನ್ಯಾಯ ಯಾತ್ರೆ ಹಮ್ಮಿಕೊಂಡಿದ್ದಾರೆ. ಈ ಯಾತ್ರೆಯಿಂದ ಬಿಜೆಪಿ ನಾಯಕರಲ್ಲಿ ನಡುಕ ಹುಟ್ಟಿದೆ. ಹೀಗಾಗಿ ಅವರ ಯಾತ್ರೆಯನ್ನು ತಡೆಯುತ್ತಿದ್ದಾರೆ ಎಂದು ಆರೋಪಿಸಿದರು.

# ನೇತಾಜಿಗೆ ಏನಾಯಿತು ಎಂದು ಇಂದಿಗೂ ನಮಗೆ ತಿಳಿದಿಲ್ಲ ಎಂಬುದು ನಾಚಿಕೆಗೇಡಿನ ಸಂಗತಿ: ಮಮತಾ ಬ್ಯಾನರ್ಜಿ

ಕೋಲ್ಕತ್ತಾ: ನೇತಾಜಿ ಸುಭಾಷ್ ಚಂದ್ರ ಬೋಸ್ ಕಣ್ಮರೆಯಾಗಿ ಇಷ್ಟು ವರ್ಷಗಳಾದರೂ ಅವರಿಗೆ ಏನಾಯಿತು. ಅವರ ಮರಣದ ದಿನಾಂಕದ ಬಗ್ಗೆ ಜನರಿಗೆ ತಿಳಿದಿಲ್ಲದಿರುವುದು ದೇಶಕ್ಕೆ ನಾಚಿಕೆಗೇಡಿನ ಸಂಗತಿ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ.

ನೇತಾಜಿ ನಾಪತ್ತೆ ಪ್ರಕರಣದ ತನಿಖೆ ನಡೆಸುವ ಭರವಸೆಯನ್ನು ಈಡೇರಿಸದ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಮಮತಾ ಬ್ಯಾನರ್ಜಿ ಅವರು, ರಾಮ ಮಂದಿರದ ಶಂಕುಸ್ಥಾಪನೆ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರ ಸರ್ಕಾರಿ ಕಚೇರಿಗಳಿಗೆ ಅರ್ಧ ದಿನ ರಜೆ ಘೋಷಿಸಿತ್ತು. ಈ ದಿನಗಳಲ್ಲಿ ರಾಜಕೀಯ ಜಾಹೀರಾತುಗಳಿಗೆ ರಜೆ ಘೋಷಿಸಲಾಗುತ್ತಿದೆ. ಆದರೆ ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದವರಿಗಾಗಿ ಏನನ್ನು ಘೋಷಿಸಿಲ್ಲ ಎಂದರು.

ನೇತಾಜಿಯವರ 127ನೇ ಜನ್ಮದಿನಾಚರಣೆ ಹಿನ್ನೆಲೆಯಲ್ಲಿ ಬೋಸ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಮಾತನಾಡಿದ ಮಮತಾ, ಇಷ್ಟು ವರ್ಷ ಕಳೆದರೂ ನೇತಾಜಿ ನಿಧನದ ದಿನಾಂಕ ನಮ್ಮ ಬಳಿ ಇಲ್ಲದಿರುವುದು ಭಾರತದ ದೌರ್ಭಾಗ್ಯ ಎಂದರು. ಅವರಿಗೆ ಏನಾಯಿತು ಎಂದು ನಮಗೆ ತಿಳಿದಿಲ್ಲ. ಇದು ಮುಜುಗರದ ಸಂಗತಿ ಎಂದರು.



ಬಿಜೆಪಿ ಅಧಿಕಾರಕ್ಕೆ ಬರುವ ಮುನ್ನ ನೇತಾಜಿ ನಾಪತ್ತೆ ಪ್ರಕರಣದ ತನಿಖೆ ನಡೆಸುವುದಾಗಿ ಭರವಸೆ ನೀಡಿತ್ತು. ಆದರೆ ನಂತರ ಅದನ್ನು ಮರೆತಿದೆ. ನೇತಾಜಿಯವರ ಜನ್ಮದಿನವನ್ನು ರಾಷ್ಟ್ರೀಯ ರಜಾದಿನವೆಂದು ಘೋಷಿಸಲು ನಾನು 20 ವರ್ಷಗಳಿಂದ ಪ್ರಯತ್ನಿಸಿದ್ದೇನೆ. ಆದರೆ ಅದು ವಿಫಲವಾಗಿದೆ, ದಯವಿಟ್ಟು ನನ್ನನ್ನು ಕ್ಷಮಿಸಿ ಎಂದು ಹೇಳಿದರು.

# ಭಾರತಕ್ಕೆ ಯುಎನ್‌ಎಸ್‌ಸಿ ಶಾಶ್ವತ ಸದಸ್ಯತ್ವ ಇಲ್ಲದೇ ಇರುವುದು ಅಸಮಂಜಸ: ಎಲಾನ್ ಮಸ್ಕ್, ಸುಧಾರಣೆಗೆ ಆಗ್ರಹ

ವಿಶ್ವಸಂಸ್ಥೆ: ಬಿಲಿಯನೇರ್ ಟೆಕ್ ದೈತ್ಯ ಎಲಾನ್ ಮಸ್ಕ್ ವಿಶ್ವಸಂಸ್ಥೆ ಭದ್ರತಾ ಮಂಡಳಿ ಬಗ್ಗೆ ಮಾತನಾಡಿದ್ದು, ಜಗತ್ತಿನಲ್ಲಿಯೇ ಹೆಚ್ಚು ಜನಸಾಂದ್ರತೆಯುಳ್ಳ ದೇಶವಾಗಿರುವ ಭಾರತಕ್ಕೆ ಯುಎನ್‌ಎಸ್ ಸಿ ಶಾಶ್ವತ ಸದಸ್ಯತ್ವ ಇಲ್ಲದೇ ಇರುವುದು ಅಸಮಂಜಸ ಹೇಳಿದ್ದಾರೆ.

ವಿಶ್ವಸಂಸ್ಥೆಯ ಅಂಗ ಸಂಸ್ಥೆಗಳಲ್ಲಿ ಆಮೂಲಾಗ್ರ ಬದಲಾವಣೆಯಾಗಬೇಕೆಂದು ಎಲಾನ್ ಮಸ್ಕ್ ಅಭಿಪ್ರಾಯಪಟ್ಟಿದ್ದಾರೆ. ಯುಎನ್‌ಎಸ್‌ಸಿಯ ಖಾಯಂ ಸದಸ್ಯರ ಪಟ್ಟಿಯಿಂದ ಯಾವುದೇ ಆಫ್ರಿಕನ್ ರಾಷ್ಟ್ರದ ಅನುಪಸ್ಥಿತಿಯ ಬಗ್ಗೆ ಯುಎನ್ ಸೆಕ್ರೆಟರಿ-ಜನರಲ್ ಆಂಟೋನಿಯೊ ಗುಟೆರೆಸ್ ಕಳವಳ ವ್ಯಕ್ತಪಡಿಸಿದ ನಂತರ ಟೆಸ್ಲಾ ಸಿಇಒ ಭಾರತದ ಪರ ಧ್ವನಿಗೂಡಿಸಿದ್ದಾರೆ.

"ಆಫ್ರಿಕಾ ಇನ್ನೂ ಭದ್ರತಾ ಮಂಡಳಿಯಲ್ಲಿ ಒಬ್ಬ ಖಾಯಂ ಸದಸ್ಯರನ್ನು ಹೊಂದಿಲ್ಲ ಎಂಬುದನ್ನು ನಾವು ಹೇಗೆ ಒಪ್ಪಿಕೊಳ್ಳಬಹುದು?" "ಸಂಸ್ಥೆಗಳು ಇಂದಿನ ಜಗತ್ತನ್ನು ಪ್ರತಿಬಿಂಬಿಸಬೇಕು, 80 ವರ್ಷಗಳ ಹಿಂದೆನದ್ದನ್ನಲ್ಲ. ಸೆಪ್ಟೆಂಬರ್‌ನ ಭವಿಷ್ಯದ ಶೃಂಗಸಭೆಯಲ್ಲಿ ಜಾಗತಿಕ ಆಡಳಿತ ಸುಧಾರಣೆಗಳನ್ನು ಪರಿಗಣಿಸಲು ಮತ್ತು ವಿಶ್ವಾಸವನ್ನು ಮರು-ನಿರ್ಮಾಣ ಮಾಡಲು ಒಂದು ಅವಕಾಶವಾಗಿದೆ" ಎಂದು ಗುಟೆರೆಸ್ ಮಸ್ಕ್ ಒಡೆತನದ ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ಬರೆದಿದ್ದಾರೆ.



ಇದಕ್ಕೆ ಪ್ರತಿಕ್ರಿಯೆ ನೀಡಿರುವ, ಅಮೇರಿಕಾ ಸಂಜಾತ ಇಸ್ರೇಲಿ ವೆಂಚರ್ ಕ್ಯಾಪಿಟಲಿಸ್ಟ್, ಭಾರತದ ಪ್ರಾತಿನಿಧ್ಯದ ವಿಷಯವನ್ನು ಪ್ರಸ್ತಾಪಿಸಿದರು.

ಈ ವೇಳೆ ಮಸ್ಕ್ ಕೂಡ ಚರ್ಚೆಯಲ್ಲಿ ಭಾಗಿಯಾದರು ಮತ್ತು ಯುಎನ್‌ನ ಪ್ರಸ್ತುತ ರಚನೆಯು ವಿಶ್ವದ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ರಾಷ್ಟ್ರಗಳನ್ನು ಸಮರ್ಪಕವಾಗಿ ಪ್ರತಿನಿಧಿಸುವುದಿಲ್ಲ ಎಂದು ಹೇಳಿದರು. ಕೆಲವು ಹಂತದಲ್ಲಿ, ಯುಎನ್ ಸಂಸ್ಥೆಗಳ ಪರಿಷ್ಕರಣೆ ಅಗತ್ಯವಿದೆ" ಎಂದು ಅವರು ಹೇಳಿದರು. "ಸಮಸ್ಯೆ ಏನೆಂದರೆ, ಹೆಚ್ಚಿನ ಶಕ್ತಿಯನ್ನು ಹೊಂದಿರುವವರು ಅದನ್ನು ಬಿಟ್ಟುಕೊಡಲು ಬಯಸುವುದಿಲ್ಲ. ಭಾರತ ಭದ್ರತಾ ಮಂಡಳಿಯಲ್ಲಿ ಶಾಶ್ವತ ಸ್ಥಾನವನ್ನು ಹೊಂದಿಲ್ಲ, ಭೂಮಿಯ ಮೇಲಿನ ಅತ್ಯಂತ ಹೆಚ್ಚಿನ ಜನಸಂಖ್ಯೆಯ ದೇಶವಾಗಿದ್ದರೂ, ಶಾಶ್ವತ ಸದಸ್ಯತ್ವ ಸಿಗದೇ ಇರುವುದು ಅಸಂಬದ್ಧವಾಗಿದೆ" ಎಂದು ಮಸ್ಕ್ ತಮ್ಮ ಪ್ರತಿಕ್ರಿಯೆಯಲ್ಲಿ ಹೇಳಿದ್ದಾರೆ. ಭಾರತ ಭದ್ರತಾ ಮಂಡಳಿಯನ್ನು ಸುಧಾರಿಸುವ ಹಲವು ವರ್ಷಗಳ ಪ್ರಯತ್ನಗಳಲ್ಲಿ ಮುಂಚೂಣಿಯಲ್ಲಿದೆ. ಯುಎನ್ ಹೈ ಟೇಬಲ್‌ನಲ್ಲಿ ಖಾಯಂ ಸದಸ್ಯರಾಗಿ ಸ್ಥಾನ ಪಡೆಯಲು ಅರ್ಹವಾಗಿದೆ ಎಂದು ಮಸ್ಕ್ ಹೇಳಿದ್ದಾರೆ. ಇದು ಪ್ರಸ್ತುತ ರೂಪದಲ್ಲಿ 21 ನೇ ಶತಮಾನದ ಭೌಗೋಳಿಕ-ರಾಜಕೀಯ ವಾಸ್ತವಗಳನ್ನು ಪ್ರತಿನಿಧಿಸುವುದಿಲ್ಲ. . ಪ್ರಸ್ತುತ, UNSC ಯಲ್ಲಿ ಚೀನಾ, ಫ್ರಾನ್ಸ್, ರಷ್ಯಾ, ಯುಕೆ ಮತ್ತು ಯುಎಸ್ ಗಳಿಗೆ ಖಾಯಂ ಸದಸ್ಯತ್ವ ಹೊಂದಿವೆ. ಖಾಯಂ ಸದಸ್ಯ ರಾಷ್ಟ್ರಗಳಿಗೆ ಮಾತ್ರ ಯಾವುದೇ ವಸ್ತುನಿಷ್ಠ ನಿರ್ಣಯವನ್ನು ವೀಟೋ ಮಾಡುವ ಅಧಿಕಾರವಿದೆ.

# ಮುಂಬೈ ಮ್ಯಾರಥಾನ್: ಇಬ್ಬರ ಸಾವು, 22 ಮಂದಿ ಆಸ್ಪತ್ರೆಗೆ

ಮುಂಬೈ: ಇಲ್ಲಿ ನಡೆದ ವಾರ್ಷಿಕ ಟಾಟಾ ಮುಂಬೈ ಮ್ಯಾರಥಾನ್‌ನಲ್ಲಿ 74 ವರ್ಷದ ವ್ಯಕ್ತಿ ಸೇರಿದಂತೆ ಇಬ್ಬರು ಸ್ಪರ್ಧಿಗಳು ಕುಸಿದು ಬಿದ್ದು ಮೃತಪಟ್ಟಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅಧಿಕಾರಿಯ ಪ್ರಕಾರ, ಭಾನುವಾರ ನಡೆದ ಓಟದ ಸ್ಪರ್ಧೆಯಲ್ಲಿ ಭಾಗವಹಿಸಿದ 22 ಜನರನ್ನು ನಿರ್ಜಲೀಕರಣ ಮತ್ತು ಇತರ ಕಾರಣಗಳಿಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.



ಮೃತರನ್ನು ಕೋಲ್ಕತ್ತಾದ ಸುವ್ರದೀಪ್ ಬ್ಯಾನರ್ಜಿ (40) ಮತ್ತು ಮುಂಬೈನ ರಾಜೇಂದ್ರ ಬೋರಾ (74) ಎಂದು ಗುರುತಿಸಲಾಗಿದೆ.

ಅನುಭವಿ ಮ್ಯಾರಥಾನ್ ಓಟಗಾರ, ಸಾಫ್ಟ್‌ವೇರ್ ಎಂಜಿನಿಯರ್ ಬ್ಯಾನರ್ಜಿ ಹಾಜಿ ಅಲಿ ಜಂಕ್ಷನ್ ಬಳಿ ಕುಸಿದುಬಿದ್ದರು. ಮರೀನ್ ಡ್ರೈವ್ ಎದುರಿನ ಜನಪ್ರಿಯ ಪಿಜ್ಜಾ ಜಾಯಿಂಟ್ ಬಳಿಯ ಪೆಟ್ರೋಲ್ ಪಂಪ್ ಬಳಿ ರಸ್ತೆಯಲ್ಲಿ ಬೋರಾ ಕುಸಿದುಬಿದ್ದಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಹೇಲ್ ಲೆಮಿ ಬೆರ್ಹಾನು ಮತ್ತು ಅಬೆರಾಶ್ ಮಿನ್ಸೆವೊ ಕ್ರಮವಾಗಿ ಪುರುಷರ ಮತ್ತು ಮಹಿಳಾ ವಿಭಾಗದ ಪ್ರಶಸ್ತಿಗಳನ್ನು ಗೆಲ್ಲುವ ಮೂಲಕ ಇಥಿಯೋಪಿಯಾದ ಓಟಗಾರರು ಮುಂಬೈ ಮ್ಯಾರಥಾನ್ ನಲ್ಲಿ ಪ್ರಾಬಲ್ಯ ಸಾಧಿಸಿದರು.

# ಧಾರವಾಡ: ಜ.26 ರಂದು ಗಣರಾಜ್ಯೋತ್ಸವ

ಧಾರವಾಡ: ಜಿಲ್ಲಾಡಳಿತವು ಜನವರಿ 26 ರಂದು ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ 75ನೇಯ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಆಯೋಜಿಸಿದೆ. ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್, ಲಾಡ್ ಅವರು ಗಣರಾಜ್ಯೋತ್ಸವದ ನಿಮಿತ್ಯ ಬೆಳಿಗ್ಗೆ 9 ಗಂಟೆಗೆ ರಾಷ್ಟ್ರ ಧ್ವಜಾರೋಹಣ ನೇರವೇರಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಕೇಂದ್ರ ಸಂಸದೀಯ ವ್ಯವಹಾರಗಳ, ಕಲ್ಲಿದ್ದಲು ಮತ್ತು ಗಣಿ ಸಚಿವರಾದ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಘನ ಉಪಸ್ಥಿತರಿರುವರು. ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ ಅವರು ವಿಶೇಷ ಅತಿಥಿಗಳಾಗಿ ಆಗಮಿಸುವರು. ಹಾಗೂ ಶಾಸಕರಾದ ಅರವಿಂದ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.


ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರು ಹಾಗೂ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಶಾಸಕರಾದ ವಿನಯ ಕುಲಕರ್ಣಿ, ಅಬ್ಬಯ್ಯ ಪ್ರಸಾದ, ಎನ್.ಎಚ್ ಕೋನರಡ್ಡಿ, ಎಸ್.ವ್ಹಿ ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ವೀಣಾ ಚೇತನ ಭರದ್ವಾಡ ಅವರು ಭಾಗವಹಿಸುವರು.

ಜನವರಿ 26 ರಂದು ಬೆಳಿಗ್ಗೆ 8:30ಕ್ಕೆ ಆರ್.ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಗಣ್ಯರು, ವಿದ್ಯಾರ್ಥಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಆಗಮಿಸುವರು. ಬೆಳಿಗ್ಗೆ 9 ಗಂಟೆಗೆ ಮುಖ್ಯ ಅತಿಥಿಗಳಾಗಿರುವ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್. ಲಾಡ್ ಅವರು ಕ್ರೀಡಾಂಗಣಕ್ಕೆ ಆಗಮಿಸಿ ರಾಷ್ಟ್ರ ಧ್ವಜಾರೋಹಣ ನೇರವೇರಿಸುವರು. ನಂತರ ಅವರು ವಿವಿಧ ದಳಗಳ ಪರಿವಿಕ್ಷಣೆ ಮಾಡುವರು. 9:15 ಗಂಟೆಗೆ ಸಚಿವರು ಜಿಲ್ಲೆಯ ಜನತೆಗೆ ಗಣರಾಜ್ಯೋತ್ಸವದ ಸಂದೇಶ ನೀಡುವರು ನಂತರ ಅವರು ವಿವಿಧ ದಳಗಳಿಂದ ಗೌರವ ರಕ್ಷೆ ಸ್ವೀಕರಿಸುವರು.

ಗಣರಾಜ್ಯೋತ್ಸವದ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಜಿಲ್ಲೆಯ ಸಾಧಕರನ್ನು ಸಚಿವರು ಸನ್ಮಾನಿಸಿ, ಗೌರವಿಸುವರು. ಶಾಲಾ ಮಕ್ಕಳಿಂದ ಸಂಸ್ಕೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಮತ್ತು ಸಂಜೆ 4 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಂಸ್ಕೃತಿ ಭವನದಲ್ಲಿ ಶಾಲಾ ವಿದ್ಯಾರ್ಥಿಗಳಾದ ಸಂಸ್ಕೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಡಳಿತದ ಪ್ರಕಟಣೆ ತಿಳಿಸಿದೆ.

# ಪ್ರೀತಿಸಿ ಕೈಕೊಟ್ಟ ಪೊಲೀಸ್ ಪೇದೆ: ನೊಂದ ಯುವತಿಯಿಂದ ಠಾಣೆ ಮುಂದೆ ಪ್ರತಿಭಟನೆ

ಬೆಂಗಳೂರು: ಮದುವೆ ಆಗ್ತೀನಿ ಎಂದು ಯುವತಿ ಜತೆ ದೈಹಿಕ ಸಂಪರ್ಕ ಬೆಳೆಸಿದ್ದ ಆರೋಪ ಪೊಲೀಸ್ ಕಾನ್ಸ್ಟೇಬಲ್ ವಿರುದ್ಧ ಕೇಳಿ ಬಂದಿದೆ. ತನ್ನನ್ನು ಪೊಲೀಸ್ ಕಾನ್ಸ್ಟೇಬಲ್ ಮದುವೆ ಆಗಲೇಬೇಕು ಎಂದು ಒತ್ತಾಯಿಸಿ ನ್ಯಾಯಕ್ಕಾಗಿ ಸಂತ್ರಸ್ತ ಯುವತಿ ಬಸವನಗುಡಿ ಠಾಣೆ ಮುಂದೆ ಪ್ರತಿಭಟನೆಗೆ ಮುಂದಾಗಿದ್ದಾರೆ.



ಯುವತಿಗೆ ಮೋಸ ಮಾಡಿದ ಪೊಲೀಸ್ ಕಾನ್ಸ್ಟೇಬಲ್ ಅನಿಲ್ ಕುಮಾರ್. ಪೊಲೀಸ್ ಕಾನ್ಸ್ಟೇಬಲ್ ಕಡೆಯಿಂದ ಮೋಸ ಹೋದ ಯುವತಿ ನಾಗವೇಣಿ. ನಾಗವೇಣಿ ಚಿತ್ರದುರ್ಗದ ಮೂಲದವರು. ಕಳೆದ 4 ವರ್ಷಗಳಿಂದ ನಾಗವೇಣಿಯನ್ನು ಅನಿಲ್ ಕುಮಾರ್ ಪ್ರೀತಿಸುತ್ತಿದ್ದ. ಇನ್ನು, ಕೇವಲ ಪ್ರೀತಿ ಮಾಡಿದ್ದಲ್ಲದೇ ಮದುವೆ ಆಗ್ತೀನಿ ಎಂದು ನಂಬಿಸಿ ದೈಹಿಕವಾಗಿ ಬಳಸಿಕೊಂಡಿದ್ದ. ಈಗ ಮದುವೆ ಆಗು ಎಂದರೆ ಆಗಲ್ಲ, ನನಗೆ ಬೇರೊಬ್ಬರ ಜರೆ ಎಂಗೇಜ್ಮೆಂಟ್ ಆಗಿದೆ ಎಂದು ಬೆದರಿಕೆ ಹಾಕುತ್ತಿದ್ದಾರೆ ಅನಿಲ್ ಎಂದು ನಾಗವೇಣಿ ಆರೋಪಿಸಿದ್ದಾರೆ.

ಏನಿದು ಕೇಸ್..? ಅನಿಲ್ ಕುಮಾರ್ ಸಿರ್ಸಿ ಸರ್ಕಲ್ ಸಮೀಪದ ಪೊಲೀಸ್ ಕ್ವಾರ್ಟರ್ಸ್‌ನಲ್ಲಿ ವಾಸವಾಗಿದ್ದ. ಹೀಗಾಗಿ ನಾಗವೇಣಿ ಅನಿಲ್ ವಿರುದ್ಧ ಜೆಜೆ ನಗರ ಪೊಲೀಸ್ ಠಾಣೆಯಲ್ಲೇ ಕೇಸ್ ಮಾಡಿದ್ದರು.

ಕೋರ್ಟ್‌ನಿಂದ ನಿರೀಕ್ಷಿತ ಜಾಮೀನು ಪಡೆದು ಅನಿಲ್ ಕೆಲಸಕ್ಕೆ ಹಾಜರಾಗಿದ್ದ. ಈಗ ಅನಿಲ್ ಬಸವನಗುಡಿ ಪೊಲೀಸ್ ಠಾಣೆಯಲ್ಲೇ ಕೆಲಸ ಮಾಡುತ್ತಿದ್ದಾರೆ. ಹೀಗಾಗಿ ಯುವತಿ ಪೊಲೀಸ್ ಠಾಣೆ ಮುಂದೆ ಪ್ರತಿಭಟನೆ ನಡೆಸುತ್ತಿದ್ದಾರೆ.

# ಬಿಹಾರದ ಮಾಜಿ ಸಿಎಂ ದಿ. ಕಪೂರಿ ಠಾಕೂರ್ ಗೆ 'ಭಾರತ ರತ್ನ'

ನವದೆಹಲಿ: ಬಿಹಾರದ ಮಾಜಿ ಮುಖ್ಯಮಂತ್ರಿ ಕಪೂರಿ ಠಾಕೂರ್ ಅವರಿಗೆ ಭಾರತ ರತ್ನ ನೀಡುವುದಾಗಿ ಕೇಂದ್ರ ಸರ್ಕಾರ ಘೋಷಿಸಿದೆ.



ಕಪೂರಿ ಠಾಕೂರ್ ಅವರಿಗೆ ಮರಣೋತ್ತರವಾಗಿ ಭಾರತ ರತ್ನ ನೀಡಲಾಗುತ್ತಿದೆ. ಬುಧವಾರ ಕಪೂರಿ ಠಾಕೂರ್ ಅವರ 100ನೇ ಜನ್ಮ ವರ್ಷಾಚರಣೆಗೂ ಮುನ್ನ ಅವರಿಗೆ ಭಾರತ ರತ್ನ ನೀಡಿ ಗೌರವಿಸುವುದಾಗಿ ಘೋಷಿಸಲಾಗಿದೆ.

ಕಪೂರಿ ಠಾಕೂರ್ ಅವರಿಗೆ ಭಾರತ ರತ್ನ ನೀಡಬೇಕೆಂದು ಜನತಾ ದಳ ಯುನೈಟೆಡ್ (ಜೆಡಿಯು) ಒತ್ತಾಯಿಸಿತ್ತು. ಈ ಘೋಷಣೆಯ ನಂತರ ಜೆಡಿಯು ಮೋದಿ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸಿದೆ.

**36 ವರ್ಷಗಳ ತಪಸ್ಸಿಗೆ ಫಲ ಸಿಕ್ಕಿದೆ** 36 ವರ್ಷಗಳ ತಪಸ್ಸಿನ ಫಲ ನಮಗೆ ಸಿಕ್ಕಿದೆ ಎಂದು ಕಪೂರಿ ಠಾಕೂರ್ ಅವರ ಪುತ್ರ ರಾಮನಾಥ್ ಠಾಕೂರ್ ಹೇಳಿದ್ದಾರೆ. ನನ್ನ ಕುಟುಂಬ ಮತ್ತು ಬಿಹಾರದ 15 ಕೋಟಿ ಜನರ ಪರವಾಗಿ ನಾನು ಸರ್ಕಾರಕ್ಕೆ ಧನ್ಯವಾದ ಹೇಳಲು ಬಯಸುತ್ತೇನೆ.

**ಬಿಹಾರದ ಸಾರ್ವಜನಿಕ ನಾಯಕ ಕಪೂರಿ ಠಾಕೂರ್ ಯಾರು?** 1970ರ ದಶಕದಲ್ಲಿ ಕಪೂರಿ ಠಾಕೂರ್ ಎರಡು ಬಾರಿ ಬಿಹಾರದ ಮುಖ್ಯಮಂತ್ರಿಯಾಗಿದ್ದರು. ಅವರು ಬಿಹಾರದ ಎರಡನೇ ಉಪಮುಖ್ಯಮಂತ್ರಿಯೂ ಆಗಿದ್ದರು.

ಸ್ವಾತಂತ್ರ್ಯ ಹೋರಾಟಗಾರರ ಜೊತೆಗೆ ಶಿಕ್ಷಕರೂ ಆಗಿದ್ದರು. ಅವರು ಹಿಂದುಳಿದ ಸಮುದಾಯದಿಂದ ಬಂದವರು. ಮಂಡಲ ಚಳವಳಿಗೂ ಮುನ್ನ ಮುಖ್ಯಮಂತ್ರಿಯಾಗಿದ್ದಾಗ ಹಿಂದುಳಿದ ವರ್ಗದವರಿಗೆ ಶೇ.27ರಷ್ಟು ಮೀಸಲಾತಿ ನೀಡಿದ್ದರು. ಲೋಕನಾಯಕ್ ಜೈಪ್ರಕಾಶ್ ನಾರಾಯಣ್ ಮತ್ತು ರಾಮ್ ಮನೋಹರ್ ಲೋಹಿಯಾ ಅವರ ರಾಜಕೀಯ ಗುರುಗಳು.

# ಅಯೋಧ್ಯೆ ರಾಮಮಂದಿರದಲ್ಲಿ ಭಾರೀ ನೂಕುನುಗ್ಗಲು; ಲಕ್ಷಾಂತರ ಭಕ್ತರಿಂದ ದರ್ಶನ

ಅಯೋಧ್ಯೆ: ಜನವರಿ 22ರಂದು ಅಯೋಧ್ಯೆಯ ಭವ್ಯ ರಾಮಮಂದಿರದಲ್ಲಿ ರಾಮಲಲ್ಲಾನ ಪ್ರಾಣ ಪ್ರತಿಷ್ಠಾಪನೆಯ ನಂತರ ರಾಮ ಭಕ್ತರಿಗಾಗಿ ದೇವಾಲಯವನ್ನು ತೆರೆಯಲಾಗಿದ್ದು ರಾಮಲಲ್ಲಾನ ದರ್ಶನ ಪಡೆಯಲು ಭಾರೀ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದು ಮೊದಲ ದಿನವೇ 2 ಲಕ್ಷಕ್ಕೂ ಹೆಚ್ಚು ಭಕ್ತರು ದರ್ಶನ ಪಡೆದಿದ್ದಾರೆ ಎಂದು ಹೇಳಲಾಗುತ್ತಿದೆ.

ರಾಮಲಲ್ಲಾನ ದರ್ಶನ ಪಡೆಯಲು ರಾಮ ಮಂದಿರಕ್ಕೆ ಅಪಾರ ಸಂಖ್ಯೆಯಲ್ಲಿ ರಾಮಭಕ್ತರು ಆಗಮಿಸುತ್ತಿದ್ದಾರೆ. ರಾಮಮಂದಿರದಲ್ಲಿ ರಾಮಭಕ್ತರ ದಂಡೇ ನೆರೆದಿದೆ. ಈ 'ೀಳೆ ನೂಕುನುಗ್ಗಲು ಉಂಟಾಗಿ ಭಕ್ತರೊಬ್ಬರು



ಗಾಯಗೊಂಡಿದ್ದಾರೆ. ಈ ವಿಚಾರಕ್ಕೆ ಸಿಎಂ ಯೋಗಿ ಆದಿತ್ಯನಾಥ್ ಕೂಡ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಸ್ವತಃ ಸಿಎಂ ಯೋಗಿ ಅಯೋಧ್ಯೆ ತಲುಪಿದ್ದಾರೆ. ಇದರೊಂದಿಗೆ ಅವರು ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ಮಂದಿರ ಸಂಕೀರ್ಣದ ವೈಮಾನಿಕ ಸಮೀಕ್ಷೆ ನಡೆಸಿದರು.

ಜನವರಿ 23ರಂದು ಮಧ್ಯಾಹ್ನದವರೆಗೆ ಎರಡೂವರೆ ರಿಂದ ಮೂರು ಲಕ್ಷ ಭಕ್ತರು ಭೇಟಿ ನೀಡಿದ್ದಾರೆ. ದಿನದ ಅಂತ್ಯದ ವೇಳೆಗೆ ಸುಮಾರು ಐದು ಲಕ್ಷ ಭಕ್ತರು ಭೇಟಿ ನೀಡಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಷ್ಟೇ ಅಲ್ಲದೆ ಅಪಾರ ಸಂಖ್ಯೆಯಲ್ಲಿ ಭಕ್ತರು ಭೇಟಿ ನೀಡಲು ಅಯೋಧ್ಯೆಯಲ್ಲಿ ಉಳಿದಿದ್ದಾರೆ. ಎಲ್ಲಾ ವ್ಯವಸ್ಥೆಗಳು ನಿಯಂತ್ರಣದಲ್ಲಿವೆ. ಎಂಟು ಸಾವಿರಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿಯನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ.

ಪ್ರಾಣ ಪ್ರತಿಷ್ಠೆಯ ಮರುದಿನ, ಅಯೋಧ್ಯೆಯಲ್ಲಿ ಹೊಸದಾಗಿ ನಿರ್ಮಿಸಲಾದ ರಾಮಮಂದಿರದಲ್ಲಿ ರಾಮಲಲ್ಲಾನ ದರ್ಶನಕ್ಕಾಗಿ ಅಪಾರ ಸಂಖ್ಯೆಯ ಭಕ್ತರು ಆಗಮಿಸಿದ್ದಾರೆ.

ರಾಮಲಲ್ಲಾನ ದರ್ಶನ ಪಡೆಯಲು ಬೆಳಗಿನ ಜಾವ 3 ಗಂಟೆಯಿಂದಲೇ ಭಕ್ತರು ದೇವಸ್ಥಾನದಲ್ಲಿ ಸಾಲುಗಟ್ಟಿ ನಿಂತಿದ್ದರು. ನೂಕುನುಗ್ಗಲು ಕಂಡ ದೇವಸ್ಥಾನದ ಟ್ರಸ್ಟ್ ಸದಸ್ಯರು ಅಭೂತಪೂರ್ವ ಜನಸಂದಣಿಯನ್ನು ನಿಯಂತ್ರಿಸಲು ಸೂಕ್ತ ಭದ್ರತೆ ಒದಗಿಸಿ ವ್ಯವಸ್ಥೆ ಮುಂದುವರಿಸುವಂತೆ ಜಿಲ್ಲಾಡಳಿತವನ್ನು ಒತ್ತಾಯಿಸಿದ್ದರು.

# ಜ.25 ರಂದು ಜಿಲ್ಲಾಡಳಿತದಿಂದ ರಾಷ್ಟ್ರೀಯ ಮತದಾರರ ದಿನಾಚರಣೆ

ಧಾರವಾಡ: ಭಾರತ ಚುನಾವಣಾ ಆಯೋಗ ಹಾಗೂ ಜಿಲ್ಲಾಡಳಿತದ ಸಹಕಾರದಲ್ಲಿ ರಾಷ್ಟ್ರೀಯ ಮತದಾರರ ದಿನವನ್ನು ಜ. 25 ರಂದು ಬೆಳಿಗ್ಗೆ 10 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಂಸ್ಕೃತಿ ಭವನದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪರಶುರಾಮ ಎಫ್. ದೊಡ್ಡಮನಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸ್ವರೂಪ್.ಟಿ.ಕೆ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಅಪರ ಜಿಲ್ಲಾಧಿಕಾರಿಗಳಾದ ಗೀತಾ.ಸಿ.ಡಿ, ಧಾರವಾಡ ಉಪ ವಿಭಾಗಾಧಿಕಾರಿ ಶಾಲಂ ಹುಸೇನ್, ಹುಬ್ಬಳ್ಳಿ-ಧಾರವಾಡದ ಪೊಲೀಸ್ ಆಯುಕ್ತರಾದ ರೇಣುಕಾ ಕೆ. ಸುಕುಮಾರ, ಧಾರವಾಡ ಪೊಲೀಸ್ ವರಿಗಣ್ಣಧಿಕಾರಿ ಡಾ. ಗೋಪಾಲ ಎಮ್. ಬ್ಯಾಕೋಡ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ, ಕರ್ನಾಟಕ ವಿಶ್ವವಿದ್ಯಾಲಯದ ಕುಲಸಚಿವ ಎ.ಚನ್ನಪ್ಪ ಅವರು ಅತಿಥಿಗಳಾಗಿ ಆಗಮಿಸುವರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಅರ್ಜಿ ಸಲ್ಲಿಸುವ ಅವದಿ ವಿಸ್ತರಣೆ

ಧಾರವಾಡ: ಪ್ರಸ್ತುತ ಸಾಲಿನ ಧಾರವಾಡ ಜಿಲ್ಲೆಯ ನೋಂದಾಯಿತ ಮದರಸಾಗಳಿಗೆ ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣವನ್ನು ನೀಡಲು ಅರ್ಹ ಸಂಸ್ಥೆಗಳಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು.

ಅರ್ಜಿ ಸಲ್ಲಿಸುವ ಅವದಿಯನ್ನು ಜನವರಿ 31, 2024ರ ವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ. 0836-2971590, https://dom.karnataka.gov.in ಗೆ ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಬುರಗಿ: ಶ್ರೀರಾಮನ ಮೆರವಣಿಗೆ ವೇಳೆ ಗಲಾಟೆ; ವಾಡಿ ಪಟ್ಟಣದಲ್ಲಿ ನಿಷೇಧಾಜ್ಞೆ



ಕಲಬುರಗಿ: ಕಲಬುರಗಿ ಜಿಲ್ಲೆಯ ವಾಡಿ ಪಟ್ಟಣದಲ್ಲಿ ಶ್ರೀರಾಮನ ಮೆರವಣಿಗೆ ವೇಳೆ ನಡೆದ ಜಗಳದ ಹಿನ್ನೆಲೆಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಮತ್ತು ಯಾವುದೇ ಅಹಿತಕರ ಘಟನೆಯನ್ನು ತಡೆಯಲು ಮುನ್ನೆಚ್ಚರಿಕೆ ಕ್ರಮವಾಗಿ ಸಿಆರ್‌ಪಿಸಿ ಸೆಕ್ಷನ್ 144ರ ಅಡಿಯಲ್ಲಿ ಜನವರಿ 25ರ ಬೆಳಿಗ್ಗೆ 6 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೆರವಣಿಗೆ ವೇಳೆ ಎರಡು ಗುಂಪುಗಳ ನಡುವೆ ತೀವ್ರ ವಾಗ್ವಾದ ನಡೆದಿದ್ದು ನಂತರ ಕಲ್ಲು ತೂರಾಟ ನಡೆಸಿದ್ದರಿಂದ ಪರಿಸ್ಥಿತಿ ಉಲ್ಬಣಗೊಂಡಿತ್ತು. ನಂತರ ಪೊಲೀಸರು ಮಧ್ಯಪ್ರವೇಶಿಸಿ ಗುಂಪನ್ನು ಚದುರಿಸಲು ಲಾಠಿ ಪ್ರಹಾರ ನಡೆದಿದ್ದರು.

ಅಯೋಧ್ಯೆಯ ರಾಮಮಂದಿರದಲ್ಲಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಮೆರವಣಿಗೆ ನಡೆಸಲಾಗಿತ್ತು. ಇದು ಕೇವಲ ಜಗಳವಾಗಿದ್ದರಿಂದ ಪರಿಸ್ಥಿತಿಯನ್ನು ಶೀಘ್ರವಾಗಿ ಹತೋಟಿಗೆ ತರಲಾಯಿತು. ಪ್ರದೇಶದಲ್ಲಿ ಯಾವುದೇ ಉದ್ವಿಗ್ನತೆ ಇಲ್ಲ. ಆದರೆ ಮುಂಜಾಗ್ರತಾ ಕ್ರಮವಾಗಿ, ವಾಡಿ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಚಿತ್ತಾಪುರ ತಾಲೂಕು ಜನವರಿ 25ರ ಬೆಳಗ್ಗೆ 6ರವರೆಗೆ ಜಾರಿಯಲ್ಲಿರುತ್ತದೆ. ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಈ ಮಧ್ಯೆ, ಕಲಬುರಗಿ ನಗರದ ಹೊರವಲಯದ ಕೊಟ್ನೂರು ಗ್ರಾಮದಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ಪ್ರತಿಮೆಯನ್ನು ವಿರೂಪಗೊಳಿಸಿರುವುದನ್ನು ಖಂಡಿಸಿ ವಿವಿಧ ದಲಿತ ಸಂಘಟನೆಗಳು ಮಂಗಳವಾರ ಪ್ರತಿಭಟನೆ ನಡೆಸಿದ ನಂತರ ಜಿಲ್ಲೆಯ ಹಲವೆಡೆ ಉದ್ವಿಗ್ನ ಪರಿಸ್ಥಿತಿ ಉಂಟಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕೆಲ ಕಿಡಿಗೇಡಿಗಳು ಅಂಬೇಡ್ಕರ್ ಪ್ರತಿಮೆಗೆ ಪಾದರಕ್ಷೆಯ ಹಾರವನ್ನು ಹಾಕಿದ್ದಾರೆ ಎಂದು ಆರೋಪಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ನಾವು ತಪ್ಪಿತಸ್ಥರನ್ನು ಗುರುತಿಸಲು ಪ್ರಯತ್ನಿಸುತ್ತಿದ್ದೇವೆ. ಆಪಾದಿತ ಕೃತ್ಯದಲ್ಲಿ ಭಾಗಿಯಾದವರ ವಿರುದ್ಧ ಕಾನೂನಿನ ಪ್ರಕಾರ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

ಸೋಮವಾರ ತಡರಾತ್ರಿ ಈ ಘಟನೆ ನಡೆದಿದೆ. ಆದರೆ ನಮ್ಮ ತಂಡ ಸ್ಥಳದಲ್ಲಿದ್ದು, ಪರಿಸ್ಥಿತಿಯನ್ನು ಹತೋಟಿಗೆ ತರಲಾಗಿದೆ ಎಂದು ಅವರು ಹೇಳಿದರು.


**ನಗರಸಭೆ ಕಾರ್ಯಾಲಯ ಗೋಕಾಕ.**
**ಸಂಗೊಳ್ಳಿ ರಾಯಣ್ಣ ವೃತ್ತ ಗೋಕಾಕ-591307 ಜಿಲ್ಲೆ:ಬೆಳಗಾವಿ ರಾಜ್ಯ:ಕರ್ನಾಟಕ ಪೋ.ನಂ:08332-225003**
WebSite:www.gokakcity.mrc.gov.in E-Mail:ka.gokak.cmc@gmail.com

ನಂ.ನಸಗೋ/ಆವಿ/ಟೆಂಡರ/2023-24/1091 ದಿನಾಂಕ: 23-01-2024

**ಟೆಂಡರ ಪ್ರಕಟಣೆ (through karnataka public procurement portal)**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದ್ಯಾದೇಶ 1999-2000 ರ ಪ್ರಕಾರ ಸ್ಟ್ಯಾಂಡರ್ಡ ಟೆಂಡರ ಡಾಕ್ಯುಮೆಂಟ್ ನಿಯಮದನ್ವಯ ನಗರಸಭೆಯ ಸಾಮಾನ್ಯ ನಿಧಿಯಡಿ ಸನ್ 2024-25 ನೇ ಸಾಲಿಗೆ ಬೇಕಾಗುವ ಕ್ರಿಮೀನಾಶಕ, ಬೀದಿಗುಡಿಸುವ ಹಾಗೂ ಸುರಕ್ಷತಾ ಸಲಕರಣೆಗಳನ್ನು ಖರೀದಿಸಲು, ಹೊರಗುತ್ತಿಗೆ ಆಧಾರದ ಮೇಲೆ 03 ವಾಹನಗಳನ್ನು ಮಾಸಿಕ ಗುತ್ತಿಗೆ ಆಧಾರದ ಮೆಲೆ ಪಡೆಯುವ ಕುರಿತು ಹಾಗೂ ಸನ್ 2021-22ನೇ ಸಾಲಿನ 15ನೇ ಹಣಕಾಸು ಅನುದಾನದಡಿ ಟ್ರೇಲರ್ ಮೌಂಟೆಡ್ ನೀರಿನ ಟ್ಯಾಂಕರ್ ಖರೀದಿಸುವ ಕುರಿತು karnataka public procurement portal ಮುಖಾಂತರ ಟೆಂಡರನ್ನು ಅಹ್ವಾನಿಸಲಾಗಿದೆ. ವಿವರ ಈ ಕೆಳಕಂಡಂತಿರುತ್ತದೆ.

| Sl No | Description | Unit | Put Tender Amount (In Lakhs.) | EMD (in Rs) | Tender No |
|---|---|---|---|---|---|
| 1 | SUPPLY OF CHEMICALS, STREET SWEEPING & SAFETY EQUIPEMENTS | As mentioned in Tender Document | 34.99 | 69980.00 | DMA/2023-24/IND1279 |
| 2 | HIRING OF CAB FOR COMMISSIONER OFFICE USE | 01 | 4.80 | 12000.00 | DMA/2023-24/SE2095 |
| 3 | HIRING OF CAB FOR ASST EXECUTIVE ENGINEER FOR OFFICE USE | 01 | 4.80 | 12000.00 | DMA/2023-24/SE2097 |
| 4 | HIRING OF CAB FOR ASST EXECUTIVE ENGINEER (ENV) FOR OFFICE USE | 01 | 4.80 | 12000.00 | DMA/2023-24/SE2096 |
| 5 | SUPPLY OF 3500 LTR CAPACITY TRAILOR MOUNTED WATER TANKER | 02 | 6.00 | 15000.00 | DMA/2023-24/IND1231 |

1)ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ: 07-02-2024 ಸಾಯಂಕಾಲ 05:30 ರ ವರೆಗೆ.
2)ಟೆಂಡರ ತೆರೆಯುವ ದಿನಾಂಕ: 09-02-2024 ಬೆಳಿಗ್ಗೆ 11:00 ಗಂಟೆಗೆ.

ಹೆಚ್ಚಿನ ಮಾಹಿತಿಯನ್ನು ಹಾಗೂ ವಿವರಗಳನ್ನು ಅಂತರ್ಜಾಲದ ವಿಳಾಸ www.gokakcity.mrc.gov.in & http://kppp.karnataka.gov.in ರಲ್ಲಿ ಪಡೆಯಬಹುದಾಗಿದೆ.

ಸಹಿ/-ಪೌರಾಯುಕ್ತರು,
ನಗರಸಭೆ, ಗೋಕಾಕ.

DIPR/BGM/RO-NO-986/MCA/2023-24

## ಮಂಟೂರು ಮಹಾಲಕ್ಷ್ಮಿ ಏತ ನೀರಾವರಿ ಪ್ರಾಯೋಗಿಕ ಪ್ರಾರಂಭ: ಸಚಿವ ಸತೀಶ್ ಜಾರಕಿಹೊಳಿಗೆ ಅಭಿನಂದನೆ ಸಲ್ಲಿಸಿದ ರೈತರು



ಮುದೋಳ: ಮಂಟೂರ ಶ್ರೀ ಮಹಾಲಕ್ಷ್ಮಿ ಏತ ನೀರಾವರಿ ಪ್ರಾಯೋಗಿಕವಾಗಿ ಪ್ರಾರಂಭವಾಗಿದ್ದು, ಈ ಭಾಗದ ರೈತರು ಸಂತಸಗೊಂಡು ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಮಳೆಯಾಶ್ರಿತ ಪ್ರದೇಶಕ್ಕೆ ಏತ ನೀರಾವರಿ ಯೋಜನೆ ಮೂಲಕ ನೀರುಣಿಸಬೇಕೆಂಬ ರೈತರ ದಶಕಗಳ ಬೇಡಿಕೆಗೆ ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿ ಸ್ಪಂದಿಸಿದ್ದು, ಅವರ ನಿರ್ದೇಶನದ ಮೇರೆಗೆ ಶ್ರೀ ಮಹಾಲಕ್ಷ್ಮಿ ಮಂಟೂರ್ ಏತ ನೀರಾವರಿ ಯೋಜನೆ ಪ್ರಾಯೋಗಿಕವಾಗಿ ಪ್ರಾರಂಭಿಸಲಾಯಿತು. ಸಚಿವರ ಈ ಉತ್ತಮ ಕಾರ್ಯಕ್ಕೆ ಈ ಭಾಗದ ರೈತರು ಸಂತಸಗೊಂಡಿದ್ದಾರೆ.

ಈ ಹಿಂದೆ ಜಿಎಲ್ ಬಿಸಿ ಮುಖ್ಯ ಕಾಲುವೆ 109 ರ ವರೆಗೆ ಮಾತ್ರ ನೀರು ಹರಿಯುತ್ತಿದ್ದು ಬಿಳಿಗಿ ಭಾಗದ ರೈತರಿಗೆ ತಲುಪುತ್ತಿರಲಿಲ್ಲ ಹಾಗಾಗಿ ಕೆಳಭಾಗದ ರೈತರು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ವಿನಂತಿಸಿಕೊಂಡರು.

ನಂತರ ಸ್ವತಃ ಸಚಿವರು ಪರಿಶೀಲನೆ ಮಾಡಿ ಅಧಿಕಾರಿಗಳೊಂದಿಗೆ ಚರ್ಚಿಸಿ ಮಂಟೂರ್ ಶ್ರೀ ಮಹಾಲಕ್ಷ್ಮಿ ಏತ ನೀರಾವರಿ ಕಾಮಗಾರಿ ಪರಿಶೀಲಿಸಿ ಸದರಿ ಯೋಜನೆ ಕುಂಠಿತವಾಗಿ ನಡೆಯುವುದನ್ನು ಮನಗೊಂಡು ನೀರಾವರಿ ಮತ್ತು ಹೆಸ್ಕಾಂ ಅಧಿಕಾರಿಗಳೊಂದಿಗೆ ತುರ್ತು ಸಭೆ ಕರೆದರು. ನಂತರ ಸದರಿ ಕಾಮಗಾರಿಯನ್ನು ಹತ್ತು ದಿನಗಳಲ್ಲಿ ರೈತರಿಗೆ ನೀರು ಕೊಡಲು ಸೂಚಿಸಿದರು ಅಧಿಕಾರಿಗಳು ಹಗಲು ರಾತ್ರಿ ಎನ್ನದೆ ಕಾಮಗಾರಿಯನ್ನು ಪೂರ್ಣಗೊಳಿಸಿದ್ದಾರೆ. ಮಳೆಯಾಶ್ರಿತ ಪ್ರದೇಶಕ್ಕೆ ಏತ ನೀರಾವರಿ ಯೋಜನೆ ಮೂಲಕ ನೀರುಣಿಸಬೇಕೆಂಬ ರೈತರ ದಶಕಗಳ ಬೇಡಿಕೆಗೆ ಸಚಿವ ಸತೀಶ್ ಜಾರಕಿಹೊಳಿ ಸ್ಪಂದಿಸಿರುವುದು ರೈತರ ಮುಖದಲ್ಲಿ ಮಂದಹಾಸ ಮುಡುವಂತೆ ಮೂಡಿದೆ.

ಈ ಸಂದರ್ಭದಲ್ಲಿ ನೀರಾವರಿ ಅಧಿಕಾರಿಗಳಾದ ಎಸ್ಇ ಮತ್ತು ಎಇಇ ಮತ್ತು ಹೆಸ್ಕಾಂ ಅಧಿಕಾರಿಗಳಾದ ಸಿಇ ಮತ್ತು ಎಇಇ ಹಾಗೂ ಬೀಳಗಿ ಮುಧೋಳ ಹಾಗೂ ನಿರ್ದೇಶಕರು ಮಹಾಮಂಡಲ ಹಿಡಕಲ್ ಡ್ಯಾಮ ವೆಂಕಣ್ಣ ಜಂಬಗಿ, ಲಕ್ಷ್ಮಣ್ ಮಾಳಗಿ, ಕೆಎಂಎಫ್ ನಿರ್ದೇಶಕರು ಬಾಗಲಕೋಟ ಪಂಡಿತಪ್ಪ ಅಮಲಜರಿ, ಹಾಗೂ ಸಚಿವರ ಆಪ್ತರಾದ ಶಿವು ಪಾಟೀಲ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತ ಸಹಾಯಕರಾದ ಪಾಂಡು ಮಣ್ಣಿಕೇರಿ ಹಾಗೂ ಮುಖಂಡರು ಅಧಿಕಾರಿಗಳು ಉಪಸ್ಥಿತರಿದ್ದರು.

## ಜ.26 ರಿಂದ ಫೆ.23 ರವರೆಗೆ ಸಂವಿಧಾನ ಜಾಗೃತಿ ಜಾಥಾ ಸಂಚಾರ: ಯಶಸ್ವಿಗೆ ಸಹಕರಿಸಿ

ಬಳ್ಳಾರಿ: ಸಂವಿಧಾನದ ಆಶಯಗಳನ್ನು ಜನಸಾಮಾನ್ಯರಿಗೆ ತಿಳಿಸುವ ಮೂಲ ಉದ್ದೇಶದಿಂದ ಸಂವಿಧಾನ ಜಾಗೃತಿ ಜಾಥಾ ಮೆರವಣಿಗೆಯು ಜಿಲ್ಲೆಯಲ್ಲಿ ಜ.26 ರಿಂದ ಫೆ.23 ರವರೆಗೆ ನಡೆಯಲಿದೆ ಇದರ ಯಶಸ್ವಿಗೆ ಎಲ್ಲರೂ ಸಹಕರಿಸುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ತಿಳಿಸಿದರು.

ಅವರು, ವರ್ಚುವಲ್ ಮೂಲಕ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಜ.26 ರಂದು ಜಿಲ್ಲಾ ಉಸ್ತುವಾರಿ ಸಚಿವರು ವಿಮ್ಸ್ ಮೈದಾನದಲ್ಲಿ ಸಂವಿಧಾನ ಜಾಗೃತಿ ಜಾಥಾಕ್ಕೆ ಚಾಲನೆ ನೀಡಲಿದ್ದಾರೆ ಎಂದು ಹೇಳಿದರು.

ಜಿಲ್ಲೆಯಲ್ಲಿನ ಒಟ್ಟು 100 ಗ್ರಾಮ ಪಂಚಾಯತಿ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಸಂಚಾರ ಮಾರ್ಗ ನಕ್ಷೆ ತಯಾರಿಸಿ, ಮೆರವಣಿಗೆಯ ರಚನೆ ಸಂಯೋಜನೆ, ಮಾರ್ಗ, ತಂಗುವಿಕೆ ಮತ್ತು ವಸತಿ, ಸುರಕ್ಷತೆ ಇತ್ಯಾದಿಗಳನ್ನು ಸಿದ್ದಪಡಿಸಲಾಗಿದೆ. ನಿಗದಿತ ದಿನಾಂಕ, ಸಮಯದೊಳಗೆ ಕಾರ್ಯಕ್ರಮ ಯಶಸ್ವಿಯಾಗಿ ಜರುಗುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.



ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿ, ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಜಾಥವು ತೆರಳುವಾಗ ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರರು ಹಾಗೂ ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿ ಹಾಗೂ ಗ್ರಾಮ ಪಂಚಾಯತಿ ಅಧಿಕಾರಿಗಳು ಸಂವಿಧಾನ ಜಾಗೃತಿ ಜಾಥವು ಯಶಸ್ವಿಯಾಗಿ ಸಂಚರಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಭಾರತದ ಸಂವಿಧಾನಕ್ಕೆ ಸಂಬಂಧಿಸಿದಂತೆ, ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿನ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಪ್ರಬಂಧ ಹಾಗೂ ಚರ್ಚಾ ಸ್ಪರ್ಧೆಯನ್ನು ಆಯೋಜಿಸಿ, ಸಂವಿಧಾನ ಜಾಥವು ತಾಲ್ಲೂಕಿಗೆ ಪ್ರವೇಶಿಸಿದಾಗ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ಹಾಗೂ ಪ್ರಶಸ್ತಿ ಪತ್ರಗಳನ್ನು ನೀಡಿ, ವಿದ್ಯಾರ್ಥಿಗಳನ್ನು ಜಾಥಾದಲ್ಲಿ ಪಾಲ್ಗೊಳ್ಳುವಂತೆ ಕ್ರಮವಹಿಸಬೇಕು ಎಂದರು.

ಜ.26 ರಿಂದ ಫೆ.23 ರವರೆಗೆ ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾಥಾ ಸಂಚರಿಸಿ ಜನ ಸಾಮಾನ್ಯರಿಗೆ ಅರಿವು ಮೂಡಿಸುವ ಸಂದರ್ಭದಲ್ಲಿ ಸ್ಥಳೀಯ ಎಲ್ಲಾ ಸಂಘಟನೆಗಳು ಪಾಲ್ಗೊಂಡು ಸಡಗರದಿಂದ ಹಬ್ಬದ ರೀತಿಯಲ್ಲಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಹಕಾರ ನೀಡುವಂತೆ ಅವರು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಮಾತನಾಡಿ, "ಸಂವಿಧಾನ ಜಾಗೃತಿ ಜಾಥ" ಕಾರ್ಯಕ್ರಮದ ಉದ್ದೇಶ ಸಫಲವಾಗುವಂತೆ ಮಾಡಲು ಎಲ್ಲರ ಸಹಭಾಗಿತ್ವ ಬಹುಮುಖ್ಯವಾಗಿದ್ದು, ಈಗಾಗಲೇ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಸ್ಥಳೀಯ ವಿವಿಧ ಸಂಘಟನೆಗಳೊಂದಿಗೆ ಸಭೆ ನಡೆಸಿ ಎಲ್ಲರನ್ನು ಸದರಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಲು ತಿಳಿಸಲಾಗಿದೆ ಎಂದರು.

ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಸತೀಶ್ ಅವರು ಮಾತನಾಡಿ, ಸಂವಿಧಾನ ಜಾಗೃತಿ ಜಾಥಾವು ಜಿಲ್ಲೆಯಲ್ಲಿ ಜ.26 ರಿಂದ ಆರಂಭವಾಗಿ ಫೆ.23 ರ ವರೆಗೆ ಸಂಚರಿಸಲಿದೆ. ಫೆಬ್ರವರಿ 25 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ರಾಜ್ಯ ಮಟ್ಟದ ಸಂವಿಧಾನ ಜಾಗೃತಿ ಸಮಾವೇಶ ತಲುಪಲಿದೆ ಎಂದರು.

ಸ್ತಬ್ದ ಚಿತ್ರದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರ, ಸಂವಿಧಾನದ ಪೀಠಿಕೆ, ಪರಿಕಲ್ಪನೆ, ಪ್ರಮುಖ ವ್ಯಕ್ತಿಗಳ ಮಾಹಿತಿ, ಸಾಹಿತ್ಯ, ಕಲೆ, ಮತ್ತು ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳನ್ನು ಸ್ಥಬ್ದ ಚಿತ್ರದಲ್ಲಿ ಅಳವಡಿಸಲಾಗುವುದು ಎಂದು ತಿಳಿಸಿದರು.

ಸ್ತಬ್ದ ಚಿತ್ರಗಳ ನಿರ್ಮಾಣಕ್ಕೆ ಈಗಾಗಲೇ ಕ್ರಮವಹಿಸಲಾಗಿದ್ದು, ಸಂವಿಧಾನ ಜಾಗೃತಿ ಜಾಥಾವನ್ನು ಜಿಲ್ಲೆಯಲ್ಲಿ ಅತ್ಯಂತ ವಿಜೃಂಭಣೆಯಿಂದ ನಡೆಸಿ ಯಶಸ್ವಿಗೊಳಿಸಲು ಜಿಲ್ಲೆಯ ಎಲ್ಲಾ ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಂವಿಧಾನದ ಆಶಯಗಳನ್ನು ತಿಳಿದುಕೊಳ್ಳುವಂತೆ ಅವರು ಕೋರಿದರು. ಈ ಸಂದರ್ಭದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ವಿನೂತನವಾಗಿ ದೈಹಿಕ ಶಿಕ್ಷಣ ಶಿಕ್ಷಕರ ದಿನ ಆಚರಣೆ



ಬೆಳಗಾವಿ: ಸ್ಥಳಿಯ ಹಿಂದವಾಡಿಯ ಗೋಮಟೇಶ ವಿದ್ಯಾಪೀಠದ ಆವರಣದಲ್ಲಿ ನೇತಾಜಿ ಸುಭಾಷ ಚಂದ್ರ ಬೋಷ ಅವರ ಜಯಂತಿಯ ಅಂಗವಾಗಿ ಟಿಳಕವಾಡಿ ಜೋನದ " ದೈಹಿಕ ಶಿಕ್ಷಣ ಶಿಕ್ಷಕರ ದಿನಾಚರಣೆಯನ್ನು " ವಿನೂತನವಾಗಿ ಆಚರಿಸಲಾಯಿತು.

ಮೊದಲಿಗೆ ಸುಭಾಷಚಂದ್ರ ಬೋಷ ಅವರ ಭಾವ ಚಿತ್ರದ ಮುಂದೆ ದೀಪವನ್ನು ಗೋಮಟೇಶ ವಿದ್ಯಾಪೀಠದ ಅಧಿಷ್ಠಾತಾ, ಮಾಜಿ ಶಾಸಕರು ಆದ ಶ್ರೀ ಸಂಜಯ ಬಿ ಪಾಟೀಲ ಅವರು ಬೆಳಗಿಸಿ, ಧ್ವಜಾರೋಹಣವನ್ನು ನೇರವೇರಿಸಿದರು. ವೇದಿಕೆಯ ಮೇಲೆ, ದೈಹಿಕ ಶಿಕ್ಷಣ ಪರೀವಿಕ್ಷಕರಾದ ಶ್ರೀಮತಿ ಜೆ.ಬಿ.ಪಟೇಲ, ಟಿಳಕವಾಡಿ ದೈ.ಶಿ.ಶಿ.ಸಂಘದ ಅಧ್ಯಕ್ಷರಾದ ಶ್ರೀ ವಿವೇಕ ಪಾಟೀಲ, ಕಾರ್ಯದರ್ಶಿಗಳಾದ ಶ್ರೀ ಹೆಚ್.ಬಿ. ಪಾಟೀಲ, ಗೋ.ವಿ.ಪೀ. ಆಡಳಿತ ಕಾರ್ಯನಿರ್ವಾಹಕರಾದ ಶ್ರೀಮತಿ ಹೇಜಲ್ ಪೀಲ್ಬರ್ಟ, ಮುಖ್ಯಾಧ್ಯಾಪಕರುಗಳಾದ ಶ್ರೀ ಸುನೀಲ ಬಿ ಪಾಟೀಲ, ಶ್ರೀ ಬೈರು ಬಿ ಪಾಟೀಲ, ದೈಹಿಕ ಶಿಕ್ಷಣ ವಿಭಾಗದ ಮುಖ್ಯಸ್ಥರಾದ ಶ್ರೀ ಮಹಾವೀರ ಜನಗೌಡಾ, ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಟೀಳಕವಾಡಿ ಜೋನದ ಎಲ್ಲ ದೈಹಿಕ ಶಿಕ್ಷಣ ಶಿಕ್ಷಕರನ್ನು ಗೋಮಟೇಶ ವಿದ್ಯಾಪೀಠದ ಶ್ರೀ ಸಂಜಯ ಬಿ ಪಾಟೀಲ ಅವರು ನೆನಪಿನ ಕಾಣಿಕೆ ನೀಡಿ ಸತ್ಕರಿಸಿದರು.

22 ಶಾಲಾ ಮಕ್ಕಳಿಂದ ಪಥಸಂಚಲನ ಜರುಗಿತು, ನಂತರ ಸಾಮೂಹಿಕ ಕವಾಯತಗಳನ್ನು ನಡೆಸಿಕೊಟ್ಟರು. ಗೋಮಟೇಶ ಶಾಲಾ ಮಕ್ಕಳಿಂದ ನೃತ್ಯರೂಪಕವನ್ನು ಆಯೋಜಿಸಲಾಗಿತ್ತು. ಮೊದಲಿಗೆ ಸ್ವಾಗತಿಸಿ ಕಾರ್ಯಕ್ರಮವನ್ನು ನೀರುಪಿಸಿದವರು ಶ್ರೀಮತಿ ಸರಿತಾ ಬಾಂದೇಕರ, ಕೊನೆಯಲ್ಲಿ ಶ್ರೀಮತಿ ಸವಿತಾ ಹರೇಲ ಅವರು ವಂದಿಸಿದರು, ಕಾರ್ಯಕ್ರವನ್ನು ಗೋಮಟೇಶ ಮರಾಠಿ ಮಾಧ್ಯಮದ ಶಿಕ್ಷಕ ಸಿಬ್ಬಂದಿಯವರು ಹಾಗೂ ವಿದ್ಯಾಪೀಠದ, ಎಲ್ಲ ದೈಹಿಕ ಶಿಕ್ಷಣ ಶಿಕ್ಷಕರು ಸಹಕರಿಸಿದರು. ಕೊನೆಯಲ್ಲಿ ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.

## ಸುರೇಶ ಅಂಗಡಿ ಇವರ ಕನಸಿನ ಅಂಗಡಿ ಅಂತರಾಷ್ಟ್ರೀಯ ಶಾಲೆಯಲ್ಲಿ ಸುಸ್ಥಿರ ಅಭಿವೃದ್ಧಿ ಗುರಿ ಕಾರ್ಯಾಗಾರ

ಬೆಳಗಾವಿ: ಸುರೇಶ ಅಂಗಡಿ ಇವರ ಕನಸಿನ ಅಂಗಡಿ ಅಂತರಾಷ್ಟ್ರೀಯ ಶಾಲೆಯಲ್ಲಿ ಸುಸ್ಥಿರ ಅಭಿವೃದ್ಧಿ ಗುರಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಕಳೆದ ನವಂಬರ್ 29ರಂದು ನಗರದ ಈಫಾ ಹೋಟೆಲನಲ್ಲಿ ಲರ್ನಿಂಗ್ಲಿಂ ಕ್ಫೌಂಡೇಶನ್, ನೀತಿಆಯೋಗ ಮತ್ತು ಶೆಲ್ ಇಂಡಿಯಾ ಸಹಯೋಗದಲ್ಲಿ ಶಿಕ್ಷಕರ ವೃತ್ತಿಪರ ಅಭಿವೃದ್ಧಿತರಬೇತಿ ಕಾರ್ಯಗಾರ ಉದ್ಘಾಟನೆ ಕಾರ್ಯಕ್ರಮವನ್ನು ಡಿಡಿಪಿಐ ಚಿಕ್ಕೋಡಿ ಶ್ರೀ ಎಸ್ ಎಲ್ಲಂಚಾಟೆ, ಬಿಇಓ ಹುಕ್ಕೇರಿ ಶ್ರೀಮತಿ ಪ್ರತಿಭಾ ಪಾಟೀಲ್, ಬಿಇಓ ಬೆಳಗಾವಿ ಶ್ರೀಮತಿ ಎಲ್ಎಸಿ ಹಿರೇಮಠಾ ಹಾಗೂ ಇನ್ನಿತರ ಅತಿಥಿಗಳ ಉಪಸ್ಥಿತಿಯಲ್ಲಿ ಹಮ್ಮಿಕೊಳ್ಳಲಾಯಿತು.

ಶೆಲ್ ಇಂಡಿಯಾದ ಸಾಮಾಜಿಕ ಕಾರ್ಯನಿರ್ವಹಣೆ ಸಲಹೆಗಾರ ದೀಪಕ್ಜೋಷಿ ಕಾರ್ಯಕ್ರಮವನ್ನು ಉದ್ದೇಶಿಸಿ ಮುಂದಿನ ಪೀಳಿಗೆಯನಾಯಕರನ್ನು ಪ್ರೇರೇಪಿಸಲು ಶಲ್, ನೆಕ್ಸ್ಟ್ರ ರಸ್ತಿಕ್ಷಕರನ್ನು ಸಜ್ಜುಗೊಳಿಸುತ್ತಿದೆ.



ಯುವ ಮನಸ್ಸುಗಳನ್ನು ಪೋಷಿಸುವ ಮತ್ತು ಸುಸ್ಥಿರಪರಿಹಾರಗಳನ್ನು ಕಂಡು ಹಿಡಿಯುವ ಪ್ರಯಾಣ ಮತ್ತಷ್ಟು ಪ್ರೇರಣೆಯನ್ನು ನೀಡಲಿದೆ ಎಂದು ಅಭಿಪ್ರಾಯ ಪಟ್ಟರು ಕಾರ್ಯ ಕ್ರಮದಲ್ಲಿ 25 ಎಟಿಎಲ್ಶಾಲೆಗಳಿಂದ ಒಟ್ಟು 36 ಶಿಕ್ಷಕರು ಹಾಜರಾಗಿದ್ದರು.

ತದನಂತರ, ಡಿಸೆಂಬರ್ 62023 ರಂದು ಕರ್ನಾಟಕದ ಬೆಳಗಾವಿ ಜಿಲ್ಲೆಯ ಅಂಗಡಿ ಅಂತರಾಷ್ಟ್ರೀಯ ಶಾಲೆಯಲ್ಲಿ 6ಮತ್ತು7 ನೇ ತರಗತಿಯ ವಿದ್ಯಾರ್ಥಿಗಳಿಗೆ ಸುಸ್ಥಿರ ಅಭಿವೃದ್ಧಿ ಗುರಿ ಬಗ್ಗೆ ಕಾರ್ಯಾಗಾರದಲ್ಲಿ ಬೆಳಗಾವಿಯ ಕಾರ್ಯಾಗಾರದ ಮಾರ್ಗದರ್ಶಕ, ಲೋಕೇಶ್ದೊಡ್ಡಮನಿ ಸಮ್ಮುಖದಲ್ಲಿ ಪ್ರಾರಂಭಿಸಲಾಯಿತು.

ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಸಂಗೀತ ದೇಸಾಯಿ ಹಾಜರಿದ್ದರು ಮತ್ತು ಮಕ್ಕಳನ್ನು ಪ್ರೋತ್ಸಾಹಿಸಿದರು. ಅಟಲ್ಟಿಂಕರಿಂಗ್ಲ್ಯಾಬ್ನ ಉಸ್ತುವಾರಿ ಶ್ರೀಮತಿ ರೂಪಾಲಿವಿ. ಹಿರೇಮಠ ಇವರ ನೇತೃತ್ವದಲ್ಲಿ ಕಾರ್ಯಾಗಾರವನ್ನು ನಡೆಸಲಾಯಿತು. ಸಹಾಯಕ ಶಿಕ್ಷಕಿಯಾಗಿ ಶ್ರೀಮತಿ ಮಾಧವಿ ಪಾಟೀಲ ಸಹಕರಿಸಿದರು.

ಈ ಕಾರ್ಯಾಗಾರದ ಮುಂದುವರಿದ ಭಾಗವಾಗಿ ಫ್ರೆಶರ್ತರ ಬೇತಿಯನ್ನು 9ನೇ ಜನವರಿ 2024ರಂದು ಈ ಫಾಹೋಟೆಲನಲ್ಲಿ ಆಯೋಜಿಸಲಾಗಿತ್ತು.

ಕೆಳೆದ ಶನಿವಾರ 19ನವೆಂಬರ್ 2023 ರಂದು 6ನೇ ಮತ್ತು7ನೇ ತರಗತಿಯ ವಿದ್ಯಾರ್ಥಿಗಳಿಗೆ ಕಾರ್ಯಾಗಾರದ ಪೂರ್ಣ ಮಾಹಿತಿ ನೀಡಲಾಯಿತು ಹಾಗೂ ಮಕ್ಕಳಲ್ಲಿ ಮುಂಬರುವ ದಿನಗಳಲ್ಲಿ ನೈಸರ್ಗಿಕ ಸಂಪನ್ಮೂಲಗಳ ಬಳಕೆ ಮತ್ತು ಉಳಿತಾಯದ ಬಗ್ಗೆ ಉಪಾಯಗಳನ್ನ ಹೇಗೆಕೈಕೊಳ್ಳುವುದು ಎಂದು ತಿಳಿಸಿ ಕಾರ್ಯಾಗಾರದ ಉಪಯೋಗ ಮುಂದುವರಿಸುವಂತೆ ಹೇಳಲಾಯಿತು.

## ಸೆಬಿಗೆ ಡಿಆರ್‌ಹೆಚ್‌ಪಿ ಸಲ್ಲಿಸಿದ ಭಾರ್ತಿ ಹೆಕ್ಸಾಕಾಮ್

ಹುಬ್ಬಳ್ಳಿ: ಭಾರ್ತಿ ಹೆಕ್ಸಾಕಾಮ್ ಲಿಮಿಟೆಡ್, ಅರುಣಾಚಲ ಪ್ರದೇಶ, ಮಣಿಪುರ, ಮೇಘಾಲಯ, ಮಿಜೋರಾಂ, ನಾಗಾಲ್ಯಾಂಡ್ ,ತ್ರಿಪುರಾ ಮತ್ತು ರಾಜಸ್ಥಾನ ಮತ್ತು ಈಶಾನ್ಯ ದೂರಸಂಪರ್ಕ ವಲಯಗಳಲ್ಲಿನ ಗ್ರಾಹಕರಿಗೆ ಗ್ರಾಹಕ ಮೊಬೈಲ್ ಸೇವೆಗಳು, ಸ್ಥಿರ-ಲೈನ್ ದೂರವಾಣಿ ಮತ್ತು ಬ್ರಾಡ್‌ಬ್ಯಾಂಡ್ ಸೇವೆಗಳನ್ನು ಒದಗಿಸುವ ಸಂವಹನ ಪರಿಹಾರ ಪೂರೈಕೆದಾರ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಹೆಚ್‌ಪಿ) ನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಮತ್ತು ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ ( ಸೆಬಿ) ಗೆ ಸಲ್ಲಿಸಿದೆ.

ಈ ಕೊಡುಗೆಯು "ಟೆಲಿಕಮ್ಯುನಿಕೇಶನ್ಸ್ ಕನ್ಸಲ್ಟೆಂಟ್ಸ್ ಇಂಡಿಯಾ ಲಿಮಿಟೆಡ್" ನಿಂದ ಪ್ರತಿ ಷೇರಿಗೆ ರೂ.5 ಮುಖಬೆಲೆಯ 100,000,000 ಈಕ್ವಿಟಿ ಷೇರುಗಳ 'ಆಫರ್ ಫಾರ್ ಸೇಲ್' ಅನ್ನು ಒಳಗೊಂಡಿದೆ.

ಭಾರ್ತಿ ಹೆಕ್ಸಾಕಾಮ್ ಲಿಮಿಟೆಡ್ ತನ್ನ ಸೇವೆಗಳನ್ನು 'ಏರ್‌ಟೆಲ್' ಬ್ರ್ಯಾಂಡ್ ಅಡಿಯಲ್ಲಿ ನೀಡುತ್ತದೆ. ಗುಣಮಟ್ಟದ ಗ್ರಾಹಕರನ್ನು ಪಡೆದುಕೊಳ್ಳುವ ಮತ್ತು ಉಳಿಸಿಕೊಳ್ಳುವ ಮೂಲಕ ತನ್ನ ಪೋರ್ಟ್‌ಫೋಲಿಯೊ ಹೆಚ್ಚಿಸಲು ಮತ್ತು ನಮ್ಮ ಕಾರ್ಯ ತಂತ್ರ ವಿಧಾನ ಮತ್ತು ಡೇಟಾ ಸೈನ್ಸ್‌ನ ಬಳಕೆಯ ಮೂಲಕ ಗ್ರಾಹಕರಿಗೆ ಅತ್ಯುತ್ತಮ ಅನುಭವವನ್ನು ತಲುಪಿಸಲು ಇದು ವಿಭಿನ್ನ ಕಾರ್ಯತಂತ್ರ ಹೊಂದಿದೆ. ಕಂಪನಿಯು ಗ್ರಾಹಕರ ಸಂಖ್ಯೆಯನ್ನು ಹೆಚ್ಚಿಸಲು ಡಿಜಿಟಲ್ ಕೊಡುಗೆಗಳನ್ನು ನೀಡುತ್ತಿದೆ ಮತ್ತು ಕುಟುಂಬದ ಮೂಲಕ ವಿಭಿನ್ನವಾಗಿ ರೂಪುಗೊಳಿಸಲಾದ ಕೊಡುಗೆಗಳನ್ನು ಹೊಂದಿದೆ ಮತ್ತು ಏರ್‌ಟೆಲ್ ಬ್ಲ್ಯಾಕ್ ಯೋಜನೆಯ ಅಡಿಯಲ್ಲಿ ಒಮ್ಮುಖವಾದ ಯೋಜನೆಗಳನ್ನು ಹೊಂದಿದೆ.

ಇದು ಕಳೆದ ಮೂರು ಹಣಕಾಸು ವರ್ಷಗಳಲ್ಲಿ ತನ್ನ ಆದಾಯ ಮಾರುಕಟ್ಟೆಯ ಷೇರಿನ ನಿರಂತರ ಸುಧಾರಣೆಗೆ ಕಾರಣವಾಗಿದೆ.

ಭಾರ್ತಿ ಹೆಕ್ಸಾಕಾಮ್ ತನ್ನ ಲಾಭದಾಯಕತೆಯನ್ನು ಹೆಚ್ಚಿಸಲು ಮತ್ತು ಆರಾಮದಾಯಕವಾದ ಹತೋಟಿ ಸ್ಥಾನದೊಂದಿಗೆ ಸಮರ್ಥ ಬಂಡವಾಳ ರಚನೆಯನ್ನು ನಿರ್ವಹಿಸಲು ವಿವೇಕಯುತ ವೆಚ್ಚದ ಉನ್ನತೀಕರಣ ಕ್ರಮಗಳನ್ನು ಕೈಗೊಳ್ಳುತ್ತದೆ.

ಇದು ನೆಟ್‌ವರ್ಕ್ ವಿಸ್ತರಣೆ, ತಂತ್ರಜ್ಞಾನದ ಪ್ರಗತಿ ಮತ್ತು ವಿವೇಚನಾಶೀಲ ತರಂಗಾಂತರ ಹೂಡಿಕೆಗಳಲ್ಲಿ ನಿರಂತರವಾಗಿ ಹೂಡಿಕೆ ಮಾಡುತ್ತದೆ.

ಸೆಪ್ಟೆಂಬರ್ 30, 2023 ಕ್ಕೆ ಕೊನೆಗೊಂಡಂತೆ ಭಾರ್ತಿ ಹೆಕ್ಸಾಕಾಮ್ ತನ್ನ ಭವಿಷ್ಯದ ಸಿದ್ಧ ಡಿಜಿಟಲ್ ಮೂಲಸೌಕರ್ಯದಲ್ಲಿ ಬಂಡವಾಳ ವೆಚ್ಚದಲ್ಲಿ ರೂ203 ಬಿಲಿಯನ್ ಹೂಡಿಕೆ ಮಾಡಿದೆ. ವಿಸ್ತಾರವಾದ ಡಿಜಿಟಲ್ ಮೂಲಸೌಕರ್ಯ, ಡಿಜಿಟಲ್ ಅನುಭವ ಮತ್ತು ತನ್ನ ಗ್ರಾಹಕರಿಗೆ ಒದಗಿಸುವ ಡಿಜಿಟಲ್ ಸೇವೆಗಳ ಮೂಲಕ ನಮ್ಮ ಪ್ರವರ್ತಕರು, ಏರ್‌ಟೆಲ್‌ನೊಂದಿಗಿನ ಸಂಬಂಧದಿಂದ ಕಂಪನಿಯು ಗಮನಾರ್ಹವಾದ ಸಮನ್ವಯತೆಯನ್ನೂ ಸಹ ಪಡೆಯುತ್ತದೆ.

ಈ ಸಾರ್ವಜನಿಕ ಕೊಡುಗೆಯ ಬುಕ್ ರನ್ನಿಂಗ್ ಲೀಡ್ ವ್ಯವಸ್ಥಾಪಕರಾಗಿ (ಬಿಆರ್‌ಎಲ್‌ಎಂಗಳು). ಎಸ್‌ಬಿಐ ಕ್ಯಾಪಿಟಲ್ ಮಾರ್ಕೆಟ್ಸ್ ಲಿಮಿಟೆಡ್, ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್, ಬಿಒಬಿ ಕ್ಯಾಪಿಟಲ್ ಮಾರ್ಕೆಟ್ಸ್ ಲಿಮಿಟೆಡ್, ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್ ಮತ್ತು ಐಐಎಫ್‌ಎಲ್ ಸೆಕ್ಯುರಿಟೀಸ್ ಲಿಮಿಟೆಡ್ ಇವೆ.

## ಬೆಳಗಾವಿಯಲ್ಲಿ ಎರಡು ಗುಂಪುಗಳ ನಡುವೆ ಕಲ್ಲು ತೂರಾಟ: ಪೊಲೀಸರಿಂದ ಲಾಠಿ ಚಾರ್ಜ್



ಬೆಳಗಾವಿ: ಅಯೋಧ್ಯೆಯಲ್ಲಿ ರಾಮ ಮಂದಿರ ಪ್ರಾಣ ಪ್ರತಿಷ್ಠೆಯ ಬಳಿಕ ಬೆಳಗಾವಿಯಲ್ಲಿ ಘೋಷಣೆ ಕೂಗುತ್ತ ಹೊರಟ ಒಂದು ಯುವಕರ ಗುಂಪಿನ ಮೇಲೆ ಇನ್ನೊಂದು ಗುಂಪು ಕಲ್ಲು ತೂರಿದ ಘಟನೆ ಬೆಳಗಾವಿಯ ಪಾಟೀಲ ಗಲ್ಲಿಯಲ್ಲಿ ನಡೆದಿದೆ.

ರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆ ಬಳಿಕ ಯುವಕರ ಗುಂಪೊಂದು ಜೈಶ್ರೀರಾಮ್ ಎಂದು ಘೋಷಣೆ ಕೂಗುತ್ತ ಹೊರಟಿತ್ತು. ಈ ಸಂದರ್ಭದಲ್ಲಿ ಈ ಯುವಕರ ಗುಂಪಿನ ಮೇಲೆ ಮತ್ತೊಂದು ಗುಂಪಿನ ಯುವಕರಿಂದ ಕಲ್ಲು ತೂರಾಟ ನಡೆದಿದೆ. ಪ್ರತಿಯಾಗಿ ಇವರೂ ಕಲ್ಲು ತೂರಿದರು. ಎರಡು ಗುಂಪುಗಳ ಮಧ್ಯೆ ಪರಸ್ಪರ ಕಲ್ಲು ತೂರಾಟದಿಂದ ಕೆಲಹೊತ್ತು ಆತಂಕ ಉಂಟಾಯಿತು. ತಕ್ಷಣವೇ ಸ್ಥಳದಲ್ಲಿ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದ ಪೊಲೀಸರಿಂದ ಲಘು ಲಾಠಿ ಚಾರ್ಜ್ ನಡೆದಿದೆ.

## ತೋಟಗಾರಿಕೆ ಇಲಾಖೆ: ಪ.ಜಾತಿ/ಪ.ಪಂಗಡದ ರೈತರಿಂದ ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023-24ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ತೋಟಗಾರಿಕೆ ಬೆಳೆಗಳಿಗೆ ಪ.ಜಾತಿ/ಪ.ಪಂಗಡದ ರೈತರಿಂದ ಸಹಾಯಧನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತೋಟಗಾರಿಕೆ ಬೆಳೆಗಳಾದ ಬಾಳೆ, ದ್ರಾಕ್ಷಿ, ದಾಳಿಂಬೆ, ಮಾವು, ಅಂಜೂರ, ಡ್ರಾಗನ್ ಹಣ್ಣು, ಗೇರು, ಸ್ಟ್ರಾಬೇರಿ, ಜಾಮುನು, ಪೇರಲ, ಬೆಣ್ಣೆ ಹಣ್ಣು, ಹೈಬ್ರಿಡ್ ತರಕಾರಿ ಹಾಗೂ ವಿವಿಧ ಹೂವು ಬೆಳೆಗಳನ್ನು ಬೆಳೆಯಲು ಬೆಳೆಗಳ ಅನುಗುಣವಾಗಿ ರೂ. 10,000 ರಿಂದ 30,000 ವರೆಗೆ ಪ್ರತಿ ಹೆಕ್ಟೇರ್ ಸಹಾಯಧನ ಹಾಗೂ ನೀರಾವರಿ ವ್ಯವಸ್ಥೆಗಾಗಿ ಸಮುದಾಯ ಕೃಷಿ ಹೊಂಡಕ್ಕೆ ರೂ. 4.00 ಲಕ್ಷ, ವೈಯಕ್ತಿಕ ಕೃಷಿಹೊಂಡಕ್ಕೆ ರೂ. 75,000 ಗಳ ಸಹಾಯಧನ ನೀಡಲಾಗುವುದು.ಸಂರಕ್ಷಿತ ಬೇಸಾಯ ಪದ್ಧತಿ ಅಳವಡಿಸಿಕೊಂಡು ಪಾಲಿಮನೆ ನಿರ್ಮಿಸಲು ಪ್ರತಿ 10 ಗುಂಟೆಗೆ ರೂ. 4.70 ಲಕ್ಷಗಳ ಹಾಗೂ ಪ್ಲಾಸ್ಟಿಕ್ ಹೊದಿಕೆಗಾಗಿ ರೂ. 16,000 ಪ್ರತಿ ಹೆಕ್ಟೇರ್‌ರಂತೆ ಸಹಾಯಧನವನ್ನು ನೀಡಲಾಗುವುದು. ಅಷ್ಟೇ ಅಲ್ಲದೆ ಕೋಯ್ಲೊತ್ತರ ನಿರ್ವಹಣೆಗಾಗಿ ಪ್ಯಾಕ್‌ಹೌಸ್ ನಿರ್ಮಿಸಿಕೊಳ್ಳಲು ಗರಿಷ್ಠ 2 ಲಕ್ಷ, ಪ್ರಾಥಮಿಕ ಸಂಸ್ಕರಣಾ ಘಟಕ ನಿರ್ಮಿಸಲು ಗರಿಷ್ಠ 10 ಲಕ್ಷ, ಕೋಲ್ಡ ಸ್ಟೋರೇಜ್ ಘಟಕ ನಿರ್ಮಿಸಲು ಗರಿಷ್ಠ 2,800 ಪ್ರತಿ ಟನ್‌ನಂತೆ 5000 ಟನ್ ವರೆಗೆ ಸಹಾಯಧನ ನೀಡಲಾಗುವುದು. ಹಣ್ಣು ಮಾಗಿಸುವ ಘಟಕಕ್ಕೆ ಪ್ರತಿ ಟನ್‌ಗೆ ರೂ. 35,000 ರಂತೆ ಗರಿಷ್ಠ 300 ಟನ್ ಸಾಮರ್ಥ್ಯದ ವರೆಗೆ ಪ್ರತಿ ಫಲಾನುಭವಿಗಳಿಗೆ ಸಹಾಯಧನ ನೀಡಲಾಗುವುದು. ತರಕಾರಿ ಮತ್ತು ಹಣ್ಣು ಮಾರಾಟ ಮಾಡಲು ತಳ್ಳುವ ಗಾಡಿಗೆ ರೂ. 15,000 ಸಹಾಯಧನವನ್ನು ಮಾರ್ಗಸೂಚಿಯನ್ವಯ ಗರಿಷ್ಟ ವೆಚ್ಚವನ್ನು ಪರಿಗಣಿಸಿ ನೀಡಲಾಗುವುದು. ಹೆಚ್ಚಿನ ಮಾಹಿತಿಯನ್ನು ಪ.ಜಾತಿ/ಪ.ಪಂಗಡದ ರೈತರು ತಮ್ಮ ತಾಲ್ಲೂಕಿನ ತೋಟಗಾರಿಕೆ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬೇಕು ಎಂದು ಬೆಳಗಾವಿಯ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ಗಜಲ್ ಸಾಹಿತಿಗಳ ಸನ್ಮಾನ ಕಾರ್ಯಕ್ರಮ

ಬೆಳಗಾವಿ: ಕನ್ನಡ ಸಾಹಿತ್ಯ ಪರಿಷತ್ತು ಬೆಳಗಾವಿ ಜಿಲ್ಲೆ ದಿ ಜ್ಯೋತಿ ಮೂಗಿ ದತ್ತಿ ನಿಮಿತ್ತ ಕನ್ನಡ ಗಜಲ್ ಸಾಹಿತಿಗಳ ಸನ್ಮಾನ ಕಾರ್ಯಕ್ರಮ ದಿನಾಂಕ 21.01.2024 ರಂದು ಕನ್ನಡ ಭವನ ನೆಹರು ನಗರದಲ್ಲಿ ಜರುಗಿತು ಅಧ್ಯಕ್ಷತೆಯನ್ನು ಮಂಗಲಾ ಮೆಡಗುಡ್ಡ ಕ ಸಾ ಪ ಜಿಲ್ಲಾ ಅಧ್ಯಕ್ಷರು ವಹಿಸಿದ್ದರು ಅವರು ಮಾತನಾಡುತ್ತಾ ಕವ್ವಾಲಿ ಗಜಲ್ ಹಾಡುವುದು ಯಕ್ಕುಂಡಿಯಲ್ಲಿ ಕೇಳಿದೆ ಇವರಿಗೆ ದತ್ತಿ ಕಾಯ9ಕ್ರಮ ದಲ್ಲಿ ಅವಕಾಶ ನೀಡಿದೆ.

ಇವರ ಗಜಲ್ ಉತ್ತಮವಾಗಿದೆ ಹೊಸ ಪರಿಚಯ ನಿಡಿದ್ದೆನೆ ಎಂದರು ಮುಖ್ಯ ಅತಿಥಿಗಳಾಗಿ ಸುಭಾಷ್



ಏಣಗಿ ಆಗಮಿಸಿದ್ದರು ಜ್ಯೋತಿ ಮೂಗಿಯವರು ಅಪಘಾತದಲ್ಲಿ ತೀರಿ ಹೋದರು ಅವರ ನೆನಪಿಗಾಗಿ ಅವರ ದೊಡ್ಡಪ್ಪ ಚಿಕ್ಕಪ್ಪನವರು ಕ ಸಾ ಪ ದಲ್ಲಿ ದತ್ತಿನಿಧಿ ಇಟ್ಟು 2009ರಿಂದ ನಡೆದು ಕೊಂಡು ಬರುತ್ತಿವೆ ಗಜಲ್ ಕವ್ವಾಲಿ ಹೊಸ ಪ್ರಯೋಗ ಹೊಸಬರನ್ನು ಪರಿಚಯಿಸುತ್ತಿರುವು ಹೆಮ್ಮೆಯ ವಿಷಯ ಎಂದರು ಇಂದಿನ ಕಾಯ9ಕ್ರಮ ಚೆನ್ನಾಗಿ ಆಯಿತು.

ಎಲ್ಲರಿಗೂ ಧನ್ಯವಾದಗಳು ತಿಳಿಸಿದರು ಅತಿಥಿಗಳಾಗಿ ಎನ್ ಆರ್ ಠಕ್ಕಾಯಿ ಅಧ್ಯಕ್ಷರು ಕ ಸಾ ಪ ಬೈಲಹೊಂಗಲ ಆಗಮಿಸಿದ್ಧರು ಎಂದರು ಎಂ ವೈ ಮೆಣಸಿನಕಾಯಿ ಅವರು ದತ್ತಿ ದಾನಿಗಳನ್ನು ಪರಿಚಯಿಸಿದರು ಸನ್ಮಾನಿತರನ್ನು ಮಲ್ಲಿಕಾರ್ಜುನ ಕೋಳಿ ಅವರು ಪರಿಚಯಿಸಿದರು ಅಬ್ದುಲಗಣಿಸಾಬ ಬಾಗೇವಾಡಿ ಹುಸೇನತಾಜ ಮುಲ್ಲಾ ಶಮಾಜಮಾದಾರ ಮೆ ಜಮಾದಾರ ಎಂ ಡಿ ಬಾವಖಾನ ಇವರು ಗಜಲ್ ಕವ್ವಾಲಿ ಹಾಡಿದರು ಇವರನ್ನು ಅಧ್ಯಕ್ಷರು ಅತಿಥಿಗಳು ಸನ್ಮಾನಿಸಿದರು.

ಅಬ್ದುಲ್ ಗನಿಸಾಬ ಬಾಗೇವಾಡಿ ಅವರು ಬರೆದ ಬೆಳದಿಂಗಳ ಚೆಲ್ಲಿದರೆ ಹಾಡು ಉಸ್ತಾದ ಗನಿಸಾಹೇಬರ ಮೇಳಗೀತೆಗಳು ಪುಸ್ತಕ ಬಿಡುಗಡೆ ಮಾಡಲಾಯಿತು ಅಂಗಡಿ ಪ್ರಾಸ್ತಾವಿಕ ಮಾತನಾಡಿದರು ಪ್ರತಿಭಾ ಕಳ್ಳಿಮಠ ಸ್ವಾಗತಿಸಿದರು ನಾಡಗೀತೆ ಆಶಾ ಯಮಕನಮಡಿ9 ಇಂದಿರಾ ಮೋಟೆಬೆನ್ನೂರ ಸಂಗಡಿಗರು ಹಾಡಿದರು ಶಿವಾನಂದ ತಲ್ಲೂರ ನಿರೂಪಿಸಿದರು ನರಸಿಂಗ ಬ ಕಮತಿ ಎಂಎ ಮದ್ದಿನಮಠ ಸುಧಾ ಪಾಟೀಲ ಡಾ ಅ ಬ ಇಟಗಿ ಎಸ್ ಎಸ್ ಕಬ್ಬೂರ ಎ ಬಿ ಬಾಗೇವಾಡಿ ಎ ಆರ್ ಕಿತ್ತೂರ ಪಿ ಬಿ ಯಲಿಗಾರ ಸುರೇಶ ಹಂಜಿ ಭಾರತಿ ಮದಭಾವಿ ಮಹಾದೇವಿ ಅಂಗಡಿ ರಾಜನಂದಾ ಘಾರ್ಗಿ ,ಎ ಎಸ್ ಕಡೆಟ್ಟಿ ಡಾ ಜಯಾನಂದ ಧನವಂತ ಪಿ ಆರ್ ಕಡಬಿ ಪಿ ಎಲ್ ಹೂಗಾರ ಇತರರು ಉಪಸ್ಥಿತರಿದ್ದರು.

## ಕಳ್ಳ ಸಾಗಾಣಿಕೆಯಲ್ಲಿ ಮಧ್ಯಸ್ಥಗಾರರ ಮಹತ್ವದ ಪಾತ್ರ

ಬೆಳಗಾವಿ: "ಮಾನವ ಕಳ್ಳ ಸಾಗಾಣಿಕೆ ತಡೆಗೆ ನುರಿತ ಮಧ್ಯಸ್ಥಗಾರ ಒಂದು ಉತ್ತಮ ಪೇದೆ". ಮಧ್ಯಸ್ಥಗಾರ ಮಕ್ಕಳ ಕಳ್ಳ ಸಾಗಾಣಿಕೆ ತಡೆಗಟ್ಟುವುದರಿಂದ ಗ್ರಾಮ ಸುರಕ್ಷತೆ ಸಾಧ್ಯ ಎಂದು ಅಧ್ಯಕ್ಷತೆ ವಹಿಸಿದ ಬೆಂಗಳೂರಿನ 'ಮಾಯ್ ಚಾಯ್ಸ್ ಫೌಂಡೇಶನ್' ನ ರಾಜ್ಯ ಸಂಚಾಲಕರಾದ ಶ್ರೀ ವಿನಯ ಕುಮಾರ ಶಿರೋಳ ತಿಳಿಸಿದರು. ಅಲ್ಲದೇ ಪಾಲುದಾರರ ಅನುಷ್ಠಾನದ ಮೂಲಕ ಇದುವರೆಗೆ ರಾಜ್ಯದಲ್ಲಿ 145 ಹಾಗೂ ರಾಷ್ಟ್ರದಾದ್ಯಂತ 10,000 ಸುರಕ್ಷಿತ ಗ್ರಾಮ ಕಾರ್ಯಕ್ರಮಗಳನ್ನು ನಡೆಸಲಾಗಿದೆ ಎಂದು ತಿಳಿಸಿದರು.

'ಮಾಯ್ ಚಾಯ್ಸ್ ಫೌಂಡೇಶನ್' ಹೈದ್ರಾಬಾದ್, ಅಪರೇಷನ್ ರೆಡ್ ಅಲರ್ಟ ಮತ್ತು 'ಮಹಿಳಾ ಕಲ್ಯಾಣ ಸಂಸ್ಥೆ' ಬೆಳಗಾವಿ ಇವರ ಸಹಯೋಗದಲ್ಲಿ ಮಹಿಳೆಯರ ಮತ್ತು ಮಕ್ಕಳ ಕಳ್ಳ ಸಾಗಾಣಿಕೆ ಕುರಿತು ಜಾಗೃತಿ ಕಾರ್ಯಕ್ರಮವು ಆಯ್ದ ಗ್ರಾಮಗಳ ಮಧ್ಯಸ್ಥಗಾರರಿಗೆ ಒಂದು ದಿನದ ತರಬೇತಿಯು ಇತ್ತೀಚೆಗೆ ಮಹಿಳಾ ಕಲ್ಯಾಣ ಸಂಸ್ಥೆಯ ಭಾರತ ಕಾಲನಿ ಬೆಳಗಾವಿಯಲ್ಲಿ ಜರುಗಿತು. ಮುಖ್ಯ ಅತಿಥಿಗಳಾಗಿ ಸಿಸ್ಟರ್ ಲೂರ್ಧ, ಅಧ್ಯಕ್ಷರು ಮಕ್ಕಳ ಕಲ್ಯಾಣ ಮಿತಿ ಬೆಳಗಾವಿ, ಇವರು ಕಾರ್ಯಕ್ರಮವನ್ನು ಉದ್ಘಾಟಿಸಿ ಇಂದಿನ ದಿನಗಳಲ್ಲಿ ಬಾಲ್ಯ ವಿವಾಹಗಳು ಬೆಳಗಾವಿ ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಡೆಯುತ್ತಿದೆ. ಈ ದಿಸೆಯಲ್ಲಿ ನಾವೆಲ್ಲರೂ ಸೇರಿ ಜಾಗೃತಿ ಮೂಡಿಸುವುದು ಅತೀ ಅವಶ್ಯಕವಾಗಿದೆ ಎಂದರು.

ಶ್ರೀ ಮಹಾಂತೇಶ ಭಜಂತ್ರಿ ಜಿಲ್ಲಾ ಮಕ್ಕಳ ರಕ್ಷಣಾ ಆಧಿಕಾರಿಗಳು ಬೆಳಗಾವಿ ಇವರು ಮಾತನಾಡುತ್ತ ಬಾಲ್ಯ ವಿವಾಹ, ಮಕ್ಕಳ ಕಳ್ಳ ಸಾಗಾಣಿಕೆ, ಅಂಗಾಂಗಗಳ ಕಳ್ಳ ಸಾಗಾಣಿಕೆ



ಹೆಚ್ಚಿನ ಪ್ರಮಾಣದಲ್ಲಿ ನಡೆಯುತ್ತಿದ್ದೂ ಇದನ್ನು ತಡೆಗಟ್ಟುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ ಎಂದರು. ಮಹಿಳೆಯರ ಮತ್ತು ಮಕ್ಕಳ ಕಳ್ಳಸಾಗಾಣಿಕೆ ಅವ್ಯಾಹತವಾಗಿ ನಡೆಯುತ್ತಲಿದ್ದು, ಈ ಬಗ್ಗೆ ತಂದೆ-ತಾಯಿಗಳಿಗೆ ಮತ್ತು ಮಕ್ಕಳಿಗೆ ಜಾಗೃತಿ ಮೂಡಿಸುವಲ್ಲಿ ಮಧ್ಯಸ್ಥಗಾರರ ಪಾತ್ರ ಬಹು ಮುಖ್ಯವಾಗಿದೆ.

ಮಧ್ಯಸ್ಥಗಾರರೆಂದರೆ ಆ ಊರಿನಲ್ಲಿರುವ ಕಾವಲು ಸಮಿತಿಯ ಸದಸ್ಯರುಗಳು, ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಶಿಕ್ಷಕರು ಹಾಗೂ ಊರಿನ ಪ್ರಮುಖರು 4 ಆಧಾರಸ್ತಂಭಗಳು ಇದ್ದಂತೆ ಎಂದು ವಿವರಿಸಿದರು.

ಹಣದಾಸೆಗಾಗಿ ಬಾಲ್ಯವಿವಾಹ ಮಾಡುವುದು, ಅಪ್ರಾಪ್ತ ಬಾಲಕಿಯರನ್ನು ಮೊಬೈಲ್ ಮೂಲಕ ಪ್ರೇರೇಪಿಸುವುದು, ಮಕ್ಕಳಿಗೆ ಆಮಿಷ ತೋರಿಸಿ ಕರೆದೊಯ್ದು ಬೇರೆ ಪಟ್ಟಣದಲ್ಲಿ ಭಿಕ್ಷಾಟನೆ, ವೇಶ್ಯಾವಾಟಿಕೆಗೆ ತಳ್ಳುವ ಜಾಲಗಳು ಕೆಲಸ ಮಾಡುತ್ತಿವೆ. ಇದರ ಬಗ್ಗೆ ತಾವು ಊರಿನ ಜನರಲ್ಲಿ ಜಾಗೃತಿ ಮೂಡಿಸಬೇಕೆಂದರು. ಒಂದು ದಿನ ನಡೆದ ಈ ಕಾರ್ಯಕ್ರಮದಲ್ಲಿ ಹಲವಾರು ವಿಷಯಗಳ ಕುರಿತು ಚರ್ಚಿಸಲಾಯಿತು. ಶ್ರೀಮತಿ. ಫರಿದಾ ಬಿ. ಮುನಸಿ, ಪಿ.ಎಸ್.ಆಯ್ ಮಹಿಳಾ ಪೋಲಿಸ್ ಠಾಣೆ, ಬೆಳಗಾವಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಪ್ರಾರಂಭದಲ್ಲಿ ಶ್ರೀಮತಿ.ಸುರೇಖಾ.ಡಿ.ಪಾಟೀಲ ಇವರು ಪ್ರಾಸ್ತಾವಿಕವಾಗಿ ಮಾತನಾಡುತ್ತ ಪಿ.ಪಿ. ಟಿ. ಮೂಲಕ ತರಬೇತಿಯನ್ನು ನಡೆಸಿಕೊಟ್ಟರು. ಶ್ರೀಮತಿ. ವೈಜಯಂತಿ.ಎಂ.ಚೌಗಲಾ ಗೌರವ ಕಾರ್ಯದರ್ಶಿ ಮಹಿಳಾ ಕಲ್ಯಾಣ ಸಂಸ್ಥೆ ಬೆಳಗಾವಿ ಇವರು ಎಲ್ಲರನ್ನು ಸ್ವಾಗತಿಸಿ ಸಂಸ್ಥೆಯು ಕಳೆದ 46 ವರ್ಷಗಳಿಂದ ನಡೆದು ಬಂದ ದಾರಿ ಬಗ್ಗೆ ವಿವರಿಸಿದು.

ಕೊನೆಯದಾಗಿ ಶ್ರೀ.ಎಂ.ಎಂ.ಗಡಗಲಿ ಕ್ಷೇತ್ರ ತರಬೇತಿದಾರರು ವಂದನಾರ್ಪಣೆಗೈದರು.

# ಸ್ಮಾರ್ಟ್ ಕ್ಲಾಸ್‌ಗೆ ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಚಾಲನೆ

ಬೆಳಗಾವಿ: ಹೊಸ ರಾಷ್ಟ್ರೀಯ ಶಿಕ್ಷಣ ನೀತಿಗೆ ಅನುಗುಣವಾಗಿ ನಮ್ಮ ಶಾಲೆ ಮಕ್ಕಳ ಕಲಿಕೆಯ ಗುಣಮಟ್ಟವನ್ನು ಎತ್ತರಿಸಬೇಕಾದದ್ದು ಅನಿವಾರ್ಯವಾಗಿದೆ ಅದಕ್ಕೆ ಪೂರಕವಾಗಿ ಹೊಸ ತಂತ್ರಜ್ಞಾನವುಳ್ಳ ಶಿಕ್ಷಣ ಜಾರಿಗೊಳಿಸುವುದಕ್ಕಾಗಿ ಸ್ಟೆಮ್ ಲ್ಯಾಬ್, ಅಟಲ್ ಟಿಂಕರಿಂಗ್ ಲ್ಯಾಬ್ ಮತ್ತು ಸ್ಮಾರ್ಟ್ ಕ್ಲಾಸ್ ಪರಿಕಲ್ಪನೆ ಮೂಡಿ ಬಂದಿದ್ದು ಅವುಗಳ ಉಪಯೋಗದಿಂದ ವಿದ್ಯಾರ್ಥಿಗಳ ಕಲಿಕಾ ಮಟ್ಟ ಹೆಚ್ಚಿಸಿಕೊಳ್ಳಲು ಅನುಕೂಲವಾಗಲಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.



ಮಂಗಳವಾರ ಜ–23 ರಂದು ಬೆಳಗಾವಿ ಹನುಮಾನ ನಗರ 2ನೇ ಹಂತದ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆಗೆ 2022–23ನೇ ಸಾಲಿನ ರಾಜ್ಯಸಭಾ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಅನುದಾನದಲ್ಲಿ ನಿರ್ಮಿಸಿದ ಸ್ಮಾರ್ಟ್ ಕ್ಲಾಸ್ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಮೀರಿಸುವ ಮಟ್ಟದಲ್ಲಿ ಸರ್ಕಾರಿ ಶಾಲೆಗಳು ಕೂಡಾ ಮುಂದೆ ಬಂದಿದ್ದು, ಅಂತಹ ಸರ್ಕಾರಿ ಶಾಲೆಗಳಿಗೆ ಚುನಾಯಿತ ಪ್ರತಿನಿಧಿಗಳ ಅನುದಾನವನ್ನು ಉಪಯೋಗಿಸಿ ಮಾದರಿ ಶಾಲೆಗಳಾಗಿ ಮಾಡಬೇಕಾದ ಅಗತ್ಯವಿದೆ ಎಂದರು.

ಇಂದಿನ ಆಧುನಿಕ ತಂತ್ರಜ್ಞಾನ ಯುಗದಲ್ಲಿ ವಿದ್ಯಾರ್ಥಿಗಳು ಸ್ಪರ್ಧೆ ಮಾಡ ಬೇಕಾಗಿರುವದರಿಂದ ಅವರಿಗೆ ಕಂಪ್ಯೂಟರ್ ಸ್ಮಾರ್ಟ್ ಕ್ಲಾಸ್ ಪೀಠೋಪಕರಣಗಳಂತಹ ಮೂಲಭೂತ ಸೌಕರ್ಯಗಳನ್ನು ಒದಗಿಸುವದು ಅವಶ್ಯಕವಾಗಿದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗೆ ತಂತ್ರಜ್ಞಾನವುಳ್ಳ ಕಲಿಕಾಶಕ್ತಿ ಹೆಚ್ಚು ಮಾಡಬೇಕಾಗಿರುವದರಿಂದ ಜಿಲ್ಲೆಯಲ್ಲಿ ಈಗಾಗಲೇ ಆರು ಸರ್ಕಾರಿ ಶಾಲೆಗಳಲ್ಲಿ ಪ್ರಾಯೋಗಿಕವಾಗಿ ಸ್ಮಾರ್ಟ್‌ಕ್ಲಾಸ್ ಅಳವಡಿಸಿ ತಂತ್ರಜ್ಞಾನವುಳ್ಳ ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡಲಾಗುತ್ತದೆ ಎಂದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ಹಾಗೂ ಮಾಜಿ ಶಾಸಕ ಅನಿಲ ಬೆನಕೆ, ಡಾ. ರವಿ ಪಾಟೀಲ, ನಗರ ಸೇವಕ ಸಂದೀಪ ಜಿರಗ್ಯಾಳ, ಬಿ.ಇ.ಒ ಪ್ರಭಾವತಿ ಹಿರೇಮಠ, ಬಿಜೆಪಿ ಮಹಾನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರಘೇಂದ್ರಗೌಡ ಪಾಟೀಲ, ಶರದ ಪಾಟೀಲ, ಮಂಡಲ ಅಧ್ಯಕ್ಷ ವಿಜಯ ಕೊಡಗನ್ನವರ, ಪ್ರಧಾನ ಗುರುಗಳಾದ ಬಸವರಾಜ ಹಟ್ಟಿಹೊಳಿ, ರಾಜೇಶ ಚೌಗಲಾ, ಅಶೋಕ ತೊರಾತ, ಕೆ.ಆರ್.ಡಿ.ಎಲ್ ಸಿಬ್ಬಂದಿ ರವಿ ಮಗದುಮ್ಮ ಸೇರಿದಂತೆ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪಾಲಕರು ಉಪಸ್ಥಿತರಿದ್ದರು.

# ವಿದ್ಯಾರ್ಥಿ, ಪಾಲಕರು ಹಾಗೂ ಮಾರ್ಗದರ್ಶಕರ ಸಭೆ




ಬೆಳಗಾವಿ: ನಗರದ ಪ್ರತಿಷ್ಠಿತ ಎಸ್. ಕೆ. ಇ. ಸಂಸ್ಥೆಯ ಆರ್. ಪಿ. ಡಿ. ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಕೆ. ಎಂ. ಗಿರಿ ಸಭಾಂಗಣದಲ್ಲಿ ದಿನಾಂಕ 21–01–2024 ರಂದು ರವಿವಾರ ಬೆಳಗಿನ 10 ಗಂಟೆಗೆ ವಿದ್ಯಾರ್ಥಿ, ಪಾಲಕರು ಹಾಗೂ ಮಾರ್ಗದರ್ಶಕರ ಸಭೆಯನ್ನು ಯಸಸ್ವಿಯಾಗಿ ನಡೆಸಲಾಯಿತು. ಆಯ್. ಕ್ಯೂ. ಎ. ಸಿ ಮುಖ್ಯಸ್ಥರಾದ ಡಾ. ಪ್ರಸನ್ನ ಜೋಶಿ ಅವರು ಸ್ವಾಗತಿಸಿದರು.

ಪ್ರಾಚಾರ್ಯರಾದ ಡಾ. ಅಭಯ ಪಾಟೀಲ ಅವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ –ವಿದ್ಯಾರ್ಥಿಗಳ ಪ್ರಗತಿಗಾಗಿ ಮಹಾವಿದ್ಯಾಲಯದಲ್ಲಿ ಲಭ್ಯವಿರುವ ಸೌಲಭ್ಯಗಳು, ವಿದ್ಯಾರ್ಥಿ ವೇತನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳು, ವಿದ್ಯಾರ್ಥಿಗಳಿಗಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳ ಕುರಿತು ವಿವರಣೆ ನೀಡುತ್ತಾ ವಿದ್ಯಾರ್ಥಿಗಳು ಇವುಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಸಲಹೆ ನೀಡಿದರು. ತದನಂತರ ಎಲ್ಲ ಪಾಲಕರೊಂದಿಗೆ ಮಾರ್ಗದರ್ಶಕರ ಸಂವಾದ ಕಾರ್ಯಕ್ರಮ ಜರುಗಿತು.

ಪಾಲಕರು ಆಯಾ ವಿಷಯಗಳ ಅಧ್ಯಾಪಕರನ್ನು ಮುಖತ: ಭೇಟಿಯಾಗಿ ವಿದ್ಯಾರ್ಥಿಗಳ ಪ್ರಗತಿಯ ಕುರಿತು ವಿಚಾರಿಸಿದರು. ಪ್ರತಿಭಾವಂತ ವಿದ್ಯಾರ್ಥಿಗಳನ್ನು ಕಾರ್ಯಕ್ರಮದಲ್ಲಿಸನ್ಮಾನಿಸಲಾಯಿತು. ಸಭೆಯಲ್ಲಿ ಮಹಾವಿದ್ಯಾಲಯದ ಎಲ್ಲ ಅಧ್ಯಾಪಕರು, ವಿದ್ಯಾರ್ಥಿಗಳು ಹಾಗೂ ಪಾಲಕರು ಅಪಾರ ಸಂಖ್ಯೆಯಲ್ಲಿ ಭಾಗಿಯಾಗಿದ್ದರು.

# ಅನುಕಂಪದ ಆಧಾರದ ಮೇಲೆ ನೇಮಕಾತಿ: ಸಚಿವ ಸತೀಶ ಜಾರಕಿಹೊಳಿ ಅವರಿಂದ ಇಬ್ಬರಿಗೆ ಆದೇಶ ಪತ್ರ ವಿತರಣೆ

ಬೆಳಗಾವಿ: ಕಂದಾಯ ಇಲಾಖೆಯಲ್ಲಿ ಅನುಕಂಪದ ಆಧಾರದ ಮೇಲೆ ಇಬ್ಬರಿಗೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ನೇಮಕ ಮಾಡಲಾಗಿದ್ದು, ಸೋಮವಾರ (ಜ.22) ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮೃತಾವಲಂಬಿತರಿಗೆ ನೇಮಕಾತಿ ಆದೇಶ ಪತ್ರಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ವಿತರಿಸಿದರು.



ನಿಕಿತಾ ಲಕ್ಷ್ಮಣ ಭೋವಿ ಅವರಿಗೆ ಗೋಕಾಕ್ ತಹಶೀಲ್ದಾರ್ ಕಚೇರಿಯಲ್ಲಿ ಹಾಗೂ ಸಿದ್ದಪ್ಪ ರೇವಪ್ಪ ಅರಭಾಂವಿ ಇವರಿಗೆ ಮೂಡಲಗಿ ತಹಶೀಲ್ದಾರ ಕಚೇರಿಯಲ್ಲಿ ನೇಮಕಗೊಳಿಸಿದ ಆದೇಶ ಪತ್ರ ನೀಡಿದರು.

ಈ ಸಂದರ್ಭದಲ್ಲಿ ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್, ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹನಾಧಿಕಾರಿ ರಾಹುಲ್ ಶಿಂಧೆ ಇದ್ದರು.

# ಗೆದ್ದೇ ಗೆಲ್ಲುತ್ತೇನೆ ಎಂಬ ವಿಶ್ವಾಸವಿರಲಿ: ಸಂಜೀವರಾವ್

ಕೆಂಭಾವಿ: ವಿದ್ಯಾರ್ಥಿಗಳ ಜೀವನದಲ್ಲಿ ಬರುವ ಅವಕಾಶಗಳ ಸದುಪಯೋಗ ಪಡಿಸಿಕೊಳ್ಳಿ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸುವ ಸಂದರ್ಭದಲ್ಲಿ ನಮ್ಮಿಂದ ಆಗೋದಿಲ್ಲ ಎನ್ನುವ ಖಿನ್ನತೆಯ ಮನೋಭಾವನೆ ಬೇಡ ನಾನು ಭಾಗವಹಿಸುತ್ತೇನೆ ಗೆದ್ದೇ ಗೆಲ್ಲುತ್ತೇನೆ ಎಂಬ ವಿಶ್ವಾಸವಿರಲಿ ಎಂದು ಹಿರಿಯ ಪತ್ರಕರ್ತ ಸಂಜೀವರಾವ ಕುಲಕರ್ಣಿ ತಿಳಿಸಿದರು.



ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜನಲ್ಲಿ ಮಂಗಳವಾರ ನಡೆದ ರಾಯಚೂರು ವಿಶ್ವವಿದ್ಯಾಲಯದ ಪುರುಷ ಮತ್ತು ಮಹಿಳೆಯರ ಗುಡ್ಡಗಾಡು ಓಟ (ಕ್ರಾಸ್ ಕಂಟ್ರಿ) ಪಂದ್ಯಾವಳಿ ಆಯ್ಕೆ ಪ್ರಕ್ರಿಯೆಗೆ ಚಾಲನೆ ನೀಡಿ ಮಾತನಾಡಿದ ಅವರು, ಇಂದಿನ ದಿನಗಳಲ್ಲಿ ಸರಕಾರಿ ಕಾಲೇಜುಗಳು ಯಾವದೇ ಖಾಸಗಿ ಕಾಲೇಜುಗಳಿಗಿಂತ ಕಡಿಮೆಯಿಲ್ಲ.

ಸರಕಾರ ವಿದ್ಯಾರ್ಥಿಗಳ ಶೈಕ್ಷಣಕ ಅಭಿವೃದ್ದಿಗೆ ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ ಅವುಗಳ ಸದುಪಯೋಗ ಪಡಿದುಕೊಳ್ಳಬೇಕು ಎಂದರು.

ಕಾಲೇಜಿನ ಪ್ರಾಂಶುಪಾಲ ನಾಗರಾಜ ಚಾವಲ್ಕರ್ ಮಾತನಾಡಿ, ರಾಯಚೂರು ವಿವಿಯ ಈ ಆಯ್ಕೆ ಪ್ರಕ್ರಿಯೆಯಲ್ಲಿ ಉತ್ತಮ ಪ್ರದರ್ಶನ ತೋರಿದ ವಿದ್ಯಾರ್ಥಿಗಳು ವಿವಿ ವತಿಯಿಂದ ನಡೆಯುವ ಅಂತರ ವಿಶ್ವವಿದ್ಯಾಲಯಗಳ ಕ್ರಾಸ್ ಕಂಟ್ರಿ ಪಂದ್ಯಾವಳಿಯಲ್ಲಿ ಭಾಗವಹಸುತ್ತಿದ್ದು, ಇದನ್ನು ಸದುಪಯೋಗ ಪಡೆದುಕೊಳ್ಳಿ ಎಂದು ಶುಭ ಹಾರೈಸಿದರು. ಸ್ಪರ್ಧೆಯಲ್ಲಿ 30 ಕ್ಕೂ ಹೆಚ್ಚು ಕ್ರೀಡಾಪಟುಗಳು ಪಾಲ್ಗೊಂಡಿದ್ದರು.


ಈ ಸಂದರ್ಭದಲ್ಲಿ ರಾಯಚೂರು ವಿವಿಯ ದೈಹಿಕ ನಿರ್ದೇಶಕ ಮಲ್ಲಿಕಾರ್ಜುನ, ಕ್ರಾಸ್ ಕಂಟ್ರಿ ಆಯ್ಕೆ ಸಮಿತಿ ಸದಸ್ಯ ಧನಂಜಯ, ಮೇಘನಾಥ, ಕೆಂಭಾವಿ ಕಾಲೇಜು ದೈ. ನಿ. ಪ್ರಸಾದ ಭಂಡಾರಿ, ರಮೇಶ, ಮಹಿಬೂಬು ನಾಶಿ ಸೇರಿ ಹಲವರಿದ್ದರು.

# ವ್ಯಕ್ತಿ ನಾಪತ್ತೆ



ಬೆಳಗಾವಿ: ಬೆಳಗಾವಿಯ ರಾಯಬಾಗ ತಾಲ್ಲೂಕಿನ ಹಾರೂಗೇರಿ ಗ್ರಾಮದ ಜ್ಞಾನೇಶ್ವರ ಪವಾಡಿ ಸದಲಗಿ (38) ಎಂಬಾತ ಜ.2ರಂದು ಬೆಳಗ್ಗೆ 9 ಗಂಟೆಗೆ ಮನೆಯಿಂದ ಬೆಳಗಾವಿ ಹೋಗಿ ಬರುತ್ತೇನೆ ಅಂತಾ ಹೇಳಿ ಹೋದವರು ವಾಪಸ್ ಮನೆಗೆ ಬಾರದೇ ಎಲ್ಲಿಯೋ ಹೋಗಿ ಕಾಣೆಯಾಗಿದ್ದು ಕಾಣೆಯಾದ ಗಂಡನನ್ನು ಹುಡುಕಿ ಕೊಡಲು ಪತ್ನಿ ಕವಿತಾ ಜ್ಞಾನೇಶ್ವರ ಸದಲಗಿ (26) ಇವರು ಜ.5 ರಂದು ಹಾರೂಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಕಾಣೆಯಾದ ವ್ಯಕ್ತಿಯ ವಿವರ: ವಯಸ್ಸು 38 ವರ್ಷ, ಉದ್ಯೋಗ ಉಪನ್ಯಾಸಕರು,. ಎತ್ತರ 5 ಪೂಟ 5 ಇಂಚು, ಮೈಯಿಂದ ದಪ್ಪ ಮೈ ಕಟ್ಟು, ಗೋದಿ ಮೈ ಬಣ್ಣ, ದುಂಡು ಮುಖ, ಹಸಿರು ಬಣ್ಣದ ಅಂಗಿ, ಕಂದು ಬಣ್ಣದ ಜರ್ಕಿನ ಮತ್ತು ನೀಲಿ ಬಣ್ಣದ ಜಿನ್ಸ್ ಪ್ಯಾಂಟ್ ಧರಿಸಿರುತ್ತಾರೆ. ಕನ್ನಡ, ಹಿಂದಿ, ಇಂಗ್ಲೀಷ ಬಾಷೆ ಮಾತನಾಡಲು, ಬರೆಯಲು ಮತ್ತು ಓದಲು ಬರುತ್ತದೆ. ಸದರಿ ವ್ಯಕ್ತಿಯು ಕಂಡು ಬಂದಲ್ಲಿ, ಮಾಹಿತಿ ದೊರೆತಲ್ಲಿ, ರಾಯಬಾಗ ತಾಲ್ಲೂಕಿನ ಹಾರೂಗೇರಿ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಪೊಲೀಸ್ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈಲು ಡಿಕ್ಕಿ ಹೊಡೆದು ಮೂವರು ರೈಲ್ವೇ ಕಾರ್ಮಿಕರು ಸಾವು



ಮುಂಬೈ: ರೈಲು ಡಿಕ್ಕಿ ಹೊಡೆದು ಮೂವರು ರೈಲ್ವೇ ಕಾರ್ಮಿಕರು ಮೃತಪಟ್ಟಿರುವ ಘಟನೆ ಮಹಾರಾಷ್ಟ್ರದ ಪಾಲ್ಕರ್ ಜಿಲ್ಲೆಯಲ್ಲಿ ಸಂಭವಿಸಿದೆ. ವಸಾಯಿ ಬಳಿ ರೈಲ್ವೆ ಸಿಗ್ನಲ್ ದುರಸ್ತಿಗೊಳಿಸುತಿದ್ದ ಸಂದರ್ಭ ಲೋಕಲ್ ರೈಲು ಡಿಕ್ಕಿ ಹೊಡೆದಿದೆ ಪರಿಣಾಮ ಮೂವರು ಪಶ್ಚಿಮ ರೈಲ್ವೆ ನೌಕರರು ಮೃತಪಟ್ಟಿದ್ದಾರೆ. ವಸಾಯಿ ಮತ್ತು ನೈಗಾಂವ್ ನಿಲ್ದಾಣಗಳ ನಡುವೆ ಸೋಮವಾರ ರಾತ್ರಿ 8.55 ಕ್ಕೆ ಅಪಘಾತ ಸಂಭವಿಸಿದೆ ಎಂದು ಸರ್ಕಾರಿ ರೈಲ್ವೆ ಪೊಲೀಸ್ (ಜಿಆರ್‌ಪಿ) ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮೃತರನ್ನು ಮುಖ್ಯ ಸಿಗ್ನಲಿಂಗ್ ಇನ್ಸ್‌ಪೆಕ್ಟರ್ (ಭಯಂದರ್) ವಾಸು ಮಿತ್ರ, ಎಲೆಕ್ಟ್ರಿಕಲ್ ಸಿಗ್ನಲಿಂಗ್ ನಿರ್ವಾಹಕ (ವಸಾಯಿ ರಸ್ತೆ) ಸೋಮನಾಥ ಉತ್ತಮ್ ಲಂಬುಟ್ರೆ ಮತ್ತು ಸಹಾಯಕ ಸಚಿನ್ ವಾಂಖಡೆ ಎಂದು ಗುರುತಿಸಲಾಗಿದೆ.

ಎಲ್ಲಾ ಉದ್ಯೋಗಿಗಳು ಪಶ್ಚಿಮ ರೈಲ್ವೆಯ ಮುಂಬೈ ವಿಭಾಗದ ಸಿಗ್ನಲಿಂಗ್ ವಿಭಾಗದಲ್ಲಿ ಕೆಲಸ ಮಾಡುತಿದ್ದರು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಪಶ್ಚಿಮ ರೈಲ್ವೇ ಅಧಿಕಾರಿಗಳು ಮೃತ ಕುಟುಂಬಕ್ಕೆ ತಲಾ 55,000 ರೂ.ಗಳನ್ನು ನೀಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಶ್ರೀ ರಾಮ ಪ್ರತಿಷ್ಠಾಪನೆ: ಜಿತೋ ವತಿಯಿಂದ ಅಗ್ನಿಹೋತ್ರ ಪೂಜೆ

ಬೆಳಗಾವಿ. ಅಯೋಧ್ಯೆಯಲ್ಲಿ ಜ. 22 ರಂದು ಶ್ರೀರಾಮ ಪ್ರತಿಮೆ ಪ್ರತಿಷ್ಠಾಪನೆಯ ಅಂಗವಾಗಿ ಜೈನ ಇಂಟರ್‌ನ್ಯಾಷನಲ್ ಟ್ರೇಡ್ ಆರ್ಗನೈಝೇಶನ ವತಿಯಿಂದ ಜಿತೋ ಬೆಳಗಾವಿ ಮನೋಜ ಸಂಚೇತಿ ಆಫೀಸನಲ್ಲಿ ಸೋಮವಾರ ಸಾಯಂಕಾಲ ಅಗ್ನಿಹೋತ್ರ ಪೂಜೆ ಕಾರ್ಯಕ್ರಮ ನಡೆಯಿತು.



ಕಾರ್ಯಕ್ರಮದಲ್ಲಿ ಅಗ್ನಹೋತ್ರ ಪೂಜೆಯನ್ನು ನಡೆಸಿಕೊಟ್ಟ ವಿನಾಯಕ ಲೋಕುರ ಅವತು ಮಾತನಾಡುತ್ತ , ಭಾರತೀಯ ವೇದ ಪುರಾಣಗಳಲ್ಲಿ ಹಾಗೂ ಸಂಸ್ಕೃತಿಯಲ್ಲಿ ತನ್ನದೇ ಆದ ವಿಶೇಷತೆಯನ್ನು ಹೊಂದಿದ ಅಗ್ನಹೋತ್ರ ಪೂಜೆ ಎಂದೆಂದಿಗೂ ಮಹತ್ವವನ್ನು ಪಡೆದುಕೊಂಡಿದೆ. ನಾವು ವಾಸಿಸುವ ಸ್ಥಳ, ಪರಿಸರ ಹಾಗೂ ವಾತಾವರಣ ಶುದ್ದವಾಗಿರಬೇಕೆಂದರೆ ಪ್ರತಿ ದಿನ ಎಲ್ಲರೂ ಅಗ್ನಿಹೋತ್ರ ಪೂಜೆಯನ್ನು ಮಾಡಬೇಕು. ಪ್ರತಿ ದಿನ ಸುರ್ಯೋದಯ ಮತ್ತು ಸುರ್ಯಾಸ್ತ ಸಮಯದಲ್ಲಿ ಮಾತ್ರ ಅಗ್ನಿಹೋತ್ರ ಪೂಜೆಯನ್ನು ಮಾಡಬೇಕೆಂದು ಅವರು ತಿಳಿಸಿದರು.

ಅನಾದಿಕಾಲದಿಂದಲೂ ಋಷಿ ಮುನಿಗಳು ಅಗ್ನಿಹೋತ್ರ ಪೂಜೆಯನ್ನು ನಡೆಸಿಕೊಂಡು ಬಂದಿದ್ದಾರೆ. ಇದೀಗ ಅಗ್ನಿಹೋತ್ರ ಪೂಜೆಯ ಮಹತ್ವವನ್ನು ವಿದೇಶಿಗರು ಸಹ ತಿಳಿದುಕೊಂಡಿದ್ದು, ಅನೇಕ ದೇಶಗಳಲ್ಲಿ ಪ್ರತಿ ಅಗ್ನಿಹೋತ್ರ ಪೂಜೆಯನ್ನು ಮಾಡುತ್ತಿದ್ದಾರೆ ಎಂದು ವಿನಾಯಕ ಲೋಕುರ ಅವರು ತಿಳಿಸಿದರು.


ಕಾರ್ಯಕ್ರಮದಲ್ಲಿ ಜಿತೊ ಪದಾಧೀಕಾರಿಗಳು ಅಗ್ನಿಹೋತ್ರ ಪೂಜೆಯಲ್ಲಿ ಪಾಲ್ಗೊಂಡು ಪೂಜೆಯನ್ನು ಅತ್ಯಂತ ಭಕ್ತಿಭಾವದಿಂದ ನೆರವೇರಿಸಿದರು. ಜೀತೊ ಅಧ್ಯಕ್ಷ ವಿರಧವಲ ಉಪಾಧ್ಯೆ ಅತಿಥಿಗಳನ್ನು ಸ್ವಾಗತಿಸಿದರು. ಕಾರ್ಯಕ್ರಮ ಸಂಯೋಜಕ ಸತೀಶ ಮೆಹತಾ ಅತಿಥಿಗಳನ್ನು ಪರಿಚಯಿಸಿದರು.

ಜಿತೋ ಲೇಡಿಜ ವಿಂಗ ಅಧ್ಯಕ್ಷೆ ಮಾಯಾ ಜೈನ , ಯುಥ ವಿಂಗ ಅಧ್ಯಕ್ಷ ದೀಪಕ ಸುಬೇದಾರ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು. ಜಿತೋ ಕಾರ್ಯದರ್ಶಿ ಅಶೋಕ ಕಠಾರಿಯಾ ವಂದಿಸಿದರು.

# ನಿರಾತಂಕ’ವಾಗಿ ಆಟವಾಡುವ ಭರವಸೆ ನೀಡುತ್ತಿರುವ ರಮ್ಮಿ ಸರ್ಕಲ್

ಹುಬ್ಬಳ್ಳಿ : ಮುಕ್ತವಾಗಿ ಬಳಕೆದಾರರಿಗೆ ಸುರಕ್ಷಿತವಾದ ಮತ್ತುಜವಾಬ್ದಾರಿಯುತ ಗೇಮಿಂಗ್ ಇರುವ ವಾತಾವರಣವನ್ನು ಪೋಷಿಸುವ ತನ್ನ ಬದ್ಧತೆಗೆ ತಕ್ಕಂತೆ ಭಾರತದ ಅತ್ಯಂತ ಹೆಚ್ಚಿನ ಬಳಕೆದಾರರ ಕೇಂದ್ರೀ ಕೃತವಾದ, ವೈಜ್ಞಾನಿಕ ಮತ್ತು ನವೀನ ಆನ್‌ಲೈನ್ ಸ್ಕಿಲ್ ಗೇಮಿಂಗ್ ವೇದಿಕೆಯಾದ ಗೇಮ್ಸ್ 24*7 ಈಗ ತನ್ನ ಉತ್ಪನ್ನವಾದ ರಮ್ಮಿ ಸರ್ಕಲ್ ವೇದಿಕೆಗಾಗಿ ‘ಕೇಲೊ ಬೇಫಿಕರ್, ಜೀತೊರಮ್ಮಿ ಸರ್ಕಲ್ ಪಾರ್’(ನಿರಾತಂಕವಾಗಿ ಆಟವಾಡಿ, ರಮ್ಮಿ ಸರ್ಕಲ್‌ನಲ್ಲಿ ಸಮಾನ ಗೆಲುವು ದಾಖಲಿಸಿ). ಆನ್‌ಲೈನ್‌ಗೇಮಿಂಗ್‌ಕ್ಷೇತ್ರಕ್ಕೆ 2023 ಗಮನಾರ್ಹ ವರ್ಷವಾಗಿತ್ತು. ನ್ಯಾಯಸಮ್ಮತವಾದ ಸ್ವದೇಶಿ ಗೇಮಿಂಗ್ ವೇದಿಕೆಗಳಿಗೆ ಹೆಚ್ಚಿನ ಸ್ಪಷ್ಟತೆ ಈ ವರ್ಷದಲ್ಲಿ ಲಭಿಸಿತ್ತು.ಬೆಳವಣಿಗೆಗೆ ತಮ್ಮ ಸಾಮರ್ಥ್ಯವನ್ನು ಅರ್ಥ ಮಾಡಿಕೊಳ್ಳಲು ಇದು ವೇದಿಕೆಯನ್ನು ಸಜ್ಜುಗೊಳಿಸಿದೆ.

ಇದು ಭಾರತದ ಡಿಜಿಟಲ್ ಆರ್ಥಿಕತೆಗೆ ಮೌಲ್ಯವನ್ನು ಸೃಷ್ಟಿಸಿದೆಯಲ್ಲದೆ, ಈ ತಂತ್ರಜ್ಞಾನ ಚಾಲಿತ ಮನರಂಜನಾ ಮಾದರಿಗಳಲ್ಲಿ ನವೀನತೆಗೆ ಚಾಲನೆ ನೀಡಲು ಮಾರ್ಗಸೂಚಿಯನ್ನು ಸೃಷ್ಟಿಸಿದೆ. ಗ್ರಾಹಕರು ಅಧಿಕೃತ ಸ್ಕಿಲ್ ಗೇಮಿಂಗ್ ವೇದಿಕೆಗಳಲ್ಲಿ ಭಾಗವಹಿಸುವುದರ ಲಾಭಗಳನ್ನು ಕುರಿತು ಇದು ಒತ್ತು ನೀಡುತ್ತದೆ. ಜೊತೆಗೆ ಈ ಕುರಿತ ತಪ್ಪು ಕಲ್ಪನೆಗಳನ್ನು ಇಲ್ಲವಾಗಿಸಲು ಹಾಗೂ ಜಾಗೃತಿ ಮೂಡಿಸಲು ನೆರವು ನೀಡುತ್ತದೆ. ಅಲ್ಲದೆ, ಆಟವಾಡುವ ಜನರು ಮಾಹಿತಿಪೂರ್ಣ ಆಯ್ಕೆಗಳನ್ನು ಮಾಡಲು ಇದು ಅವಕಾಶ ಮಾಡಿಕೊಡುತ್ತದೆ.




ಈ ಹಿನ್ನೆಲೆಯಲ್ಲಿ ‘ಕೇಲೊ ಬೇಫಿಕರ್, ಜೀತೊರಮ್ಮಿ ಸರ್ಕಲ್ ಪಾರ್’(ನಿರಾತಂಕವಾಗಿ ಆಟವಾಡಿ, ರಮ್ಮಿ ಸರ್ಕಲ್‌ನಲ್ಲಿ ಸಮಾನ ಗೆಲುವು ದಾಖಲಿಸಿ) ಅಭಿಯಾನವು ಕಾನೂನು ಸಮ್ಮತವಾದ ಗೇಮಿಂಗ್ ವೇದಿಕೆಯೊಂದಿಗೆ ಕೆಲಸ ಮಾಡುವುದರ ಲಾಭಗಳನ್ನು ಕುರಿತುಆಟಗಾರರಿಗೆ ನೆನಪು ಮೂಡಿಸುವಗುರಿ ಹೊಂದಿದೆ.

ಸಾಮಾನ್ಯವಾಗಿ ಕೇಳಲಾಗುವ ಬಳಕೆದಾರರ ಕಾಳಜಿ ಕುರಿತು ಇದು ಗಮನಹರಿಸುತ್ತದೆ. ಮನರಂಜನಾಪೂರ್ಣ ಮಾದರಿಯಲ್ಲಿಇರುವ ಈ ಪ್ರಚಾರ ಅಭಿಯಾನದಲ್ಲಿ ಬಾಲಿವುಡ್ ಸೂಪರ್ ಸ್ಟಾರ್ಆದ ಹೃತಿಕ್‌ರೋಷನ್ ಅವರು ಭಾಗವಹಿಸುತ್ತಿದ್ದಾರೆ. ಈ ಅಭಿಯಾನವನ್ನು ಭಾರತದ ಎಲ್ಲೆಡೆ ಆರಂಭಿಸಲಾಗುತ್ತಿದ್ದು, ಹಿಂದಿ, ಕನ್ನಡ ಮತ್ತು ತಮಿಳು ಭಾಷೆಗಳಲ್ಲಿ ಕೈಗೊಳ್ಳಲಾಗುತ್ತಿದೆ. ಇದರಿಂದ ವೈವಿಧ್ಯಪೂರ್ಣ ಭೌಗೋಳಿಕ ಪ್ರದೇಶಗಳ ಮತ್ತು ವಿವಿಧ ಭಾಷೆ ಹಿನ್ನೆಲೆ ಹೊಂದಿರುವ ಹೆಚ್ಚಿನ ಸಂಖ್ಯೆಯ ಆಟಗಾರರನ್ನು ತಲುಪುವುದರ ಜೊತೆಗೆ ಅವರನ್ನು ಪ್ರತಿಧ್ವನಿಸುವ ಖಾತ್ರಿ ಲಭಿಸಲಿದೆ.ಇ–ಗೇಮಿಂಗ್ ಫೆಡರೇಶನ್‌ನ ನೀತಿ ಸಂಹಿತೆಗೆರಮ್ಮಿಸರ್ಕಲ್‌ಬದ್ಧವಾಗಿ ರುತ್ತದೆಯಲ್ಲದೇ, ನ್ಯಾಯಯುತ ಆಟ ಮತ್ತು ನೈತಿಕಗೇಮಿಂಗ್ ಅಭ್ಯಾಸಗಳಿಗೆ ಮಾನದಂಡಸ್ಥಾಪಿಸುತ್ತದೆ. ಸುರಕ್ಷಿತ ಮತ್ತು ಪಾರದರ್ಶಕ ಆಟದ ಕ್ಷೇತ್ರದಖಾತ್ರಿ ನೀಡುತ್ತದೆ.

ಇದು ಉನ್ನತ ಮಟ್ಟದ ಡಿಜಿಟಲ್ ಭದ್ರತೆ ಮತ್ತು ವಂಚನೆ–ವಿರೋಧಿ ಟೂಲ್‌ಗಳನ್ನು ಬಳಸುತ್ತದೆಯಲ್ಲದೇ ಇದರೊಂದಿಗೆ ಬಳಕೆದಾರರಿಗೆ ಸುರಕ್ಷಿತ ಹಣಪಾವತಿ ಆಯ್ಕೆಗಳನ್ನು ಪೂರೈಸುವುದರೊಂದಿಗೆ ಅವರ ವೈಯಕ್ತಿಕ ವಿವರಗಳು ಮತ್ತು ವಹಿವಾಟುಗಳನ್ನು ಸಂರಕ್ಷಿಸುತ್ತದೆ.

# ದಿ.26 ರಂದು 'ಮರಣ ಮೃದಂಗ' ನಾಟಕ

ಬೆಳಗಾವಿ 23– ಇದೇ ದಿನಾಂಕ 26 ಶುಕ್ರವಾರದಂದು ಸಾಯಂಕಾಲ 6–30 ಕ್ಕೆ 'ಮರಣ ಮೃದಂಗ' ನಾಟಕ ನಗರದ ಶೇಖ ಆಸ್ಪತ್ರೆಯ ಎದುರಿಗಿರುವ ರಾಮದೇವ ಹೊಟೇಲ ಹತ್ತಿರ ಇರುವ ಕನ್ನಡ ಭವನದಲ್ಲಿ ಪ್ರದರ್ಶನಗೊಳ್ಳಲಿದೆ.

ಇದೊಂದು ರಾಜಕೀಯ ವಿಡಂಬನಾತ್ಮಕ ನಾಟಕ. ರಾಜೇಂದ್ರ ಕಾರಂತರ ರಚನೆಯಾಗಿದ್ದು ಡಾ. ಅರವಿಂದ ಕುಲಕರ್ಣಿ ಇವರ ನಿರ್ದೇಶನವಿದೆ. ಶ್ರೀಪತಿ ಮಂಜನಬೈಲು ಮತ್ತು ಅಂತರಾ ಕುಲಕರ್ಣಿ ಸಂಗೀತವಿದೆ ರಂಗಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಕಾರ್ಯದರ್ಶಿ ಪ್ರಸಾದ ಕಾರಜೋಳ ತಿಳಿಸಿದ್ದಾರೆ.

# ಇಂದು "ಇಳಿಹೊತ್ತು" ಕೃತಿ ಲೋಕಾರ್ಪಣೆ

ಬೆಳಗಾವಿ: ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘ ಹಾಗೂ ಮಾಲಗತ್ತಿ ಪ್ರಕಾಶನದ ವತಿಯಿಂದ ಅನಿತಾ ಮಾಲಗತ್ತಿ ಅವರ " ಇಳಿಹೊತ್ತು" ಕೃತಿ ಲೋಕಾರ್ಪಣೆ ಕಾರ್ಯಕ್ರಮ ಬುಧವಾರ 24 ರಂದು ಹಮ್ಮಿಕೊಳ್ಳಲಾಗಿದೆ.

ರಂಗ ಸಂಪದ ಅಧ್ಯಕ್ಷರಾದ ಅರವಿಂದ ಕುಲಕರ್ಣಿ ಅವರು ಕೃತಿ ಲೋಕಾರ್ಪಣೆಗೊಳಿಸುವರು. ಜಯಶೀಲಾ ಬ್ಯಾಕೋಡ್ ಅಧ್ಯಕ್ಷತೆ ವಹಿಸಲಿದ್ದಾರೆ. ಹಿರಿಯ ಸಾಹಿತಿ ಡಾ.ಭಾರತಿ ಮಠದ ಪುಸ್ತಕ ಪರಿಚಯಿಸುವರು. ಕ.ಸಾ.ಪ ಅಧ್ಯಕ್ಷರಾದ ಮಂಗಲಾ ಮೆಡಗುಡ್ಡ ಅವರು ಅತಿಥಿಗಳಾಗಿ ಆಗಮಿಸಲಿದ್ದಾರೆ.

ಲಿಂಗಾಯತ ಮಹಿಳಾ ಸಮಾಜದ ಸಂಸ್ಥಾಪಕರಾದ ಶೈಲಗಾ ಭಿಂಗೆ , ಶಶಿಕಲಾ ಬಸವರಾಜ, ಆಶಾ ಯಮಕನಮರಡಿ ಅವರು ಆಗಮಿಸಲಿದ್ದಾರೆ ಎಂದು ಜಯಶೀಲಾ ಬ್ಯಾಕೋಡ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.24 ರಂದು “ಚಾಲನಾ ಸಿಬ್ಬಂದಿಗಳ ದಿನ”

ಬೆಳಗಾವಿ: ಸಾರಿಗೆ ಕ್ಷೇತ್ರದಲ್ಲಿ ಪ್ರಯಾಣಿಕರಿಗೆ ಸುರಕ್ಷಿತ ಪ್ರಯಾಣದ ಸೌಲಭ್ಯ ಒದಗಿಸಿ ದೇಶದ ಸಮಗ್ರ ಅಭಿವೃದ್ಧಿಯಲ್ಲಿ ಚಾಲನಾ ಸಿಬ್ಬಂದಿಗಳ ಸಮುದಾಯವು ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಚಾಲನಾ ಸಿಬ್ಬಂದಿಗಳು ವಿವಿಧ ಮಾದರಿಯ ವಾಹನಗಳನ್ನು ನಿರ್ವಹಿಸಿ ರಸ್ತೆ ಸಾರಿಗೆ ಕ್ಷೇತ್ರದಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ.

ಆದ್ದರಿಂದ ರಸ್ತೆ ಸುರಕ್ಷತಾ ಉಪಕ್ರಮದ ಭಾಗವಾಗಿ ಜನವರಿ 24 ನೇ ತಾರೀಖು “ಚಾಲನಾ ಸಿಬ್ಬಂದಿಗಳ ದಿನ” ವನ್ನು ಸಂಸ್ಥೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ.

ದೀರ್ಘ ಕರ್ತವ್ಯದ ಅವಧಿ, ಅನಿರೀಕ್ಷಿತ ಘಟನೆಗಳು, ಕ್ರಮಿಸಬೇಕಾದ ದೂರ, ಸುರಕ್ಷಿತ ಚಾಲನೆ ಮುಂತಾದವುಗಳನ್ನು ಪರಿಗಣಿಸಿದಾಗ ಚಾಲನಾ ಸಿಬ್ಬಂದಿಗಳ ಕೆಲಸ ಸವಾಲಿನ ಕೆಲಸವಾಗಿದೆ. ಈ ಪರಿಸ್ಥಿತಿಯಲ್ಲಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವ ವಿದ್ಯಾರ್ಥಿಗಳು, ಪ್ರಯಾಣಿಕರು, ಪ್ರವಾಸಿಗರು ಮುಂತಾದವರನ್ನು ಅವರ ಸ್ಥಳಗಳಿಗೆ ಸುರಕ್ಷಿತವಾಗಿ ತಲುಪಿಸುವ ಜವಾಬ್ದಾರಿ ಇರುತ್ತದೆ.

ಶಕ್ತಿ ಯೋಜನೆ ಜಾರಿಯಾದ ನಂತರದ ಅವಧಿಯಲ್ಲಿ ಬಸ್ ನಿಲ್ದಾಣಗಳಲ್ಲಿ ಜನದಟ್ಟಣೆ ಹೆಚ್ಚಾಗಿದ್ದು, ಚಾಲಕರು ಸುರಕ್ಷಿತ ಚಾಲನೆ ಮಾಡುವುದು, ಅದರಂತೆ ನಿರ್ವಾಹಕರು ಜನದಟ್ಟಣೆ ನಿಭಾಯಿಸುವುದು, ಅವಘಡ/ಅಪಘಾತಗಳು ಸಂಭವಿಸದಂತೆ ಜಾಗ್ರತೆ ವಹಿಸಿ ಕರ್ತವ್ಯ ನಿರ್ವಹಿಸಿ ಪ್ರಯಾಣಿಕರ ಸುರಕ್ಷೆ ಮತ್ತು ತೃಪ್ತಿಗೆ ಅವರು ಜವಾಬ್ದಾರರಾಗಿದ್ದಾರೆ.

ಇಂತಹ ಸವಾಲಿನ ಮತ್ತು ಅತ್ಯಂತ ಜವಾಬ್ದಾರಿಯುತ ಕೆಲಸದಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಚಾಲನಾ ಸಿಬ್ಬಂದಿಗಳನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ. ಪ್ರಯಾಣಿಕರ ಸುರಕ್ಷತೆಯೇ ಸಂಸ್ಥೆಯ ಪ್ರಥಮ ಆದ್ಯತೆಯಾಗಿರುತ್ತದೆ. ಪ್ರಯಾಣಿಕರಿಗೆ ಉತ್ತಮ ಸಾರಿಗೆ ಸೌಲಭ್ಯವನ್ನು ನೀಡುವಲ್ಲಿ ಚಾಲನಾ ಸಿಬ್ಬಂದಿಗಳ ಸ್ವಯಂ ಪ್ರೇರಣೆ ಮತ್ತು ಸಂಸ್ಥೆಗೆ ಅವರ ಸಮರ್ಪಣೆ ಕಾರಣವಾಗಿದೆ.

ಉತ್ತಮ ಸಾರಿಗೆ ಸೌಲಭ್ಯವನ್ನು ನೀಡುವಲ್ಲಿ ಚಾಲನಾ ಸಿಬ್ಬಂದಿಗಳ ಶ್ರಮ, ಚಾಲನಾ ಚಾಣಾಕ್ಷತನ, ರಸ್ತೆ ಸುರಕ್ಷತಾ ಕ್ರಮಗಳ ಅನುಸರಣೆಯಿಂದ ಸಂಸ್ಥೆಯಲ್ಲಿ ಅವರ ಸೇವೆ ಶ್ಲಾಘನೀಯವಾಗಿದೆ ವಾ.ಕ.ರ.ಸಾ.ಸಂ ಬೆಳಗಾವಿ ವಿಭಾಗ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಹೇಳಿದ್ದಾರೆ.

# ಜ.26 ರಂದು ಗಣರಾಜ್ಯೋತ್ಸವ ಆಚರಣೆ

ಬೆಳಗಾವಿ: ಜಿಲ್ಲಾಡಳಿತ ವತಿಯಿಂದ ಜಿಲ್ಲಾ ಕ್ರೀಡಾಂಗನದಲ್ಲಿ ಜ.26 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಗಣರಾಜ್ಯೋತ್ಸವ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಧ್ವಜಾರೋಹಣವನ್ನು ನೆರವೇರಿಸಲಿದ್ದಾರೆ.

ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲ ಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಆರ್ ಹೆಬ್ಬಾಳಕರ, ಸರ್ಕಾರದ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–2 ನವದೆಹಲಿ ಪ್ರಕಾಶ ಹುಕ್ಕೇರಿ ಗೌರವಾನ್ವಿತ ಅತಿಥಿಗಳಾಗಿ ಆಗಮಿಸಿಲಿದ್ದಾರೆ. ಸಂಸದರಾದ ಅನಂತಕುಮಾರ ಹೆಗಡೆ, ಈರಣ್ಣ ಕಡಾಡಿ, ಅಣ್ಣಾಸಾಹೇಬ ಜೊಲ್ಲೆ, ಮಂಗಲ ಸುರೇಶ ಅಂಗಡಿ ಭಾಗವಹಿಸಲಿದ್ದಾರೆ. ಪ್ರಾದೇಶಿಕ ಆಯುಕ್ತರಾದ ಸಂಜಯ ಬಿ ಶೆಟ್ಟೆಣ್ಣವರ, ಬೆಳಗಾವಿ ನಗರದ ಪೊಲೀಸ್ ಆಯುಕ್ತರಾದ ಎಸ್. ಎನ್.ಸಿದ್ದರಾಮಪ್ಪ, ಉತ್ತರ ವಲಯದ ಆರಕ್ಷಕ ಮಹಾನಿರೀಕ್ಷಕರಾದ ವಿಕಾಶ್ ಕುಮಾರ ವಿಕಾಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಎಸ್. ಗುಳೇದ, ಜಿಲ್ಲಾ ಪಂಚಾಯತ ಸಿಇಓ ರಾಹುಲ್ ಶಿಂಧೆ ಉಪಸ್ಥಿತರಿರುವರು. ಅದೇ ರೀತಿಯಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಹುತಾತ್ಮ ದಿನದ ಸ್ಮರಣಾರ್ಥವಾಗಿ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಸಂಜೆ 5 ಗಂಟೆಗೆ ಶಾಲಾ ಮಕ್ಕಳಿಂದ ಕಾರ್ಯಕ್ರಮಗಳು ನಡೆಯಲಿವೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳಗಾವಿ ಜಿಲ್ಲೆಯ ಬೈಲಹೊಂಗಲ ಉಪವಿಭಾಗದಲ್ಲಿನ ಲೇವಾದೇವಿ। ಗಿರವಿ। ಹಣಕಾಸು ಸಂಸ್ಥೆಗಳ ಮಾಲೀಕರ ಗಮನಕ್ಕೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಬೈಲಹೊಂಗಲ ಉಪವಿಭಾಗದಲ್ಲಿನ ಲೇವಾದೇವಿ।ಗಿರವಿ।ಹಣಕಾಸು ಸಂಸ್ಥೆಗಳ ಮಾಲೀಕರು ಏ 1, 2024 ರಿಂದ ಮಾ 31, 2029 ರವರೆಗಿನ ಐದು(5) ವರ್ಷಗಳ ಅವಧಿಗಾಗಿ ತಮ್ಮ ಲೇವಾದೇವಿ, ಗಿರವಿ, ಹಣಕಾಸು ಸಂಸ್ಥೆಗಳ ಅನುಮತಿ ಪತ್ರದ ನವೀಕರಣಕ್ಕಾಗಿ ಶುಲ್ಕ 5000 ರೂಪಾಯಿಗಳನ್ನು ಜ.31, 2024 ಒಳಗಾಗಿ ಕೆ–2 ಮೂಲಕ ಸರ್ಕಾರಕ್ಕೆ ಭರಣ ಮಾಡಿ ಅವಶ್ಯಕ ದಾಖಲಾತಿಗಳೊಂದಿಗೆ ದ್ವಿಪ್ರತಿಗಳಲ್ಲಿ ಸಲ್ಲಿಸಬೇಕು.

ಸದರಿ ಅವಧಿಯೊಳಗಾಗಿ ಶುಲ್ಕ ಭರಣ ಮಾಡಲು ವಿಫಲವಾದಲ್ಲಿ ದುಪ್ಪಟ್ಟು ಶುಲ್ಕ ಭರಣ ಮಾಡಬೇಕಾಗುವುದು ಎಂದು ಬೈಲಹೊಂಗಲ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಶಾಹೀನ್ ಅಖ್ತರ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VOL. 04 ISSUE. 299 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089